ಬೀದರ | ಕಲಬುರಗಿ | ಯಾದಗಿರಿ | ರಾಯಚೂರು | ಕೊಪ್ಪಳ | ಬಳ್ಳಾರಿ | ಬಾಗಲಕೋಟೆ | ವಿಜಯಪುರ ಜಿಲ್ಲೆಗಳಲ್ಲಿ ಏಕಕಾಲಕ್ಕೆ ಪ್ರಸಾರ Postal Reg. No. BDR/054/2026-2027 Email: mallammanudi@gmail.com E-paper: www.mallammanudi.in

# ಮಲ್ಲಮ್ಮ ನುಡಿ

ಸತ್ಯಮೇವ ಜಯತೆ

ಪ್ರಾದೇಶಿಕ ಕನ್ನಡ ದಿನಪತ್ರಿಕೆ

ಸಂಪಾದಕರು: ರಮೇಶರೆಡ್ಡಿ | 9448 604450

Mallammanudi Regional News Paper | Editor: Ramesh Reddy | RNI NO:KARKAN/2011/48371

VOLUME - 13 ಸಂಪುಟ-13 | ISSUE - 57 ಸಂಚಿಕೆ- 57 | PAGE- 8 ಪುಟ-8 | ಭಾನುವಾರ 06.04.2025 | RS.2/- ಬೆಲೆ 2/-

## ಭೀಕರ ಅಪಘಾತಕ್ಕೆ ಐವರ ದುರಂತ ಸಾವು



ಮಲ್ಲಮನುಡಿವಾರ್ತೆಕಲಬುರಗಿ,ಏ.5: ನಿಂತಿದ್ದ ಲಾರಿಗೆ ಟೆಂಪೋ ಟ್ರ್ಯಾವೆಲರ್ ಡಿಕ್ಕಿ ಹೊಡೆದ ಪರಿಣಾಮ ಐವರು ಸ್ಥಳದಲ್ಲೇ ಸಾವನ್ನಪ್ಪಿದ ಘಟನೆ ಜೇವರ್ಗಿ ಸಮೀಪದ ನೆಲೋಗಿ ಕ್ರಾಸ್ ಬಳಿ ಇಂದು ನಸುಕಿನ ಜಾವ ನಡೆದಿದೆ. ಘಟನೆಯಲ್ಲಿ 11 ಮಂದಿ ಗಾಯಗೊಂಡಿದ್ದಾರೆ.

ಬಾಗಲಕೋಟೆಯ ನವನಗರದ ಮಾಲನ್ (52), ವಾಜೀದ್ (2), ಮೆಹಬೂಬ್ ಬಿ (53), ಮೆಹಬೂಬ್ (29) ಹಾಗೂ ಪ್ರಿಯಾಂಕಾ (13) ಸಾವನ್ನಪ್ಪಿದ್ದು, 11 ಮಂದಿ ಗಾಯಗೊಂಡಿದ್ದಾರೆ.

(2ನೇ ಪುಟ ನೋಡಿ)

## ಡೀಸೆಲ್ ದರ ಏರಿಕೆ ಖಂಡಿಸಿ ಏ. 15 ರಿಂದ ಲಾರಿ ಮುಷ್ಕರ

ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು, ಏ.5: ಡೀಸೆಲ್ ದರ ಏರಿಕೆ ಖಂಡಿಸಿ ಇದೇ ಏಪ್ರಿಲ್ 15 ರಿಂದ ಅನಿರ್ದಿಷ್ಟಾವಧಿ ಲಾರಿ ಮುಷ್ಕರ ನಡೆಸಲಾಗುವುದು ಎಂದು ಲಾರಿ ಮಾಲೀಕರ ಸಂಘದ ಅಧ್ಯಕ್ಷ ಷಣ್ಮುಗಪ್ಪ ತಿಳಿಸಿದರು.

ರಾಜ್ಯಾದ್ಯಂತ ಎಲ್ಲಾ ಲಾರಿಗಳ ಸಂಚಾರ ಸ್ಥಗಿತಗೊಳ್ಳಲಿದ್ದು, ಗೂಡ್ಸ್ ವಾಹನಗಳು, ಏರ್‌ಪೋರ್ಟ್ ಟ್ಯಾಕ್ಸಿಗಳೂ ಸಹ ಸಂಪೂರ್ಣ ಬಂದ್ ಆಗಲಿದೆ ಎಂದು ಹೇಳಿದರು.

ಲಾರ ಮಾಲೀಕರ ಸಂಘದ ಸಭೆಯ ನಂತರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಡಿಸೇಲ್ ಬೆಲೆ 7 ತಿಂಗಳಲ್ಲಿ 5 ರೂ ಏರಿಕೆ-ಯಾಗಿದೆ. ಇದು ಲಾರಿ ಸೇರಿದಂತೆ ವಾಣಿಜ್ಯ ವಾಹನಗಳ ಮಾಲೀಕರು




ನೇಣು ಹಾಕಿಕೊಳ್ಳುವ ಸ್ಥಿತಿ ಬಂದಿದೆ. ಏನಾದರೂ ಫ್ರೀ ಕೊಡಲಿ, ಆದರೆ ಹೊಟ್ಟೆ ಮೇಲೆ ಹೊಡೆದು ದರ ಏರಿಕೆ ಮಾಡಿರುವುದಕ್ಕೆ ತೀವ್ರ ಆಕ್ಷೇಪ ವ್ಯಕ್ತಪಡಿಸಿದರು. ಫಿಟ್ನೆಸ್ ಫೀಸ್, ಬಾರ್ಡರ್ ಚೆಕ್ ಪೋಸ್ಟ್, ಡಿಸೇಲ್ ದರ ಸೇರಿದಂತೆ ಪ್ರಮುಖ ಬೇಡಿಕೆಗಳನ್ನ ಈಡೇರಿಕೆಗೆ ಒತ್ತಾಯಿಸಿ ಮುಷ್ಕರಕ್ಕೆ ಕರೆ ನೀಡಲಾಗಿದೆ. 14ನೇ ತಾರೀಖು ಅಂಬೇಡ್ಕರ್ ಜಯಂತಿ ರಾತ್ರಿಯಿಂದಲೇ ಹೋರಾಟ ಶುರು ಮಾಡಲಿದ್ದೇವೆ. ಬೇಡಿಕೆ ಈಡೇರುವವರೆಗೆ ಕರ್ನಾಟಕದ ಒಳಗೆ ಯಾರೂ ಬರಲ್ಲ. ಇದಕ್ಕೆ ಪೆಟ್ರೋಲ್ ಮಾಲೀಕರು ಬೆಂಬಲ ಕೊಟ್ಟಿದ್ದಾರೆ ಎಂದರು.

ಏರ್ಪೋರ್ಟ್ ಟ್ಯಾಕ್ಸಿ, ಜಲ್ಲಿ ಮರಳು, ಸೇರಿದಂತೆ ಗೂಡ್ಸ್ ವಾಹನಗಳು ಬಂದ್ ಆಗಲಿವೆ. ಎಲ್ಲಾ ಬಗೆ-ಯ ವಾಣಿಜ್ಯ ವಾಹನಗಳ 9 ಲಕ್ಷ ವಾಹನಗಳು ಸ್ಥಗಿತಗೊಳ್ಳಲಿವೆ ಎಂದು ತಿಳಿಸಿದರು.

ಏಪ್ರಿಲ್ 14ರ ವರೆಗೆ ಸರ್ಕಾರಕ್ಕೆ

(2ನೇ ಪುಟ ನೋಡಿ)

## ಡಾ.ಬಾಬುಜಗಜೀವನ್‌ರಾಂ ರಿಗೆ ಪುಷ್ಪನಮನ ಸಲ್ಲಿಸಿದ ಮಾಜಿ ಸಚಿವ ಪಾಟೀಲ್



ಮಲ್ಲಮ್ಮನುಡಿವಾರ್ತೆಹುಮನಾಬಾದ: ಏ.05 :ಭಾರತದ ಮಾಜಿ ಉಪ ಪ್ರಧಾನಿ ಮಾಜಿ ರಕ್ಷಣಾ ಸಚಿವರು ಕೃಷಿ ಸಚಿವರು ಹಾಗೂ ಹಸಿರು ಕ್ರಾಂತಿಯ ಹರಿಕಾರರಾದ ಸನ್ಮಾನ್ಯ ಶ್ರೀ ಡಾ ॥ ಬಾಬು ಜಗಜೀವನ್ ರಾಮ್ ರವರ 118 ನೇ ಜಯಂತೋತ್ಸವದ ಪ್ರಯುಕ್ತ ಹುಮನಾಬಾದ ಪಟ್ಟಣದಲ್ಲಿನ ಬಾಬು ಜಗಜೀವನರಾಮ ವೃತ್ತಕ್ಕೆ ಮಾನ್ಯ ಮಾಜಿ ಸಚಿವರಾದ ಸನ್ಮಾನ್ಯ ಶ್ರೀ ರಾಜಶೇಖರ ಬಿ ಪಾಟೀಲ್ ರವರು ತೆರಳಿ ಪುಷ್ಪನಮನ ಸರ್ಮಪಿಸಿ ನುಡಿನಮನ ಸಲ್ಲಿಸಿದರು. ಈ ಸಂಧರ್ಬದಲ್ಲಿ

ಪ್ರಭು ತಾಳಮಡಗಿ , ಅಫ್ಸರ್ ಮಿಯಾ , ಲಕ್ಷ್ಮಣರಾವ ಬುಳ್ಳಾ , ಜೈರಾಜ ವೈದ್ಯ, ಅಶೋಕ ಕಟ್ಟಿ , ಬಾಬು ಟೈಗರ್ ಮಲ್ಲಿಕಾರ್ಜುನ ಮಹೇಂದ್ರಕರ್ , ಅಶೋಕ ವರ್ಮಾ ಲಕ್ಷ್ಮಿಪುತ್ರ ಮಾಳಗೆ, ಸುರೇಶ ಘಾಂಗ್ರೆ, ಉಮೇಶ ಜಮಗಿ , ಧರಮ ರೆಡ್ಡಿ , ಮಲ್ಲಿಕಾರ್ಜುನ ಶರ್ಮಾ, ವೈಜಿನಾಥ ಘಾಂಗೆ, ವಿಜಯಕುಮಾರ ನಾತೆ, ಬಾಬು ಜಗಜೀವನ ರಾಮ ಉತ್ಸವ ಸಮಿತಿಯ ಅಧ್ಯಕ್ಷರು ಅನಂತ , ಶ್ರೀನಿವಾಸ ಕಟ್ಟಿಮನಿ , ಜೀವನ ಪೂಲೆ, ರಾಹುಲ ಉದ್ದಾ , ಸಂತೋಷ ಅತಿವಾಳ ನಿಲಕಂಠ ಶೆಟ್ಟಿ, ರವರು ಸೇರಿದಂತೆ ಪ್ರಮುಖರು ಉಪಸ್ಥಿತರಿದ್ದರು.

## ಗ್ರಾ.ಪಂ.ಸದಸ್ಯನ ಬರ್ಬರ ಹತ್ಯೆ: ಇಬ್ಬರು ಆರೋಪಿಗಳ ಸೆರೆ



ಮಲ್ಲಮ್ಮ ನುಡಿ ವಾರ್ತೆ ಬೀದರ್, ಏ.5: ನಗರದ ಅಲಿಯಾಬಾದ್‌ವರ್ತುಲ ರಸ್ತೆಯಲ್ಲಿರುವ ಎಸ್. ಕೆ.ದಾಬಾವೊಂದರಲ್ಲಿ ಗ್ರಾಮ ಪಂಚಾಯಿತಿ ಸದಸ್ಯ ಹಾಗೂ ರಿಯಲ್ ಎಸ್ಟೇಟ್ ಉದ್ಯಮಿಯೊಬ್ಬರಿಗೆ ಭೀಕರ ಹತ್ಯೆ ಮಾಡಲಾಗಿದೆ. ಮೃತನಿಗೆ ವೈಜಿನಾಥ್ ದತ್ತಾತ್ರಿ (49) ಎಂದು ಗುರುತಿಸಲಾಗಿದೆ. ಹತ್ಯೆ ಮಾಡಿದ ಇಬ್ಬರು ಆರೋಪಿಗಳನ್ನು ಪೋಲಿಸರು ಬಂಧಿಸಿದ್ದಾರೆ. ಬಂಧಿತರನ್ನು ನಾವದಗಿರಿ ಗ್ರಾಮದ ಜಾನ್ ಬೆಂಡಿ ಮತ್ತು ಸ್ನೇಹಿತ ಉಮೇಶ್ ಎಂದು ಗುರುತಿಸಲಾಗಿದೆ.

ತಾಲ್ಲೂಕಿನ ಹೊನ್ನಿಕೆರೆ ನಿವಾಸಿಯಾಗಿರುವ ವೈಜನಾಥ್ ದತ್ತಾತ್ರಿ ಅವರು ಗ್ರಾಮ ಪಂಚಾಯಿತಿಯಲ್ಲಿ ಕಳೆದ ಮೂರು ಅವಧಿಯಲ್ಲಿ ಸದಸ್ಯರಾಗಿ ಕಾರ್ಯನಿರ್ವಹಿಸುತ್ತಿದ್ದರು. ಗ್ರಾಮದ ಜನರಿಗೆ ಏನೇ ಸಮಸ್ಯೆ ಬಂದರೂ ಕೂಡಾ ಮನೆಯ ಮಗನ ಹಾಗೆ ಅವರ ಸಮಸ್ಯೆಯನ್ನ ಬಗೆಹರಿಸುತ್ತಿದ್ದ. ಗ್ರಾಮದಲ್ಲಿ ಅಭಿವೃದ್ಧಿಪರ ಕೆಲಸಗಳನ್ನು ಮಾಡುತ್ತಿದ್ದ ವೈಜಿನಾಥ್ ದತ್ತಾತ್ರಿ. ನಿನ್ನೆ ಶುಕ್ರವಾರ ಮಧ್ಯಾಹ್ನ ಸ್ನೇಹಿತರೊಂದಿಗೆ ನಗರದ ಸಮೀಪದ ದಾಬಾಕ್ಕೆ ಊಟಕ್ಕೆಂದು ತೆರಳಿದ್ದ. ಊಟ ಮುಗಿಸಿ ಕೈತೊಳೆಯಲೆಂದು ಹೊರಗಡೆ ಹೋದ ವೈಜಿನಾಥ್ ಊಟ ಮುಗಿಸಿ ಇನ್ನೇನು ಹೊರಡಬೇಕು ಎನ್ನುವಷ್ಟರಲ್ಲಿ ದುಷ್ಕರ್ಮಿಗಳು ಆತನ ಮೇಲೆರಗಿ ಚಾಕುವಿನಿಂದ ಹಲ್ಲೆ ಮಾಡಿದ್ದರು.

ಚಾಕುವಿನಿಂದ ಇರಿಯಲು ಮುಂದಾಗುತ್ತಿದ್ದಂತೆ ತಪ್ಪಿಸಿಕೊಂಡು

(2ನೇ ಪುಟ ನೋಡಿ)

## ಹಸಿರು ಕ್ರಾಂತಿಯ ಮೂಲಕ ದೇಶದ ಜನತೆಯ ಹಸಿವು ನೀಗಿಸಿದ ಶ್ರೇಷ್ಠ ನಾಯಕ ಡಾ. ಬಾಬು ಜಗಜೀವನರಾಂ:ಸಚಿವ ಖಂಡ್ರೆ



ಮಲ್ಲಮ್ಮನುಡಿ ವಾರ್ತೆ ಬೀದರ: ಏ.5: ಹಸಿರು ಕ್ರಾಂತಿಯ ಹರಿಕಾರರಾದ ಡಾ. ಬಾಬು ಜಗಜೀವನರಾಂ ಅವರು ಹಸಿರು ಕ್ರಾಂತಿಯ ಮೂಲಕ ದೇಶದ ಜನತೆಯ ಹಸಿವು ನೀಗಿಸಿದ್ದಾರೆ ಎಂದು ಸಚಿವ ಈಶ್ವರ ಬಿ.ಖಂಡ್ರೆ ತಿಳಿಸಿದರು.

ಅವರು ಶನಿವಾರದಂದು ನಗರದ ಪೂಜ್ಯಶ್ರೀ ಚನ್ನಬಸವ ಪಟ್ಟದೇವರು ರಂಗಮಂದಿರದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ನಗರ ಸಭೆ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ಸಮಾಜ ಕಲ್ಯಾಣ ಇಲಾಖೆ ಇವರ ಸಂಯುಕ್ತಾಶ್ರಯದಲ್ಲಿ ಹಮ್ಮಿಕೊಂಡಿದ್ದ ಮಾಜಿ ಉಪ ಪ್ರಧಾನಿ ಡಾ. ಬಾಬು ಜಗಜೀವನರಾಮ್ ಅವರ 118ನೇ ಜಯಂತ್ಯುತ್ಸವ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.

ರಾಷ್ಟ್ರನಾಯಕರಾದ ಡಾ.ಬಾಬು ಜಗಜೀವನರಾಮ್ ಅವರು ಶೋಷಿತ ವರ್ಗದ ಮತ್ತು ಕಾರ್ಮಿಕರ ಧ್ವನಿಯಾಗಿ, ದಕ್ಷ ಆಡಳಿತಗಾರರಾಗಿ, ಸ್ವಾತಂತ್ರ್ಯ ಹೋರಾಟಗಾರಾಗಿ, ಸಮಾಜ ಸುಧಾರಕರಾಗಿ, ಅಸ್ಪೃಶ್ಯತೆ, ಅಸಮಾನತೆ ನಿವಾರಣೆಗಾಗಿ ಹೋರಾಡಿದ ಮಹಾನ್ ನಾಯಕರಾಗಿದ್ದರು. ದೇಶದಲ್ಲಿ ಬರಗಾಲ ಬಂದಾಗ ಜನರು ಹಸಿವಿನಿಂದ ನರಳುತ್ತಿರುವ ಸಮಯದಲ್ಲಿ ಹಸಿರು ಕ್ರಾಂತಿಯ ಮೂಲಕ ದೇಶದಲ್ಲಿ ಆಹಾರ ಧಾನ್ಯಗಳ ಉತ್ಪಾದನೆಗೆ ಹೆಚ್ಚಿನ ಆದ್ಯತೆ ನೀಡುವ ಮೂಲಕ ದೇಶದ ಜನರು ಎದುರಿಸುತ್ತಿರುವ ಆಹಾರ ಸಮಸ್ಯೆಯನ್ನು ಬಗೆಹರಿಸಿದರು. ಇವರು ಕೇಂದ್ರ ಆಹಾರ, ಕೃಷಿ ಮತ್ತು ರಕ್ಷಣಾ ಸಚಿವರಾಗಿ ದೇಶದ ಅಭಿವೃದ್ಧಿಗೆ ಮಹತ್ವದಾದ ಕೊಡುಗೆ ನೀಡಿದ್ದಾರೆ. 1971ರಲ್ಲಿ ಇಂದಿರಾ

(2ನೇ ಪುಟ ನೋಡಿ)

## ವಕ್ಫ್ ತಿದ್ದುಪಡಿ ಮಸೂದೆ ಹೋರಾಟ: ಸುಪ್ರೀಂ ಕೋರ್ಟ್ ಮೆಟ್ಟಿಲೇರಿದ ಕಾಂಗ್ರೆಸ್ ಮತ್ತು ಎಐಎಂಐಎಂ

ಮಲ್ಲಮ್ಮನುಡಿವಾರ್ತೆನವದೆಹಲಿ:ಏ.5: ವಕ್ಫ್ (ತಿದ್ದುಪಡಿ) ಮಸೂದೆ 2025ಕ್ಕೆ ಸಂಸತ್ತಿನ ಅನುಮೋದನೆ ಪಡೆದ ಕೆಲವೇ ಗಂಟೆಗಳ ನಂತರ, ಕಾಂಗ್ರೆಸ್ ಮತ್ತು ಆಲ್ ಇಂಡಿಯಾ ಮಜ್ಲಿಸ್-ಎ-ಇತ್ತೆಹಾದುಲ್ ಮುಸ್ಲಿಮೀನ್ (ಂಖಒಋಒ) ಸುಪ್ರೀಂ ಕೋರ್ಟ್‌ಗೆ ಅರ್ಜಿ ಸಲ್ಲಿಸಿದೆ. ಅರ್ಜಿಯಲ್ಲಿ ವಕ್ಫ್ ತಿದ್ದುಪಡಿ ಮಸೂದೆಯ ಸಿಂಧುತ್ವವನ್ನು ಪ್ರಶ್ನಿಸಿ, ಇದು ಸಾಂವಿಧಾನಿಕ ನಿಬಂಧನೆಗಳನ್ನು ಉಲ್ಲಂಘಿಸುತ್ತದೆ ಎಂದು ವಾದಿಸಿದೆ.

ತಮಿಳುನಾಡು ಮುಖ್ಯಮಂತ್ರಿ ಎಂ ಕೆ ಸ್ಟಾಲಿನ್ ವಿಧಾನಸಭೆಯಲ್ಲಿ ಮಸೂದೆಯನ್ನು ಪ್ರಶ್ನಿಸಲು ದ್ರಾವಿಡ ಮುನ್ನೇತ್ರ ಕಳಗಂ ಸುಪ್ರೀಂ ಕೋರ್ಟ್‌ಗೆ ಅರ್ಜಿ ಸಲ್ಲಿಸುವುದಾಗಿ ನಿನ್ನೆ ಘೋಷಿಸಿತ್ತು. ಇದಾದ ಒಂದು ದಿನದ ನಂತರ ಈ ಬೆಳವಣಿಗೆ ನಡೆದಿದೆ.

ಕಾಂಗ್ರೆಸ್ ಸಂಸದ ಮೊಹಮ್ಮದ್ ಜಾವೇದ್ ಸುಪ್ರೀಂ ಕೋರ್ಟ್ ಗೆ ಸಲ್ಲಿಸಿರುವ ತಮ್ಮ ಅರ್ಜಿಯಲ್ಲಿ, ಮಸೂದೆಯು ವಕ್ಫ್ ಆಸ್ತಿಗಳು ಮತ್ತು ಅವುಗಳ ನಿರ್ವಹಣೆಯ ಮೇಲೆ ಅನಿಯಂತ್ರಿತ ನಿರ್ಬಂಧಗಳನ್ನು ವಿಧಿಸುತ್ತದೆ, ಇದು ಮುಸ್ಲಿಂ ಸಮುದಾಯದ ಧಾರ್ಮಿಕ ಸ್ವಾಯತ್ತತೆಯನ್ನು ದುರ್ಬಲಗೊಳಿಸುತ್ತದೆ ಎಂದು ವಾದಿಸಿದ್ದಾರೆ. ಪ್ರಸ್ತಾವಿತ ಕಾನೂನು ಇತರ ಧಾರ್ಮಿಕ ದತ್ತಿಗಳ ಆಡಳಿತದಲ್ಲಿ ಇಲ್ಲದ ನಿರ್ಬಂಧಗಳನ್ನು ವಿಧಿಸುವ ಮೂಲಕ ಮುಸ್ಲಿಮರ ವಿರುದ್ಧ ತಾರತಮ್ಯ ಮಾಡುತ್ತದೆ ಎಂದು ಹೇಳಲಾಗಿದೆ.

ಬಿಹಾರದ ಕಿಶನ್‌ಗಂಜ್‌ನ ಲೋಕಸಭಾ ಸಂಸದ ಜಾವೇದ್, ಮಸೂದೆಯನ್ನು ಕೂಲಂಕಷವಾಗಿ ಪರಿಶೀಲಿಸಿದ ಜಂಟಿ ಸಂಸದೀಯ ಸಮಿತಿಯ ಸದಸ್ಯರೂ ಆಗಿದ್ದರು.

ಲೋಕಸಭೆಯು ಮಸೂದೆಯನ್ನು 288:232 ಮತಗಳಿಂದ ಅಂಗೀಕರಿಸಿದರೆ; ರಾಜ್ಯಸಭೆಯಲ್ಲಿ ಅದು 128:95 ಮತಗಳಿಂದ ಅಂಗೀಕರಿಸಲ್ಪಟ್ಟಿತು. ಎರಡೂ ಸದನಗಳು 12 ಗಂಟೆಗಳ ನಿರಂತರ ಚರ್ಚೆ, ವಾಗ್ವಾದಗಳನ್ನು ಕಂಡವು. ಮಸೂದೆಯು ಕಾನೂನಾಗುವ ಮೊದಲು ರಾಷ್ಟ್ರಪತಿಗಳ ಅನುಮೋದನೆಗೆ ಹೋಗಲಿದೆ.

ಸುಪ್ರೀಂ ಕೋರ್ಟ್‌ನಲ್ಲಿ ಮಸೂದೆಯನ್ನು ಪ್ರಶ್ನಿಸಿ, ಎಐ-ಎಂಐಎಂ ಅಧ್ಯಕ್ಷ ಅಸಾದುದ್ದೀನ್ ಓವೈಸಿ ತಮ್ಮ ಅರ್ಜಿಯಲ್ಲಿ ವಕ್ಫ್‌ಗಳಿಗೆ ಹಾಗೂ ಹಿಂದೂ, ಜೈನ ಮತ್ತು ಸಿಖ್ ಧಾರ್ಮಿಕ ಮತ್ತು ದತ್ತಿ

(2ನೇ ಪುಟ ನೋಡಿ)

## ಡಾ.ಬಾಬು ಜಗಜೀವನರಾಂ ಅವರ ಆಡಳಿತ ವೈಖರಿ, ಸಾಮಾಜಿಕ ಚಿಂತನೆಗಳನ್ನು ಅಳವಡಿಸಿಕೊಳ್ಳಬೇಕು : ಮುಖ್ಯಮಂತ್ರಿ ಸಿದ್ದರಾಮಯ್ಯ

ಬೆಂಗಳೂರು, ಏ.05: ದೇಶ ಕಂಡ ಅಪ್ರತಿಮ ನಾಯಕ ಡಾ.ಬಾಬು ಜಗಜೀವನರಾಂ ಅವರ ಆಡಳಿತ ವೈಖರಿ, ಸಾಮಾಜಿಕ ಚಿಂತನೆಗಳನ್ನು ಅಳವಡಿಸಿಕೊಳ್ಳುವುದೆ ನಾವು ಅವರಿಗೆ ಸಲ್ಲಿಸುವ ಗೌರವ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದರು.

ಸಮಾಜ ಕಲ್ಯಾಣ ಇಲಾಖೆಯ ವತಿಯಿಂದ ಇಂದು ವಿಧಾನಸೌಧದ ಭವ್ಯ ಮೆಟ್ಟಿಲುಗಳ ಮೇಲೆ ಹಮ್ಮಿಕೊಳ್ಳಲಾಗಿದ್ದ ಬಾಬು ಜಗಜೀವನ ರಾಂ ರವರ 118ನೇ ಜನ್ಮ ದಿನಾಚರಣೆ ಹಾಗೂ



ಡಾ.ಬಾಬು ಜಗಜೀವನರಾಂ ಪ್ರಶಸ್ತಿ ಪ್ರದಾನ ಸಮಾರಂಭದಲ್ಲಿ ಭಾರತ ಸಂವಿಧಾನದ ಪೀಠಿಕೆಯನ್ನು ವಾಚಿಸುವುದರ ಮೂಲಕ ಕಾರ್ಯಕ್ರಮಕ್ಕೆ ಚಾಲನೆ ನೀಡಿದ ಮುಖ್ಯಮಂತ್ರಿಗಳು, 2023, 2024 ಮತ್ತು 2025ನೇ ಸಾಲಿಗೆ ಡಾ.ಬಾಬು ಜಗಜೀವನರಾಂ ಅವರ ಪ್ರಶಸ್ತಿಗೆ ಭಾಜನರಾಗಿರುವ 15 ಜನರಿಗೆ ತಲಾ 5 ಲಕ್ಷ ರೂ ನಗದು ಹಾಗೂ 20 ಗ್ರಾಂ ಚಿನ್ನದ ಪದಕ ಹಾಗೂ ಪ್ರಶಸ್ತಿ ಪ್ರದಾನ ಮಾಡಿ ಮಾತನಾಡಿದರು.

ಜಗಜೀವನರಾಂ ಅವರು ಸಾಮಾಜಿಕ ನ್ಯಾಯ ಎಲ್ಲಾ ಶೋಷಿತ ವರ್ಗದವರಿಗೂ ಸಿಗಬೇಕು ಎನ್ನುವ

(2ನೇ ಪುಟ ನೋಡಿ)

## ಡಾ.ಬಾಬು ಜಗಜೀವನ ರಾಂ ಅವರು ವಿಶ್ವ ಕಂಡ ಅಪರೂಪದ ನಾಯಕರು : ಜಿಲ್ಲಾ ಉಸ್ತುವಾರಿ ಸಚಿವ ದರ್ಶನಾಪುರ



ಮಲ್ಲಮ್ಮನುಡಿವಾರ್ತೆಯಾದಗಿರಿ:ಏ:5: ಹಸಿರು ಕ್ರಾಂತಿ ಹರಿಕಾರ ಡಾ.ಬಾಬು ಜಗಜೀವನ ರಾಂ ಅವರು ವಿಶ್ವಕಂಡ ಅಪರೂಪದ ನಾಯಕರಾಗಿದ್ದಾರೆ ಎಂದು ಸಾರ್ವಜನಿಕ ಉದ್ದಿಮೆಗಳ ಖಾತೆ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಶ್ರೀ ಶರಣಬಸಪ್ಪ ದರ್ಶನಾಪುರ ಅವರು ಹೇಳಿದರು.

ನಗರದ ಡಾ. ಬಾಬು ಜಗಜೀವನ ರಾಮ್ ಭವನದಲ್ಲಿ ಇಂದು ಜಿಲ್ಲಾಡಳಿತ, ಜಿಲ್ಲಾ ಪಂಚಾಯತ, ಸಮಾಜ ಕಲ್ಯಾಣ ಇಲಾಖೆ, ನಗರಸಭೆ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ಡಾ. ಬಾಬು ಜಗಜೀವನ್‌ರಾಮ್ ಜಯಂತ್ಯೋತ್ಸವ ಸಮಿತಿ ಸಂಯುಕ್ತಾಶ್ರಯದಲ್ಲಿ ಹಮ್ಮಿಕೊಂಡಿದ್ದ ಮಾಜಿ ಉಪ ಪ್ರಧಾನಿ ಡಾ.ಬಾಬು ಜಗಜೀವರಾಮ್ ಅವರ 118ನೇ ಜಯಂತ್ಯೋತ್ಸವ ಕಾರ್ಯಕ್ರಮ ಉದ್ಘಾಟಿಸಿ, ಅವರ ಭಾವಚಿತ್ರಕ್ಕೆ ಮಾರ್ಲಾಪಣೆ ಮಾಡಿ ಗೌರವ ಅರ್ಪಿಸಿ ಅವರು ಮಾತನಾಡಿದರು.

ದೇಶಕ್ಕೆ ಆಹಾರ ಕೊರತೆಯಾದಾಗ ಹಸಿರು ಕ್ರಾಂತಿ ಮೂಲಕ ವಿವಿಧ ಆಹಾರ ಧಾನ್ಯಗಳ ಉತ್ಪಾದನೆಗೆ ಹೆಚ್ಚಿನ ಒತ್ತು ನೀಡುವ ಮೂಲಕ ಬಡಜನರ ಆಹಾರದ ಸಮಸ್ಯೆ ನಿವಾರಣೆ ಮಾಡಿದ ಮಹಾನ್

(2ನೇ ಪುಟ ನೋಡಿ)

## ಹಾಲಿನ ಪ್ರೋತ್ಸಾಹ ಧನ ಬಿಡುಗಡೆಗೆ ನಿಖಿಲ್ ಕುಮಾರಸ್ವಾಮಿ ಆಗ್ರಹ

ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು:ಏ.5: ಹಾಲಿನ ದರವನ್ನು ನಾಲ್ಕೈದು ಬಾರಿ ಏರಿಕೆ ಮಾಡಿದರೂ ರೈತರಿಗೆ ಮಾತ್ರ ಪ್ರೋತ್ಸಾಹ ಧನವನ್ನ ಇನ್ನೂ ನೀಡಿಲ್ಲ. ಸರ್ಕಾರ ಕೂಡಲೇ ಹೈನುಗಾರರಿಗೆ ಹಾಲಿನ ಪ್ರೋತ್ಸಾಹ ಧನ ಬಿಡುಗಡೆ ಮಾಡಬೇಕು ಎಂದು ಜೆಡಿಎಸ್ ಯುವ ಘಟಕದ ಅಧ್ಯಕ್ಷ ನಿಖಿಲ್ ಕುಮಾರಸ್ವಾಮಿ ಆಗ್ರಹಿಸಿದ್ದಾರೆ.

ಈ ಬಗ್ಗೆ ಎಕ್ಸ್‌ನಲ್ಲಿ ಪೋಸ್ಟ್ ಮಾಡಿರುವ ಅವರು, ನಾವು ಕೃಷಿಕರ ಪರ, ರೈತರ ಪರ ಎಂದು ಕೊಚ್ಚಿಕೊಳ್ಳುವ ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದು ಎರಡು ವರ್ಷಗಳೇ ಆಗಿದೆ. ಇನ್ನೂ ಪ್ರಚಾರ ಜಾಸ್ತಿ, ಕೆಲಸ ಕಮ್ಮಿ. ಇದು ಸರ್ಕಾರದ ನೀತಿ ಎಂದು ಕಿಡಿಕಾರಿದ್ದಾರೆ.

ಕಳೆದ ಆರು ತಿಂಗಳಿಂದ ರಾಜ್ಯದ ರೈತರ ಹಾಲಿನ ಪ್ರೋತ್ಸಾಹ ಧನ ಬಿಡುಗಡೆ ಮಾಡದ ರೈತ ವಿರೋಧಿ ಕಾಂಗ್ರೆಸ್ ಸರ್ಕಾರ ಬರೋಬ್ಬರಿ



656 ಕೋಟಿ ರೂ. ಹಣವನ್ನು ಬಾಕಿ ಉಳಿಸಿಕೊಂಡಿದೆ. ಇದು ರೈತರ ಬಗ್ಗೆ ಈ ಸರ್ಕಾರಕ್ಕಿರುವ ಅಸಡ್ಡೆತನವನ್ನು ಸಾಕ್ಷಿಯಾಗಿದೆ ಎಂದು ಅವರು ಅಕ್ರೋಶ ಹೊರಹಾಕಿದ್ದಾರೆ.

ನಿಮ್ಮ ಬಣ್ಣ ಬಣ್ಣದ ಮಾತುಗಳಿಂದ ಅನ್ನದಾತರಿಗೆ ಯಾವುದೇ ಉಪಯೋಗವಿಲ್ಲ. ಹಾಲಿನ ದರವನ್ನು ನಾಲ್ಕೈದು ಬಾರಿ ಏರಿಕೆ ಮಾಡಿದರೂ ರೈತರಿಗೆ ಮಾತ್ರ ಪ್ರೋತ್ಸಾಹ ಧನವನ್ನು ನೀಡಿಲ್ಲ. ಕೂಡಲೇ ಹೈನುಗಾರರಿಗೆ ಹಾಲಿನ ಪ್ರೋತ್ಸಾಹ ಧನ ಬಿಡುಗಡೆ ಮಾಡಿ ಎಂದು ಅವರು ಆಗ್ರಹಿಸಿದ್ದಾರೆ.

## ಆರ್‌ಡಿಪಿಆರ್ ವಿವಿ ಕುಲಪತಿ ನೇಮಕ ವಿಳಂಬ: ಸರ್ಕಾರಕ್ಕೆ ಗವರ್ನರ್ ತರಾಟೆ

ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು:ಏ.5: ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ವಿಶ್ವವಿದ್ಯಾಲಯಕ್ಕೆ ಕುಲಪತಿ ನೇಮಕ ವಿಚಾರದಲ್ಲಿ ರಾಜ್ಯಪಾಲ ಥಾವರ್‌ಚಂದ್ ಗೆಹ್ಲೊ?ಟ್ ಸರಕಾರದ ವಿರುದ್ಧ ಸಿಡಿಮಿಡಿಗೊಂಡಿದ್ದು, ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ನೇರವಾಗಿ ಪತ್ರ ಬರೆದು ಆಕ್ರೋಶ ಹೊರಹಾಕಿದ್ದಾರೆ.

ಗದಗದ ಗ್ರಾಮೀಣಾಭಿವೃದ್ಧಿ ವಿವಿ ಕುಲಪತಿ ನೇಮಕ ಅಧಿಕಾರವನ್ನು ರಾಜ್ಯಪಾಲರ ಬದಲಿಗೆ ಸಿಎಂಗೆ

(2ನೇ ಪುಟ ನೋಡಿ)

## ಒಂದನೇ ಪುಟದಿಂದ

# ಐವರ ದುರಂತ ಸಾವು

ಮೃತರ ಪೈಕಿ ನಾಲ್ವರು ಒಂದೇ ಕುಟುಂಬದವರಾಗಿದ್ದು, ಪ್ರಿಯಾಂಕಾ ಈ ಕುಟುಂಬದ ನೆರೆಮನೆಯ ಬಾಲಕಿ ಎಂದು ಪೊಲೀಸರು ತಿಳಿಸಿದ್ದಾರೆ.ಬಾಗಲಕೋಟೆಯಿಂದ ಟೆಂಪೋ ಟ್ರ್ಯಾವೆಲರ್ ಮೂಲಕ 31 ಮಂದಿ ಕಲಬುರಗಿಯ ಖಾಜಾ ಬಂದಾ ನವಾಜ್ ದರ್ಶನಕ್ಕೆ ಆಗಮಿಸುತ್ತಿದ್ದರು. ನೆಲೋಗಿ ಕ್ರಾಸ್ ಬಳಿ ಬರುತ್ತಿದ್ದಂತೆಯೇ ಎದುರಿಗೆ ನಿಂತಿದ್ದ ಲಾರಿಗೆ ಟೆಂಪೋ ಟ್ರ್ಯಾವಲರ್ ಅಪ್ಪಳಿಸಿದೆ. ಅಪಘಾತದ ತೀವ್ರತೆಗೆ ಮುಂಭಾಗದಲ್ಲಿ ಕುಳಿತಿದ್ದ ಐವರು ಕ್ಷಣಾರ್ಧದಲ್ಲಿ ಸಾವಿಗೀಡಾಗಿದ್ದಾರೆ.ಒಂದೇ ಕುಟುಂಬದ 30 ಸದಸ್ಯರು ಟೆಂಪೋ ಟ್ರ್ಯಾವೆಲರ್ ನಲ್ಲಿ ಪ್ರವಾಸಕ್ಕೆ ಹೊರಟಿದ್ದ ವೇಳೆ ಈ ದುರಂತ ಸಂಭವಿಸಿದೆ. ಗಾಯಗೊಂಡವರ ಪೈಕಿ ಹಲವರ ಸ್ಥಿತಿ ಗಂಭೀರವಾಗಿದ್ದು, ಜಿಮ್ಸ್ ಆಸ್ಪತ್ರೆಗೆ ದಾಖಲಿಸಲಾಗಿದೆ. ಮಿನಿ ಬಸ್ ಟಯರ್ ಪಂಚರ್ ಆಗಿ ಚಾಲಕನ ನಿಯಂತ್ರಣ ತಪ್ಪಿ ನಿಂತಿದ್ದ ಲಾರಿಗೆ ಡಿಕ್ಕಿ ಹೊಡೆಯಿತು ಎಂದು ಗಾಯಾಳು ಮಾಹಿತಿ ನೀಡಿದ್ದಾರೆ. ಜೇವರ್ಗಿ ತಾಲೂಕಿನ ನೆಲೋಗಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ಶಾಸಕ ಅಜಯಸಿಂಗ್ ಭೇಟಿ; ಸಾಂತ್ವನ

ಮ್ಯಾಕ್ಸಿಕ್ಯಾಬ್ ಅಪಘಾತದಲ್ಲಿ ಗಾಯಗೊಂಡವರನ್ನು ಜೇವರ್ಗಿಯ ಸರ್ಕಾರಿ ಆಸ್ಪತ್ರೆಗೆ ದಾಖಲಿಸಲಾಗಿದ್ದು, ಈ ಪೈಕಿ ಇಬ್ಬರ ಸ್ಥಿತಿ ಗಂಭೀರವಾಗಿದೆ.ಇನ್ನು ದುರಂತದ ಕುರಿತು ಮಾಹಿತಿ ಅರಿಯುತ್ತಿದ್ದಂತೆಯೇ ಜೇವರ್ಗಿ ಶಾಸಕ ಡಾ.ಅಜಯಸಿಂಗ್ ಆಸ್ಪತ್ರೆಗೆ ಭೇಟಿ ಕೊಟ್ಟು ಗಾಯಾಳುಗಳ ಚಿಕಿತ್ಸೆಯ ಕುರಿತು ಮಾಹಿತಿ ಪಡೆದು, ಕುಟುಂಬದ ಸದಸ್ಯರಿಗೆ ಸಾಂತ್ವನ ಹೇಳಿದರು.ನೆರೆಮನೆ ಹುಡುಗಿ ಪ್ರಿಯಾಂಕಾ:ಜೇವರ್ಗಿ ತಾಲೂಕಿನ ನೆಲೋಗಿ ಕ್ರಾಸ್ ಬಳಿ ಟೆಂಪೋ ಟ್ರ್ಯಾವಲರ್ ಅಪಘಾತಕ್ಕೆ ಒಳಗಾಗಿ ಮೃತಪಟ್ಟವರ ಪೈಕಿ ನಾಲ್ವರು ಮುಸ್ಲಿಂ ಸಮುದಾಯಕ್ಕೆ ಸೇರಿದ್ದರೆ, ಜೊತೆಯಲ್ಲಿದ್ದ ಹಿಂದೂ ಸಮುದಾಯದ ಪ್ರಿಯಾಂಕಾ ಸಹ ಸಾವಿಗೀಡಾಗಿದ್ದಾಳೆ.

ಕಲಬುರಗಿಯ ಖಾಜಾ ಬಂದಾ ನವಾಜ್ ದರ್ಗಾ ದರ್ಶನಕ್ಕೆ ಹೊರಟಿದ್ದ ಮುಸ್ಲಿಂ ಕುಟುಂಬದೊಂದಿಗೆ ಪ್ರಿಯಾಂಕಾ ಅನ್ಯೋನ್ಯವಾಗಿ ಇರುತ್ತಿದ್ದ ಹಿನ್ನೆಲೆಯಲ್ಲಿ ಆಕೆಯನ್ನೂ ಸಹ ತಮ್ಮೊಂದಿಗೆ ದರ್ಗಾ ದರ್ಶನಕ್ಕೆ ಕರೆ ತಂದಿದ್ದರು ಎನ್ನಲಾಗಿದೆ. ಆದರೆ, ಮಾರ್ಗಮಧ್ಯೆ ನಡೆದ ದುರಂತದಲ್ಲಿ ಪ್ರಿಯಾಂಕಾ ಸಹ ವಿಧಿಯಾಟಕ್ಕೆ ಬಲಿಯಾಗಿದ್ದಾಳೆ.

# ಶ್ರೇಷ್ಠ ನಾಯಕ ಡಾ. ಬಾಬು ಜಗಜೀವನರಾಂ:ಸಚಿವ ಖಂಡ್ರೆ

ಗಾಂಧಿ ಸರ್ಕಾರದಲ್ಲಿ ರಕ್ಷಣಾ ಸಚಿವರಾಗಿದ್ದಾಗ ಪಾಕಿಸ್ತಾನ ಮೇಲೆ ಯುದ್ಧ ಮಾಡಿ ಬಾಂಗ್ಲಾದೇಶದ ಸೃಷ್ಟಿಗೆ ಕಾರಣರಾದರು. ಅವರು ತೋರಿರುವ ಮಾರ್ಗದಲ್ಲಿ ನಾವೆಲ್ಲರೂ ಸಾಗಬೇಕು, ತತ್ವಾದರ್ಶಗಳನ್ನು ಪಾಲಿಸಬೇಕು ಎಂದು ಸಚಿವರು ತಿಳಿಸಿದರು.

ಕಲಬುರಗಿ ವಲಯ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಜಂಟಿ ನಿರ್ದೇಶಕರಾದ ಬಸವರಾಜ ಹೂಗಾರ ತಮ್ಮ ಅತಿಥಿ ಉಪನ್ಯಾಸದಲ್ಲಿ ಮಾತನಾಡಿ, ಡಾ. ಬಾಬು ಜಗಜೀವನರಾಮ್ ಅವರು ಜೀವನ ಮತ್ತು ಸಾಧನೆ ಬಗ್ಗೆ ತಿಳಿಸಿದರು.

ಕಾರ್ಯಕ್ರಮಕ್ಕೂ ಮುಂಚಿತವಾಗಿ ಬೆಳಿಗ್ಗೆ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ ಅವರು ಡಾ.ಬಾಬು ಜಗಜೀವನರಾಮ್ ಅವರ ಭಾವಚಿತ್ರಕ್ಕೆ ಪುಷ್ಪ ನಮನ ಸಲ್ಲಿಸಿ ನಂತರ ಮೆರವಣಿಗೆಗೆ ಚಾಲನೆ ನೀಡಿದರು.

ಕರ್ನಾಟಕ ಕಾಲೇಜ ಹತ್ತಿರ ಇರುವ ಡಾ.ಬಾಬು ಜಗಜೀವನರಾಮ್ ಮೂರ್ತಿಗೆ ಸಚಿವ ಈಶ್ವರ ಬಿ. ಖಂಡ್ರೆ ಪೂಜೆ ಸಲ್ಲಿಸಿ, ಪುಷ್ಪ ನಮನ ಮಾಡಿದರು. ಈ ಸಂದರ್ಭದಲ್ಲಿ ವಿಧಾನ ಪರಿಷತ್ ಸದಸ್ಯರಾದ ಶಶೀಲ ಜಿ.ನಮೋಶಿ, ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಗಿರೀಶ ದೀಲಿಪ್ ಬದೋಲೆ, ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಚಂದ್ರಕಾಂತ ಪೂಜಾರ ಸೇರಿದಂತೆ ಇತರರು ಉಪಸ್ಥಿತರಿದ್ದರು.

ಇದೇ ಸಂದರ್ಭದಲ್ಲಿ ಸಚಿವರು ಸರ್ವೆ ನಂ. 61, ಚಿಕ್ಕಪೇಟ್ ಬೀದರದಲ್ಲಿ ಹಸಿರು ಕ್ರಾಂತಿಯ ಹರಿಕಾರ ಡಾ.ಬಾಬು ಜಗಜೀವನ ರಾಮ್ ಭವನದ ಭೂಮಿ ಪೂಜೆ ಮತ್ತು ಶಂಕುಸ್ಥಾಪನೆ ನೆರವೇರಿಸಿದರು.

ಈ ಕಾರ್ಯಕ್ರಮದಲ್ಲಿ ಬೀದರ ದಕ್ಷಿಣ ಕ್ಷೇತ್ರದ ಶಾಸಕರಾದ ಡಾ.ಶೈಲೇಂದ್ರ ಕೆ.ಬೆಲ್ದಾಳೆ, ಬೀದರ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ಬಸವರಾಜ ಜಾಬಶೆಟ್ಟಿ, ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳಾದ ಡಾ. ಗಿರೀಶ ಬದೋಲೆ, ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿಗಳಾದ ಚಂದ್ರಕಾಂತ ಪೂಜಾರ, ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕರಾದ ಸಿಂಧು ರಘು ಎಚ್.ಎಸ್ ಮತ್ತು ಸಮಾಜದ ಮುಖಂಡರಾದ ಚಂದ್ರಕಾಂತ ಹಿಪ್ಪಳಗಾಂವ, ರಾಜು ಕಡ್ಯಾಳ, ಫರ್ನಾಂಡಿಸ್ ಹಿಪ್ಪಳಗಾಂವ, ಶಾಮಣ್ಣ ಬಂಬಳಗಿ, ವಿಜಯಕುಮಾರ ಸೊನಾರೆ, ರೋಹಿದಾಸ ಘೋಡೆ, ಪೀಟರ ಚಿಟಗುಪ್ಪಾ ಸೇರಿದಂತೆ ಇತರೆ ಸಮಾಜದ ಮುಖಂಡರು ಉಪಸ್ಥಿತರಿದ್ದರು.

# ಚಿಂತನೆಗಳನ್ನು ಅಳವಡಿಸಿಕೊಳ್ಳಬೇಕು : ಮುಖ್ಯಮಂತ್ರಿ ಸಿದ್ದರಾಮಯ್ಯ

ನಿಟ್ಟಿನಲ್ಲಿ ಶ್ರಮಿಸಿದ್ದಾರೆ. ಸಾಮಾಜಿಕ ನ್ಯಾಯ ಅಂದರೆ ಎಲ್ಲರಿಗೂ ಸಮಾನ ಅವಕಾಶ ಸಿಗಬೇಕು. ಎಲ್ಲಿಯವರೆಗೆ ಅಸಮಾನತೆ ಇರುತ್ತದೆಯೊ ಅಲ್ಲಿಯವರೆಗೆ ಮೀಸಲಾತಿ ಇರಬೇಕು ಎಂದು ಪ್ರತಿಪಾಸಿದವರು. ಜಾತಿ ವ್ಯವಸ್ಥೆ ಹೋಗದೆ, ಸಮಾನತೆ ಸಿಗದೆ ಮೀಸಲಾತಿ ಬೇಡ ಎಂದರೆ ಹೇಗೆ? ಎಲ್ಲರಿಗೂ ಮೀಸಲಾತಿ ಸಿಕ್ಕಿರುವುದರಿಂದ ಮೀಸಲಾತಿ ವಿರೋಧಿಸುವವರು ಯಾರು ಇಲ್ಲ ಎಂದರು.

ಡಾ.ಬಾಬು ಜಗಜೀವನ ರಾಂ ಅವರು ಸಾಮಾಜಿಕವಾಗಿ, ಆರ್ಥಿಕವಾಗಿ, ಶೈಕ್ಷಣಿಕವಾಗಿ ಮುಂದೆ ಬರಬೇಕು ಎಂದರೆ ಎಲ್ಲರಿಗೂ ಶಿಕ್ಷಣ ಸಿಗಬೇಕು. ಶಿಕ್ಷಣ ಉದ್ಯೋಗಕ್ಕಾಗಿ ಮಾತ್ರ ಅಲ್ಲ. ಶಿಕ್ಷಣ ಸಿಕ್ಕಾಗ ಸ್ವಪ್ರತಿಭೆ ವಿಕಾಸವಾಗುವುದರ ಜೊತೆಗೆ ಸ್ವಾವಲಂಬಿಯಾಗಿ, ಸ್ವಾಭಿಮಾನದಿಂದ ಬದುಕಬಹುದು ಎಂದರು.

ಡಾ.ಬಾಬು ಜಗಜೀವನರಾಂ ಅವರು ಕೃಷಿ ಸಚಿವರಾಗಿ ಆಹಾರದ ಮಹತ್ವವನ್ನು ಅರಿತಿದ್ದರಿಂದ ಹಸಿರು ಕ್ರಾಂತಿಯಿಂದ ಎಲ್ಲರಿಗೂ ಆಹಾರ ಸಿಗುವಂತೆ ಮಾಡಲು ಪ್ರಮುಖ ಪಾತ್ರ ವಹಿಸಿದ್ದರು. ದೀರ್ಘಕಾಲ ಕೇಂದ್ರ ಸರ್ಕಾರದಲ್ಲಿ ಮಂತ್ರಿಯಾಗಿ, ದಕ್ಷ ಆಡಳಿತಗಾರರಾಗಿ ಹೆಜ್ಜೆ ಗುರುತು ಬಿಟ್ಟು ಹೋಗಿದ್ದಾರೆ. ದೇಶದ ಪ್ರಗತಿಯಲ್ಲಿ ನಮ್ಮ ಪ್ರಗತಿ. ಅದರ ಉದ್ಧಾರದಲ್ಲೇ ನಮ್ಮ ಉದ್ಧಾರ ಎಂದು ನುಡಿದ ಅವರು ಅಪ್ರತಿಮ ದೇಶಭಕ್ತರಾಗಿದ್ದರು. ಅಲ್ಲದೆ ಸಂವಿಧಾನದ ವಿಧಿ ವಿಧಾನಗಳು ಜಾರಿಯಗಲು ಪ್ರಯತ್ನ ಪಟ್ಟರು ಎಂದರು.

ಡಾ.ಬಿ.ಆರ್.ಅಂಬೇಡ್ಕರ್ ಅವರು ಸಂವಿಧಾನ ಜಾರಿ ಮಾಡಿ ಸಮಾಜದಲ್ಲಿ ಅಸಮಾನತೆ ಹೋಗಬೇಕು. ದೇಶದಲ್ಲಿ ಸಂಪತ್ತು, ಅಧಿಕಾರ ಹಂಚಿಕೆಯಾಗಬೇಕು ಎಂದು ಬಯಸಿದರು. ಅಸಮಾನತೆ ಎಲ್ಲಿಯವರೆಗೆ ಇರುತ್ತದೆಯೊ ಅಲ್ಲಿಯವರೆಗೆ ಜಾತಿ ವ್ಯವಸ್ಥೆ ಹೋಗಲ್ಲ ಎಂದರು.

ದೀನ–ದಲಿತರನ್ನು ಆರ್ಥಿಕವಾಗಿ ಸಬಲರನ್ನಾಗಿಸುವ ಉದ್ದೇಶದಿಂದ ಅನೇಕ ಯೋಜನೆಗಳನ್ನು ಜಾರಿಗೆ ತರಲಾಗಿದೆ. ಅನ್ನಭಾಗ್ಯ, ಶಕ್ತಿ ಗೃಹಲಕ್ಷ್ಮಿ, ಯುವನಿಧಿ, ಗೃಹ ಜ್ಯೋತಿ ಯೋಜನೆಯನ್ನು ಜಾರಿಗೊಳಿಸಿದೆ. ಅಲ್ಲದೆ ಇಡೀ ದೇಶದಲ್ಲಿಯೆ ನಮ್ಮ ಕರ್ನಾಟಕದಲ್ಲಿ, ತೆಲಂಗಾಣ ಮತ್ತು ಆಂಧ್ರ ಪ್ರದೇಶದಲ್ಲಿ ಮಾತ್ರ ಎಸ್.ಸಿ.ಎಸ್.ಪಿ/ಟಿ.ಎಸ್.ಪಿ ಕಾಯ್ದೆಯನ್ನು ಜಾರಿಗೆ ತರಲಾಗಿದೆ ಎಂದರು.

ಒಳ ಮೀಸಲಾತಿ ಬಗ್ಗೆ ಅನುಮಾನಬೇಡ. ನಾಗಮೋಹನ್ ದಾಸ್ ಅವರ ಅಧ್ಯಕ್ಷತೆಯಲ್ಲಿ ಸಮಿತಿ ರಚನೆ ಮಾಡಲಾಗಿದ್ದು. ಎರಡು ತಿಂಗಳೊಳಗೆ ವರದಿ ನೀಡಲಾಗುವುದು ಎಂದು ತಿಳಿಸಿದ್ದಾರೆ. ವರದಿ ಬಂದ ತಕ್ಷಣ ಯಾರಿಗೂ ಅನ್ಯಾಯವಾಗದಂತೆ ಜಾರಿ ಮಾಡಲಾಗುವುದು. ಸುಪ್ರೀಂ ಕೋರ್ಟ್ ಆದೇಶವನ್ನು ನಾವು ಪಾಲಿಸುತ್ತೇವೆ. ಒಳಮೀಸಲಾತಿ ಆಗುವವರೆಗೆ ಯಾವುದೇ ಹುದ್ದೆಗಳಿಗೆ ನೇಮಕಾತಿ ಪ್ರಕ್ರಿಯೆ ಮಾಡುವುದಿಲ್ಲ ಎಂದರು.

ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ಮಾತನಾಡಿ, ಡಾ.ಬಾಬು ಜಗಜೀವನ ರಾಂ ಹಾಗೂ ಡಾ.ಬಿ.ಆರ್. ಅಂಬೇಡ್ಕರ್ ಅವರು ಒಂದೇ ತಿಂಗಳಿನಲ್ಲಿ ಜನಿಸಿದ್ದು, ಇಡೀ ದೇಶಕ್ಕೆ ಬದಲಾವಣೆಯ ಕ್ರಾಂತಿ ಮಾಡಿ, ರಾಷ್ಟ್ರಕ್ಕೆ ಮಾದರಿಯಾಗಿದ್ದಾರೆ. ಅವರ ಮಾರ್ಗದರ್ಶನದಲ್ಲಿ ನಾವೆಲ್ಲರೂ ನಡೆಯೋಣ. ನಿಮ್ಮ ಜೊತೆ ನಾವಿದ್ದೇವೆ ಎಂದರು.ಪ್ರಾಸ್ತಾವಿಕ ನುಡಿಗಳನ್ನಾಡಿದ ಸಮಾಜ ಕಲ್ಯಾಣ ಇಲಾಖೆ ಸಚಿವ ಡಾ.ಹೆಚ್.ಸಿ. ಮಹದೇವಪ್ಪ ಅವರು, ಮೊದಲನೇ ಬಾರಿಗೆ ವಿಜೃಂಭಣೆಯಾಗಿ, ವರ್ಣರಂಜಿತವಾಗಿ. ಹಸಿರು ಕ್ರಾಂತ್ರಿಯ ಹರಿಕಾರ, ರಾಷ್ಟ್ರನಾಯಕ, ಭಾರತದ ಮಾಜಿ ಉಪಪ್ರಧಾನಿ ಡಾ.ಬಾಬು ಜಗಜೀವನ ರಾಂ ಅವರ 118ನೇ ಜನ್ಮ ದಿನಾಚರಣೆ ಕಾರ್ಯಕ್ರಮವನ್ನು ಆಯೋಜಿಸಲಾಗಿದೆ ಎಂದರು.

ಡಾ.ಬಾಬು ಜಗಜೀವನ ರಾಂ ಅವರು ಸಣ್ಣ ವಯಸ್ಸಿನಲ್ಲಿಯೆ ಅಸ್ಪೃಶ್ಯತೆಯ ನಿವಾರಣೆಗೆ ಧ್ವನಿ ಎತ್ತಿದರು. ಗಣಿತದಲ್ಲಿ 100 ಕ್ಕೆ 100 ಅಂಕ ಪಡೆದ ಪ್ರತಿಭಾವಂತರು. ನಾಡಿನ ಮೂಲೆ ಮೂಲೆಯಲ್ಲೂ ಅವರು ನಡೆದು ಬಂದ ಹೆಜ್ಜೆ ಗುರುತು ಮೂಡಿಸಿದ್ದಾರೆ. 30 ವರ್ಷ ಕೇಂದ್ರ ಸಚಿವರಾಗಿದ್ದರು. ನಿರಂತರವಾಗಿ ಜನಪರ ಕೆಲಸ ಮಾಡಿದವರು. ಒಂದು ಜಾತಿಗೆ ಸೀಮಿತವಾಗದೆ ಎಲ್ಲಾ ಶೋಷಿತ ವರ್ಗದ ಏಳಿಗೆಗೆ ಶ್ರಮಿಸಿದರು. ಡಾ.ಬಾಬು ಜಗಜೀವನ ರಾಂ ಹಾಗೂ ಡಾ.ಬಿ.ಆರ್. ಅಂಬೇಡ್ಕರ್ ಅವರು ಸೂರ್ಯ ಚಂದ್ರರಂತೆ ಎರಡು ಕಣ್ಣುಗಳಾಗಿ ಕಂಗೊಳಿಸುತ್ತಿದ್ದಾರೆ ಎಂದರು.

ಆಹಾರ ಮತ್ತು ನಾಗರಿಕ ಸರಬರಾಜು ಸಚಿವರಾದ ಕೆ.ಹೆಚ್. ಮುನಿಯಪ್ಪ ಅವರು ಮಾತನಾಡಿ, ಡಾ.ಬಾಬು ಜಗಜೀವನ ರಾಂ ಅವರ ದಕ್ಷತೆ, ತಳ ಸಮುದಾಯಗಳ ಬಗ್ಗೆ ಇದ್ದ ಅವರ ಕಾಳಜಿ ಹಾಗೂ ಆಡಳಿತ ದಕ್ಷತೆಯನ್ನು ಕಂಡು ಮಹಾತ್ಮ ಗಾಂಧೀಜಿಯವರು ಭಾರತದ ಪುಟವಿಟ್ಟ ಬಂಗಾರ ಎಂದು ಸಂಭೋದಿಸಿದ್ದರು ಎಂದರು.

ಒಳಮೀಸಲಾತಿಯನ್ನು ಯಾವುದೇ ಕಾರಣಕ್ಕೂ ವಿಳಂಬ ಮಾಡದೆ ಮುಂದಿನ ದಿನಗಳಲ್ಲಿ ಮುಖ್ಯಮಂತ್ರಿಗಳು ಅನುಷ್ಠಾನ ಮಾಡಲಿದ್ದಾರೆ ಎಂದರು.

ವಿಧಾನ ಪರಿಷತ್ ಸಭಾಪತಿ ಬಸವರಾಜ ಎಸ್. ಹೊರಟ್ಟಿ ಅವರು ಮಾತನಾಡಿ, ಮಹಾ ಶ್ರೇಷ್ಠ ನಾಯಕರು ಹುಟ್ಟಿರುವುದೇ ದೊಡ್ಡ ಕೊಡುಗೆ. ಡಾ.ಬಾಬು ಜಗಜೀವನ ರಾಂ ಹಾಗೂ ಡಾ.ಬಿ.ಆರ್. ಅಂಬೇಡ್ಕರ್ ಅವರು ದೇಶದ ಎರಡು ಕಣ್ಣಿದ್ದಂತೆ, ದೇಶ ಕಂಡಂತ ಮಹಾನ್ ವ್ಯಕ್ತಿಗಳು. ಒಂದು ಸಮಾಜಕ್ಕೆ ಸೀಮಿತವಾಗದೆ ಇಡೀ ಭಾರತ ದೇಶದ ಎಲ್ಲಾ ಸಮಾಜಕ್ಕೆ ಕೊಡುಗೆ ನೀಡಿದ್ದಾರೆ ಎಂದರು.

ಕಾರ್ಯಕ್ರಮದಲ್ಲಿ ಗೃಹ ಸಚಿವರಾದ ಡಾ.ಜಿ.ಪರಮೇಶ್ವರ್, ಸಾರಿಗೆ ಮತ್ತು ಮುಜರಾಯಿ ಸಚಿವರಾದ ರಾಮಲಿಂಗಾರೆಡ್ಡಿ, ವಿಧಾನ ಪರಿಷತನ ವಿರೋಧ ಪಕ್ಷದ ನಾಯಕರಾದ ಛಲವಾದಿ ಟಿ. ನಾರಾಯಣಸ್ವಾಮಿ, ವಿಧಾನ ಪರಿಷತ್ತಿನ ಸರ್ಕಾರಿ ಮುಖ್ಯ ಸಚೇತಕರಾದ ಸಲೀಂ ಅಹಮದ್, ಶಿವಾಜಿನಗರ ವಿಧಾಸಭಾ ಕ್ಷೇತ್ರದ ಶಾಸಕ ರಿಜ್ವಾನ್ ಅರ್ಷದ್, ಮಾಜಿ ಸಚಿವ ಹೆಚ್.ಆಂಜನೇಯ, ಸಮಾಜಕಲ್ಯಾಣ ಇಲಾಖೆಯ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳಾದ ಮೇಜರ್ ಪಿ. ಮಣಿವಣ್ಣನ್, ಸಮಾಜಕಲ್ಯಾಣ ಇಲಾಖೆಯ ಡಾ.ರಾಕೇಶ್ ಕುಮಾರ್ ಕೆ. ಅಭಿವೃದ್ಧಿ ನಿಗಮಗಳ ಅಧ್ಯಕ್ಷರುಗಳು, ಇತರೆ ಗಣ್ಯರು ಪ್ರಶಸ್ತಿಗೆ ಭಾಜನರಾದರು ಹಾಗೂ ಕುಟುಂಬಸ್ಥರು ಉಪಸ್ಥಿತರಿದ್ದರು.

# ಇಬ್ಬರು ಆರೋಪಿಗಳ ಸೆರೆ

ಓಡಿ ಹೋಗಿದ್ದಾನೆ. ಆದರೂ ಬೆನ್ನು ಬಿಡದ ದುಷ್ಕರ್ಮಿಗಳು ದಾಬಾದಿಂದ 200 ಮೀಟರ್ ದೂರದಲ್ಲಿ ಅಟ್ಟಿಸಿಕೊಂಡು ಹೋಗಿದ್ದಾರೆ. ಎದೆ, ಕತ್ತು ಹಾಗೂ ತಲೆಗೆ ಬಲವಾಗಿ ಹೊಡೆದಿದ್ದಾರೆ. ಬಳಿಕ ಕಲ್ಲು ಎತ್ತಿಹಾಕಿ ಬರ್ಬರವಾಗಿ ಹತ್ಯೆಗೈದಿದ್ದರು.

ಕೊಲೆ ಮಾಡಿ ಪರಾರಿಯಾಗಿರುವ ಆರೋಪಿಗಳ ಬೆನ್ನು ಬಿದ್ದಿರುವ ಪೊಲೀಸರು, ನ್ಯೂ ಟೌನ್ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಿಸಿಕೊಂಡು ತನಿಖೆ ಕೈಗೊಂಡರು. ಕೊಲೆ ಆರೋಪಿಯ ಗುರುತು ಪತ್ತೆ ಮಾಡಿದ ಪೋಲಿಸರು ಇಬ್ಬರನ್ನು ಬಂಧಿಸುವಲ್ಲಿ ಯಶಸ್ವಿಯಾದರು.

# ಜಿಲ್ಲಾ ಉಸ್ತುವಾರಿ ಸಚಿವ ದರ್ಶನಾಪುರ

ಚೇತನ ಹಾಗೂ ನಾಯಕರಾಗಿದ್ದಾರೆ ಎಂದು ಹೇಳಿದರು.ದೇಶದ ಉಪಪ್ರಧಾನಿಯಾಗಿ ಡಾ.ಬಾಬು ಜಗಜೀವನರಾಂ ಅವರು ಅನೇಕ ದೊಡ್ಡ,ದೊಡ್ಡ ಯೋಜನೆಗಳನ್ನು ಜಾರಿ ಮಾಡಿದ್ದಾರೆ.

ಶೋಷಿತ ವರ್ಗದಲ್ಲಿ ಜನಿಸಿದ್ದರೂ ಸರ್ವ ಜನಾಂಗದ ಅಭಿವೃದ್ಧಿ ಬಯಸಿದ್ದ ಅವರಿಗೆ ಪ್ರಧಾನಿಯಾಗುವ ಎಲ್ಲ ಅರ್ಹತೆಗಳು ಇದ್ದವು ಎಂದು ಹೇಳಿದರು.ಇಂತಹ ಮಹಾನ್ ನಾಯಕರ ಆದರ್ಶಗಳನ್ನು ಪ್ರತಿಯೊಬ್ಬರು ತಮ್ಮ ಜೀವನದಲ್ಲಿ ಅಳವಡಿಸಿಕೊಂಡು ತಾವು ಉನ್ನತಿಹೊಂದಿ ದೇಶವನ್ನು ಅಭಿವೃದ್ಧಿ ಪಥದಲ್ಲಿ ತೆಗೆದುಕೊಂಡು ಹೋಗಲಿ ಎಂಬ ಉದ್ದೇಶದೊಂದಿಗೆ ಇಂತಹ ಮಹಾನ್ ಚೇತನರ ಮೂರ್ತಿ ಸ್ಥಾಪನೆಯ ಉದ್ದೇಶವಾಗಿದೆ ಎಂದು ಸಚಿವರು ಹೇಳಿದರು.ಡಾ.ಅಂಬೇಡ್ಕರ್ ಅವರು ಬರೆದ ಸಂವಿಧಾನದಿಂದಲೇ ಇಂದು ವಿವಿಧ ವರ್ಗಗಳ ಜನರು ಆರ್ಥಿಕ,ಸಾಮಾಜಿಕ, ಶೈಕ್ಷಣಿಕ ಮತ್ತು ರಾಜಕೀಯವಾಗಿ ಮುಂದೆ ಬರಲು ಸಾಧ್ಯವಾಗಿದೆ ಎಂದು ಹೇಳಿದರು.ಜಯಂತಿ ಆಚರಣೆ ಉದ್ದೇಶವೇ ಶ್ರೇಷ್ಠ ವ್ಯಕ್ತಿಗಳು ಸದಾ ಕಾಲ ನೆನಪಿನಲ್ಲಿ ಇರಲಿ ಮತ್ತು ಇಂದಿನ ಪೀಳಿಗೆಗೆ ಅವರ ಇತಿಹಾಸ ಗೊತ್ತಾಗಲಿ ಎಂಬ ಉದ್ದೇಶ ಹೊಂದಿದೆ ಎಂದು ಸಚಿವ ದರ್ಶನಾಪುರ ಅವರು ಹೇಳಿದರು.

ಕಾರ್ಯಕ್ರಮದಲ್ಲಿಅಧ್ಯಕ್ಷತೆ ವಹಿಸಿದ್ದ ಶಾಸಕ ಚನ್ನಾರೆಡ್ಡಿ ಪಾಟೀಲ್ ತುನ್ನೂರ ಅವರು ಮಾತನಾಡಿ, ಡಾ.ಬಾಬು ಜೀವನ ರಾಂ ಅವರು ಶೋಷಿತ ಸಮಾಜದ ಆಶಾಕಿರಣವಾಗಿದ್ದಾರೆಎಂದರು.

ಗುರುಮಠಕಲ್ ಸರಕಾರಿ ಪದವಿ ಮಹಾವಿದ್ಯಾಲಯ ಉಪನ್ಯಾಸಕ ಡಾ.ಎಸ್.ಎಸ್ ನಾಯಕ್ ಅವರು ವಿಶೇಷ ಉಪನ್ಯಾಸ ನೀಡಿ ಡಾ.ಬಾಬು ಜಗಜೀವನರಾಂ ಅವರ ಜೀವನ ಸಾಧನೆ ಕುರಿತು ವಿವರಿಸಿದರು.

ವೇದಿಕೆಯಲ್ಲಿ ಜಿಲ್ಲಾಧಿಕಾರಿ ಡಾ.ಸುಶೀಲಾ,ಬಿ, ನಗರಸಭೆ ಅಧ್ಯಕ್ಷೆ ಲಲಿತಾ ಅನಪೂರ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಪೃಥ್ವಿಕ್ ಶಂಕರ್, ಜಿಲ್ಲಾ ಪಂಚಾಯತ್ ಸಿಇಒ ಲವೀಶ್ ಒರಡಿಯಾ, ಅಪರ್ ಜಿಲ್ಲಾಧಿಕಾರಿ ಶರಣಬಸಪ್ಪ ಕೋಟೆಪ್ಪಗೋಳ, ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕ ಎಸ್ ಎಸ್ ಚನ್ನಬಸಪ್ಪ , ಸಹಾಯಕ ಆಯುಕ್ತ ಹಂಪಣ್ಣ ಸಜ್ಜನ್ , ಯುಡಾ ಅಧ್ಯಕ್ಷ ವಿನಾಯಕ ಮಾಲಿ ಪಾಟೀಲ್, ಡಾ.ಬಾಬು ಜಗಜೀವನರಾಂ ಜಯಂತ್ಯೋತ್ಸವ ಸಮಿತಿ ಅಧ್ಯಕ್ಷ ನಿಂಗಪ್ಪ ಹತ್ತಿಮನಿ ಉಪಸ್ಥಿತರಿದ್ದರು.

ಕಾರ್ಯಕ್ರಮದಲ್ಲಿವಿವಿಧ ಸಾಧನೆ ಮಾಡಿದ ವಿದ್ಯಾರ್ಥಿ, ಗಣ್ಯರಿಗೆ ಸನ್ಮಾನಿಸಲಾಯಿತು.ಎಸ್.ಎಸ್.ಎಲ್.ಸಿ ಪರೀಕ್ಷೆಯಲ್ಲಿ ಉತ್ತಮ ಅಂಕ ಪಡೆದ ವಿದ್ಯಾರ್ಥಿಗಳಾದ ಕುಮಾರ ತಂದೆ ಭೀಮರಾಯ, ಸಾಗರ ತಂದೆ ದೇವರಾಜ ರಾಠೋಡ, ಕುಮಾರಿ ಸಂಜನಾ ತಂದೆ ಭೀಮರಾಯ ಅವರನ್ನು ಹಾಗೂ ವಿವಿಧ ಕ್ಷೇತ್ರದಲ್ಲಿ ಸಮಾಜಕ್ಕಾಗಿ ಉತ್ತಮ ಸೇವೆ ಸಲ್ಲಿಸಿದ ಸಾಹಿತ್ಯ ಕ್ಷೇತ್ರದ ಡಾ. ಸಿ.ಆರ್.ಕಂಬಾರ ಶೆಟ್ಟಿಕೇರಾ, ಶಿಕ್ಷಣ ಕ್ಷೇತ್ರದಲ್ಲಿ ಸಾಧನೆ ಮಾಡಿದ ಡಾ. ಎಸ್.ಹೆಚ್.ಮುದ್ನಾಳ, ಸಮಾಜ ಸೇವೆ ಅರುಣಕುಮಾರ ಎಸ್. ಮುಂಡ್ರಿಕೇರಿ, ಮಾಧ್ಯಮ ಕ್ಷೇತ್ರ ವೆಂಕಟೇಶ್ ಹೆಚ್. ಆಲೂರು, ಶಾಂತಪ್ಪ ಗುತ್ತೇದಾರ ಅವರನ್ನು ಸನ್ಮಾನಿಸಲಾಯಿತು.

# ಸುಪ್ರೀಂ ಕೋರ್ಟ್ ಮೆಟ್ಟಿಲೇರಿದ ಕಾಂಗ್ರೆಸ್ ಮತ್ತು ಎಐಎಂಐಎಂ

ದತ್ತಿಗಳಿಗೆ ಈ ಹಿಂದೆ ನೀಡಲಾದ ವಿವಿಧ ರಕ್ಷಣೆಗಳನ್ನು ತೆಗೆದುಹಾಕುತ್ತದೆ ಎಂದು ವಾದಿಸಿದ್ದಾರೆ.

ವಕ್ಫ್‌ಗಳಿಗೆ ನೀಡಲಾದ ರಕ್ಷಣೆಯನ್ನು ಕಡಿಮೆ ಮಾಡುವುದರಿಂದ ಅವುಗಳನ್ನು ಇತರ ಧರ್ಮಗಳ ಧಾರ್ಮಿಕ ಮತ್ತು ದತ್ತಿಗಳಿಗಾಗಿ ಉಳಿಸಿಕೊಳ್ಳುವುದು ಮುಸ್ಲಿಮರ ವಿರುದ್ಧ ಪ್ರತಿಕೂಲ ತಾರತಮ್ಯವಾಗಿದೆ. ಧರ್ಮದ ಆಧಾರದ ಮೇಲೆ ತಾರತಮ್ಯವನ್ನು ನಿಷೇಧಿಸುವ ಸಂವಿಧಾನದ 14 ಮತ್ತು 15 ನೇ ವಿಧಿಗಳ ಉಲ್ಲಂಘನೆಯಾಗಿದೆ ಎಂದಿದ್ದಾರೆ.ರಾಷ್ಟ್ರಪತಿ ಮೊರೆ ಹೋಗಲು ಎಐಎಂಪಿಎಲ್‌ಬಿಃ ನಿರ್ಧಾರ

ವಕ್ಫ್ ಮಸೂದೆಗೆ ಒಪ್ಪಿಗೆ ನೀಡುವ ಮೊದಲು, ಅಖಿಲ ಭಾರತ ಮುಸ್ಲಿಂ ವೈಯಕ್ತಿಕ ಕಾನೂನು ಮಂಡಳಿಯು ರಾಷ್ಟ್ರಪತಿ ದ್ರೌಪದಿ ಮುರ್ಮು ಅವರೊಂದಿಗೆ ಮನವಿ ಸಲ್ಲಿಸಲು ಭೇಟಿಗೆ ಸಮಯ ಕೇಳಿದೆ.

# ಏ. 15 ರಿಂದ ಲಾರಿ ಮುಷ್ಕರ

ಗಡುವು ನೀಡುತ್ತೇವೆ. ಸರ್ಕಾರ ನಮ್ಮ ಬೇಡಿಕೆಗಳಿಗೆ ಮಣಿಯದಿದ್ದರೆ, 14ರ ರಾತ್ರಿಯಿಂದಲೇ ಹೋರಾಟ ಆರಂಭಿಸುತ್ತೇವೆ ಹೋರಾಟ ಆರಂಭವಾದ ಬಳಿಕ ಯಾವುದೇ ರಾಜ್ಯದಿಂದ ಕರ್ನಾಟಕ ಒಳಗೆ ವಾಣಿಜ್ಯ ವಾಹನ ಸಂಚಾರ ಮಾಡಲ್ಲ. ಚೆಕ್ ಪೋಸ್ಟ್‌ಗಳಲ್ಲಿ ಖುದ್ದು ನಾವುಗಳೇ ನಿಲ್ಲುತ್ತೇವೆ. ಯಾವುದೇ ವಾಣಿಜ್ಯ ವಾಹನಗಳನ್ನು ಒಳಗಡೆ ಬಿಡದಂತೆ ನೋಡಿಕೊಳ್ಳುತ್ತೇವೆ ಎಂದು ಎಚ್ಚರಿಕೆ ನೀಡಿದರು.

ಏಪ್ರಿಲ್ 15ರಿಂದ ಏರ್ ಪೋರ್ಟ್ ಟ್ಯಾಕ್ಸಿ, ಜಲ್ಲಿ ಕಲ್ಲು, ಮರಳು ಲಾರಿ, ಗೂಡ್ಸ್ ವಾಹನಗಳು ಸೇರಿದಂತೆ 6 ಲಕ್ಷ ಲಾರಿಗಳ ಸಂಚಾರ ಬಂದ್ ಆಗಲಿದೆ. ಜೊತೆಗೆ ಅಕ್ಕಿ ಲೊಡ್, ಗೂಡ್ಸ್, ಪೆಟ್ರೋಲ್ ಡಿಸೇಲ್ ಲಾರಿಗಳನ್ನೂ ಬಂದ್ ಮಾಡಲಾಗುತ್ತದೆ. ಇದಕ್ಕೆ ಚಾಲಕರ ಸಂಘದಿಂದಲೂ ಬೆಂಬಲ ವ್ಯಕ್ತವಾಗಿದೆ. ಎಲ್ಲಾ ಬಗೆಯ ವಾಣಿಜ್ಯ ವಾಹನಗಳ 9 ಲಕ್ಷ ವಾಹನಗಳ ಸಂಚಾರ ಸ್ಥಗಿತವಾಗಲಿವೆ ಎಂದು ಅವರು ವಿವರಿಸಿದರು.

# ಏ. 16 ಮತ್ತು 17 ರಂದು ಸಿ.ಇ.ಟಿ. ಪರೀಕ್ಷೆ : ಕಟ್ಟೆಚ್ಚರ ವಹಿಸಿ,ನಕಲಿ ಗೆ ಅವಕಾಶ ಬೇಡ :ಡಾ.ಸುಶೀಲಾ.ಬಿ

ಯಾದಗಿರಿ,ಏ.5 : ವೃತ್ತಿಪರ ಕೋರ್ಸ್‌ಪ್ರವೇಶಾತಿಗೆಕರ್ನಾಟಕ ಪರೀಕ್ಷಾ ಪ್ರಾಧಿಕಾರವು ಇದೇ ಏಪ್ರಿಲ್ 16 ಮತ್ತು 17 ರಂದು ಎರಡು ಅವಧಿಯಲ್ಲಿ ರಾಜ್ಯದಾದ್ಯಂತ ಸಾಮಾನ್ಯ ಪ್ರವೇಶ ಪರೀಕ್ಷೆ ನಡೆಸುತ್ತಿದ್ದು, ಜಿಲ್ಲೆಯ ಪರೀಕ್ಷಾ ಕೇಂದ್ರದ ಸುತ್ತ ಕಟ್ಟೆಚ್ಚರ ವಹಿಸುವಂತೆ ಅಧಿಕಾರಿಗಳಿಗೆ ಜಿಲ್ಲಾಧಿಕಾರಿ ಡಾ.ಸುಶೀಲಾ.ಬಿ ಅವರು ಸೂಚಿಸಿದರು.ಶನಿವಾರ ಇಲ್ಲಿನ ಡಿ.ಸಿ. ಕಚೇರಿ ಸಭಾಂಗಣದಲ್ಲಿ ಪರೀಕ್ಷೆಸಂಬಂಧ ಅಧಿಕಾರಿಗಳ ಪೂರ್ವಭಾವಿ ಸಭೆ ನಡೆಸಿದ ಅವರು, ಪರೀಕ್ಷೆಗೆ ಯಾದಗಿರಿ ನಗರದಲ್ಲಿ 9 ಪರೀಕ್ಷಾ ಕೇಂದ್ರ ಸ್ಥಾಪಿಸಲಾಗಿದೆ. ಒಟ್ಟಾರೆ 3,917 ಅಭ್ಯರ್ಥಿಗಳು ಪರೀಕ್ಷೆ ಬರೆಯಲು ಹೆಸರು ನೊಂದಣಿ ಮಾಡಿಕೊಂಡಿದ್ದು, ಪರೀಕ್ಷೆ ಸುಸೂತ್ರವಾಗಿ ನಡೆಸುವಂತೆ ಮತ್ತು ಯಾವುದೇ ರೀತಿಯ ನಕಲು ಮಾಡಲು ಅವಕಾಶ ನೀಡಬಾರದುಎಂದುಅಧಿಕಾರಿಗಳಿಗೆ ಜಿಲ್ಲಾಧಿಕಾರಿಗಳು ಖಡಕ್ ಸೂಚನೆ ನೀಡಿದರು.ಪ್ರತಿ ಪರೀಕ್ಷೆಕೇಂದ್ರಕ್ಕೆ ವೀಕ್ಷಕರು,ರೂಟ್ ಅಧಿಕಾರಿಗಳನ್ನು ಮತ್ತು ರಹಸ್ಯ ಸಾಮಗ್ರಿಗಳ ಸಾಗಾಟಕ್ಕೆ ಅಧಿಕಾರಿಗಳನ್ನು ನಿಯೋಜಿಸಲಾಗುವುದು. ಕೊಠಡಿ ಮೇಲ್ವಿಚಾರಕರು ಪ್ರತಿ ಅಭ್ಯರ್ಥಿಯ ಪ್ರವೇಶಾತಿ ಪತ್ರ ಮತ್ತು ಗುರುತಿನ ಚೀಟಿ ಸರಿಯಾಗಿ ತಪಾಸಣೆ ಮಾಡಬೇಕು. ಕೊಠಡಿಯಲ್ಲಿನಕಲು ನಡೆದಲ್ಲಿ ಅದಕ್ಕೆ ಮೇಲ್ವಿಚಾರಕರೆ ಹೊಣೆಗಾರರಾಗುತ್ತಾರೆ. ಹೀಗಾಗಿ ಮೇಲ್ವಿಚಾರಕರು ತುಂಬಾ ಜವಾಬ್ದಾರಿಯಿಂದ ಕಾರ್ಯನಿರ್ವಹಿಸಬೇಕು ಎಂದು ಡಿ.ಸಿ.ಸೂಚಿಸಿದರು.ಪರೀಕ್ಷೆನಡೆಯುವ ಮುನ್ನವೆ ಪರೀಕ್ಷಾ ಕೇಂದ್ರದಲ್ಲಿ ಅಗತ್ಯಮೂಲಸೌಕರ್ಯಗಳಾದ ವಿದ್ಯುತ್, ಕುಡಿಯುವ ನೀರು, ಶೌಚಾಲಯ ಇರುವುದನ್ನು ಕೇಂದ್ರದ ಮುಖ್ಯಸ್ಥರು ಖಾತ್ರಿಪಡಿಸಿಕೊಳ್ಳಬೇಕು. ಪ್ರತಿ ಪರೀಕ್ಷಾ ಕೇಂದ್ರದ ಪ್ರವೇಶ ದ್ವಾರದಲ್ಲಿ ತಪಾಸಣೆಗೆ ಹತ್ತಿರದ ಪೊಲೀಸ್ ಠಾಣೆಯಿಂದ ಪೊಲೀಸ್ ಸಿಬ್ಬಂದಿಯನ್ನು ನಿಯೋಜಿಸಬೇಕೆಂದು ಸೂಚಿಸಲಾಯಿತು.

# ವಿಳಂಬ: ಸರ್ಕಾರಕ್ಕೆ ಗವರ್ನರ್ ತರಾಟೆ

ನೀಡುವ ಸಂಬಂಧ ತಿದ್ದುಪಡಿ ವಿಧೇಯಕ ರೂಪಿಸಲಾಗಿದೆ. ಆದರೆ, ಈ ಕಾನೂನು ತಿದ್ದುಪಡಿ ಬಗ್ಗೆ ಆಕ್ಷೇ?ಪ ಎತ್ತಿರುವ ರಾಜ್ಯಪಾಲರು ಸ್ಪಷ್ಟನೆ ಬಯಸಿ ವಾಪಸ್ ಕಳಿಸಿದ್ದು, ಇನ್ನೂ ಒಪ್ಪಿಗೆ ನೀಡಿಲ್ಲ. ಹಾಗಾಗಿ, 2024ರ ಮೇ 25ರಿಂದ ಖಾಲಿ ಇರುವ ವಿವಿ ಕುಲಪತಿ ಹುದ್ದೆ ನೇಮಕಕ್ಕೆ ಸರಕಾರ ಆಸಕ್ತಿ ತೋರಿಲ್ಲ. ಇದು ರಾಜ್ಯಪಾಲರನ್ನು ಕೆರಳುವಂತೆ ಮಾಡಿದೆ.

ಗದಗದ ಆರ್‌ಡಿಪಿಆರ್ ವಿವಿ ಕುಲಪತಿ ನೇಮಕ ಸಂಬಂಧ ಅರ್ಜಿ ಆಹ್ವಾನಿಸಲು ಸಚಿವ ಪ್ರಿಯಾಂಕ ಖರ್ಗೆ ಅವರಿಗೆ ಸೂಚಿಸಿ ತಾವು ಹಲವು ಬಾರಿ ಪತ್ರ ಬರೆದಿರುವುದನ್ನು ಉಲ್ಲೇಖಿಸಿದ್ದಾರೆ. ಈ ನೇಮಕ ಕುರಿತಂತೆ ಹಿಂದೆಯೇ ಶೋಧನಾ ಸಮಿತಿ ರಚನೆಯಾಗಿತ್ತು. ಆದರೆ, ಇದುವರೆಗೂ ಅರ್ಜಿಯನ್ನೇ ಆಹ್ವಾನಿಸಿಲ್ಲ ಎಂದು ಪ್ರಸ್ತಾಪಿಸಿದ್ದಾರೆ.

ಶೋಧನಾ ಸಮಿತಿಯನ್ನು ರಚಿಸಲಾಗಿದೆ. ಹಿಂದಿನ ಕುಲಪತಿಯ ಅವಧಿ ಪೂರ್ಣಗೊಳ್ಳುವ ಮೊದಲೇ ಅಧಿಸೂಚನೆಯನ್ನು ಹೊರಡಿಸಲಾಗಿದೆ, ಆದರೆ ರಾಜ್ಯ ಸರ್ಕಾರ ಅರ್ಜಿಗಳನ್ನು ಕರೆಯದ ಕಾರಣ ಶೋಧನಾ ಸಮಿತಿಯು ಇನ್ನೂ ತನ್ನ ಕೆಲಸವನ್ನು ಪ್ರಾರಂಭಿಸಲು ಕಾಯುತ್ತಿದೆ ಎಂದು ಅವರು ಹೇಳಿದರು.

'ವಿದ್ಯಾರ್ಥಿಗಳು,ಸಂಶೋಧಕರು ಹಾಗೂ ವಿಶ್ವವಿದ್ಯಾಲಯದ ಹಿತದೃಷ್ಟಿಯಿಂದ ಕೂಡಲೇ ಕುಲಪತಿ ನೇಮಕ ಪ್ರಕ್ರಿಯೆ ಆರಂಭಿಸಲು ಸಂಬಂಧಪಟ್ಟ ಇಲಾಖಾ ಅಧಿಕಾರಿಗಳಿಗೆ ನಿರ್ದೇಶನ ನೀಡಬೇಕು. ತಪ್ಪಿದರೆ, ನಾನೇ ಅಂತಹ ಕ್ರಮ ತೆಗೆದುಕೊಳ್ಳುವುದು ಅನಿವಾರ್ಯವಾಗಬಹುದು. ರಾಜ್ಯ ಸರಕಾರ ಅಂತಹ ಸಂದರ್ಭ ಎದುರಾಗಲು ಅವಕಾಶ ಕೊಡಬಾರದು. ವಿಶ್ವವಿದ್ಯಾಲಯಗಳ ಏಳಿಗೆಗೆ ಅನಗತ್ಯ ತೊಡಕು ಸೃಷ್ಟಿಯಾಗದಂತೆ ಎಚ್ಚರ ವಹಿಸಬೇಕು" ಎಂದು ಕಿವಿಮಾತು ಹೇಳಿದ್ದಾರೆ.

ಈಗಿರುವ ಕಾಯಿದೆಯಂತೆ ಕರ್ನಾಟಕ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ವಿಶ್ವವಿದ್ಯಾನಿಲಯದ ಉಪಕುಲಪತಿ ಹುದ್ದೆಗೆ ಅರ್ಜಿಗಳನ್ನು ಕರೆಯಲು ಸಂಬಂಧಪಟ್ಟ ಇಲಾಖೆಯ ಅಧಿಕಾರಿಗಳಿಗೆ ನಿರ್ದೇಶನ ನೀಡಿ, ವಿದ್ಯಾರ್ಥಿಗಳ ಮೇಲೆ ಪರಿಣಾಮ ಬೀರುವ ಹುದ್ದೆಯನ್ನು ದೀರ್ಘಕಾಲದವರೆಗೆ ಖಾಲಿ ಬಿಡಬೇಡಿ.

ಈ ನಿಟ್ಟಿನಲ್ಲಿ 1 ತಿಂಗಳೊಳಗೆ ನಿರ್ಣಾಯಕ ಕ್ರಮ ತೆಗೆದುಕೊಳ್ಳಬೇಕು. ಇಲ್ಲದೇ ಹೋದರೆ ತಾವೇ ಅರ್ಜಿ ಕರೆಯಬೇಕಾಗುತ್ತದೆ ಎಂದು ರಾಜ್ಯಪಾಲರು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಬರೆದಿರುವ ಸುದೀರ್ಘ ಪತ್ರದಲ್ಲಿ ಎಚ್ಚರಿಸಿದ್ದಾರೆ.

# ಶಾಸಕರಿಂದ ವಿದ್ಯಾರ್ಥಿಗಳ ಸಮಸ್ಯೆ ಇತ್ಯರ್ಥ

ಔರಾಧ:ಏ.5:ಮಾಜಿಸಚಿವರು ಹಾಗೂ ಶಾಸಕರಾದ ಪ್ರಭು ಚವ್ಹಾಣ ಅವರ ಪ್ರಯತ್ನದಿಂದ ಔರಾದ(ಬಿ) ಪಟ್ಟಣದ ಸರ್ಕಾರಿ ಪ್ರಥಮ ದರ್ಜೆ ಮಹಾವಿದ್ಯಾಲಯದಲ್ಲಿಓದುತ್ತಿರುವ ವಿದ್ಯಾರ್ಥಿಗಳ ಅಂಕಪಟ್ಟಿ ಸಮಸ್ಯೆ ಇತ್ಯರ್ಥಗೊಂಡಿದೆ.

2022–23ನೇ ಸಾಲಿನಲ್ಲಿ ಔರಾದ(ಬಿ)ಸರ್ಕಾರಿ ಪ್ರಥಮ ದರ್ಜೆ ಮಹಾವಿದ್ಯಾಲಯದಲ್ಲಿ ವ್ಯಾಸಂಗಮಾಡಿದ್ದ ವಿದ್ಯಾರ್ಥಿಗಳು ಅಂಕಪಟ್ಟಿ ಸಿಗದೆ ತೊಂದ–ರೆಗೆ ಸಿಲುಕಿದ್ದರು. ಹಿಂದಿನ ಪ್ರಾಂಶುಪಾಲರು ವಿದ್ಯಾರ್ಥಿಗಳ ಪೂರ್ಣ ಪರೀಕ್ಷಾ ಶುಲ್ಕ ವಿಶ್ವವಿದ್ಯಾಲಯಕ್ಕೆಪಾವತಿಸಲು ವಿಳಂಬ ಮಾಡಿದ್ದರಿಂದ ಅಂಕಪಟ್ಟಿ ಬಂದಿರಲಿಲ್ಲ. ವಿದ್ಯಾರ್ಥಿಗಳು ಮತ್ತು ಪೋಷಕರು ಶಾಸಕರನ್ನು ಬೇಟಿ ಮಾಡಿ ಅಳಲನ್ನು ತೋಡಿಕೊಂಡಾಗ ಕೂಡಲೇ ಬಾಕಿ ಶುಲ್ಕ ಪಾವತಿಸಿ ಅಂಕಪಟ್ಟಿಯನ್ನು ತರಿಸಿಕೊಳ್ಳುವಂತೆ ಪ್ರಾಂಶುಪಾಲರಿಗೆ ಸೂಚನೆ ನೀಡಿದ್ದರು.

ಅಲ್ಲದೇ ಬೆಂಗಳೂರಿನಲ್ಲಿ ಉನ್ನತ ಶಿಕ್ಷಣ ಸಚಿವರಾದ ಡಾ.ಎಂ.ಸಿ ಸುಧಾಕರ್ ಹಾಗೂ ಇಲಾಖೆಯ ಆಯುಕ್ತರನ್ನು ಭೇಟಿ ಮಾಡಿ ಸಮಸ್ಯೆಯ ಗಂಭೀರತೆಯ ಬಗ್ಗೆ ಮನವರಿಕೆ ಮಾಡಿಕೊಟ್ಟಿದ್ದರು.ಸಂಬಂಧಪಟ್ಟ ಅಧಿಕಾರಿಗಳನ್ನು ಸಂಪರ್ಕಿಸಿ ವಿದ್ಯಾರ್ಥಿಗಳ ಸಮಸ್ಯೆ ಬೇಗ ಇತ್ಯರ್ಥಪಡಿಸುವಂತೆ ನಿರ್ದೇಶನ ನೀಡಿದ್ದರು.

ಕಾಲೇಜು ಅಭಿವೃದ್ಧಿ ಸಮಿತಿಯ ಅಧ್ಯಕ್ಷರಾಗಿರುವ ಶಾಸಕರು ಗುಲ್ಬರ್ಗಾ ವಿಶ್ವವಿದ್ಯಾಲಯದ ಮೌಲ್ಯಮಾಪನ ಕುಲಸಚಿವರಿಗೆ ಪತ್ರ ಬರೆದು ಕಾಲೇಜು ಮತ್ತು ವಿಶ್ವವಿದ್ಯಾಲಯದ ಸಮಸ್ಯೆಯಿಂದ ಮಕ್ಕಳ ಮೇಲೆ ಪರಿಣಾಮ ಬೀರುತ್ತಿದೆ. ವಿದ್ಯಾರ್ಥಿಗಳು ಉನ್ನತ ವ್ಯಾಸಂಗ ಮತ್ತು ಉದ್ಯೋಗ ಪಡೆಯಲು ಸಮಸ್ಯೆ ಎದುರಿಸುತ್ತಾರೆ. ಮಕ್ಕಳಿಗೆ ಬೇಗ ಅಂಕಪಟ್ಟಿಗಳನ್ನು ಒದಗಿಸಲು ಅಗತ್ಯ ಕ್ರಮ ವಹಿಸಬೇಕೆಂದು ಮನವಿ ಮಾಡಿದ್ದರು.

ನಿರಂತರ ಪ್ರಯತ್ನಗಳಿಂದಾಗಿ ಕಾಲೇಜು ಮತ್ತು ವಿಶ್ವವಿದ್ಯಾಲಯದ ನಡುವಿನ ಸಮಸ್ಯೆ ಇತ್ಯರ್ಥಗೊಂಡಿದೆ. ಎರಡು ದಿನಗಳೊಳಗೆ ವಿದ್ಯಾರ್ಥಿಗಳಿಗೆ ಅಂಕಪಟ್ಟಿಗಳನ್ನು ವಿತರಿಸುವಂತೆ ಪ್ರಾಂಶುಪಾಲರಿಗೆ ಸೂಚಿಸಿದ್ದೇನೆ. ವಿದ್ಯಾರ್ಥಿಗಳು ಯಾವುದೇ ರೀತಿಯ ಆತಂಕ–ಕ್ಕೆ ಒಳಗಾಗಬಾರದೆಂದು ಶಾಸಕರಾದ ಪ್ರಭು ಚವ್ಹಾಣ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ವಿನಯ್ ಸೋಮಯ್ಯ ಪ್ರಕರಣ ಸಿಬಿಐಗೆ ವಹಿಸುವಂತೆ ಮಾಜಿ ಸಚಿವ ಹಾಲಪ್ಪ ಆಚಾರ ಒತ್ತಾಯ



ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ :ಏ.5: ಕುಕನೂರ ಪ್ರವಾಸಿ ಮಂದಿರದಲ್ಲಿ ಶನಿವಾರ ಆಯೋಜಿಸಿದ್ದ ಸುದ್ದಿಗೋಷ್ಠಿ ಉದ್ದೇಶಿಸಿ ಹಾಲಪ್ಪ ಆಚಾರ ಮಾತನಾಡುತ್ತಾ ಕೊಡಗಿನ ಭಾರತೀಯ ಜನತಾ ಪಕ್ಷದ ಕಾರ್ಯಕರ್ತ ವಾಟ್ಸಪ್ ಗ್ರೂಪ್ ರಚನೆ ಮಾಡಿದ್ದು ಅದರಲ್ಲಿನ ಸದಸ್ಯರು ಕೊಡಗಿನ ಸರ್ಕಾರಿ ಆಸ್ಪತ್ರೆಯ ಶೌಚಾಲಯದ ದುಸ್ಥಿತಿ ಹಾಗೂ ಅಧಿಕಾರಿಗಳ ದುರಾಡಳಿತ ಕುರಿತು ಬೆಳಕು ಚೆಲ್ಲಿದ್ದು ಅದಕ್ಕಾಗಿ ಕಾಂಗ್ರೆಸ್ಸಿಗರು ವಿನಯ್ ಸೋಮಯ್ಯ ಮೇಲೆ ಇಲ್ಲಸಲ್ಲದ ದೂರು ದಾಖಲಿಸಿ ಸೇಡಿನ ರಾಜಕೀಯ ಮಾಡುತ್ತಿದ್ದು ಇದಕ್ಕೆ ಸಹಕರಿಸಿದ ಪೊಲೀಸ್ ಇಲಾಖೆ ಕಾಂಗ್ರೆಸ್ ಪಕ್ಷದ ಕೈಗೊಂಬೆಯಂತೆ ವರ್ತಿಸುತ್ತಿದ್ದಾರೆ. ಇದನ್ನೆಲ್ಲ ಗಮನಿಸಿದ ವಿನಯ್ ಸಮಯ ಹೈಕೋರ್ಟ್‌ನಿಂದ ತಡೆಯಾಗಿ ತಂದಿದ್ದರು ಸಹ ಪೊಲೀಸ್ ಇಲಾಖೆ ಹಾಗೂ ಜಿಲ್ಲೆಯ ಕಾಂಗ್ರೆಸ್ ಪ್ರಮುಖರು ಚಿತ್ರ ಹಿಂಸೆ ಹಾಗೂ ಇಲ್ಲಸಲ್ಲದ ಕಿರಿಕಿರಿ ನೀಡುತ್ತಿದ್ದದನ್ನು ಸಹಿಸದೆ ಆತ್ಮಹತ್ಯೆಗೆ ಶರಣಾಗಿದ್ದು ಆತ್ಮಹತ್ಯೆಗೂ ಮುನ್ನ ಬರೆದಿರುವ ಮೃತ್ಯುಪತ್ರದಲ್ಲಿ ನಾಲ್ಕು ಜನರ ಹೆಸರನ್ನು ಕಾಣಿಸಿರುತ್ತಾರೆ. ಮೃತ್ಯು ಪತ್ರದಂತೆ ಮೃತರ ಸಹೋದರ ನಾಲ್ಕು ಜನರ ವಿರುದ್ಧ ಪೊಲೀಸ್ ಠಾಣೆಯಲ್ಲಿ ದೂರು ನೀಡಿದ್ದರು ಸಹ ಪೊಲೀಸರು ಎ???ಆರ್ ನಲ್ಲಿ ಕೇವಲ ಒಬ್ಬರ ಹೆಸರು ನಮೂದಿಸಿರುವುದು ಪೊಲೀಸ್ ಸಂಪೂರ್ಣವಾಗಿ ಕಾಂಗ್ರೆಸ್ ಪಕ್ಷಕ್ಕೆ ಕೈಗೊಂಬೆಯಾಗಿರುವುದು ಸಾಬೀತಾಗುತ್ತದೆ.

ಇಂತಹ ಪೊಲೀಸ್ ಇಲಾಖೆಯಿಂದ ನಿಷ್ಪಕ್ಷಪಾತ ತನಿಖೆ ಸಾಧ್ಯವಿಲ್ಲ ಎಂಬುದು ಸ್ಪಷ್ಟವಾಗಿದ್ದು ಸರ್ಕಾರ ಈ ಪ್ರಕರಣವನ್ನು ಸಿಬಿಐ ತನಿಖೆಗೆ ಒಪ್ಪಿಸಬೇಕು ಎಂದು ಆಗ್ರಹ ಪಡಿಸಿದರು.

ಈ ವೇಳೆಯಲ್ಲಿ ಬಿಜೆಪಿ ಮಂಡಲ ಅಧ್ಯಕ್ಷ ಮಾರುತಿಗಾವರಳ , ಸಿದ್ದು ಉಳ್ಳಾಗಡ್ಡಿ, ಶರಣಪ್ಪ ಬಣ್ಣದ ಬಾವಿ, ವೀರಣ್ಣ ಹುಬ್ಬಳ್ಳಿ, ಸಿ ಎಚ್ ಪೊಲೀಸ್ ಪಾಟೀಲ್, ಶಂಭುಲಿಂಗಪ್ಪ ಜೋಳದ, ಕರಬಸಯ್ಯಬಿನ್ನಾಳ,ಬಸನಗೌಡ ತೊಂಡಿಹಾಳ, ಶಿವಕುಮಾರ್ ನಾಗಲಾಪುರ ಮಠ, ಲಕ್ಷ್ಮಣ ಕಾಳಿ, ಬಸವರಾಜ ಹಾಳಕೇರಿ, ಜಗದೀಶ ಸೂಡಿ, ಬಾಲರಾಜ್ ಗಾಳಿ, ಕನಕಪ್ಪ ಬ್ಯಾಡರ, ರಾಜಶೇಖರ ದ್ಯಾಂಪುರ, ಮಂಜುನಾಥ್ ಪೋಳದ, ಪಟ್ಟಣ ಪಂಚಾಯಿತಿಯ ಬಿಜೆಪಿ ಸದಸ್ಯರು, ಕಾರ್ಯಕರ್ತರು ಪಾಲ್ಗೊಂಡಿದ್ದರು.

# ಸ್ಪರ್ಧಾತ್ಮಕ ಯುಗದಲ್ಲಿ ಗುರಿ ಸಾಧಿಸಲು ಬದ್ಧತೆಯಿರಬೇಕು –ಸಚಿವ ಈಶ್ವರ ಬಿ.ಖಂಡ್ರೆ



ಮಲ್ಲಮ್ಮ ನುಡಿ ವಾರ್ತೆ

ಬೀದರ:ಏಪ್ರಿಲ್.5: ಪರಿಶ್ರಮ ಮತ್ತು ಬದ್ಧತೆಯಿಂದ ಅಭ್ಯಾಸ ನಡೆಸಿದ್ದಲ್ಲಿ ಮಾತ್ರ ಇಂದಿನ ಸ್ಪರ್ಧಾತ್ಮಕ ಯುಗದಲ್ಲಿ ಗುರಿ ಸಾಧಿಸಲು ಸಾಧ್ಯ ಎಂದು ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಹಾಗೂ ಬೀದರ ಜಿಲ್ಲಾ ಉಸ್ತುವಾರಿ ಸಚಿವರಾದ ಈಶ್ವರ ಬಿ.ಖಂಡ್ರೆ ನುಡಿದರು.

ಅವರು ಶನಿವಾರದಂದು ಭಾಲ್ಕಿ ತಾಲ್ಲೂಕಿನ ಹಾಲಹಳ್ಳಿಯಲ್ಲಿರುವ ಬೀದರ ವಿಶ್ವವಿದ್ಯಾಲಯ ಬೀದರನ ದ್ವಿತೀಯ ಸಂಸ್ಥಾಪನಾ ದಿನಾಚರಣೆ ಸಮಾರಂಭ ಉದ್ಘಾಟಿಸಿ ಅವರು ಮಾತನಾಡಿದರು.

ನಾವು ಅಂಗನವಾಡಿಯಿಂದ ಹಿಡಿದು 10ನೇ ತರಗತಿ, ಪದವಿವರೆಗೆ, ಶಿಕ್ಷಣ ಹಕ್ಕು ಕಾಯ್ದೆಯಡಿ ನೂರಾರು ಕೋಟಿ ಅನುದಾನ ನೀಡಿ ಶಿಕ್ಷಣಕ್ಕೆ ಒತ್ತು ಕೊಡುತ್ತಿದ್ದು, ಆದರೆ ಪದವಿ ಪೂರ್ವ ಶಿಕ್ಷಣ, ಸ್ನಾತಕೋತ್ತರ ವಿಶ್ವವಿದ್ಯಾಲಯಗಳಿಗೆ ಹೆಚ್ಚಿನ ಒತ್ತು ನೀಡಬೇಕಾಗಿದೆ. ವಿಶ್ವವಿದ್ಯಾಲಯಗಳು ವಿಭಾಗಗಳಲ್ಲಿ ರಾಜ್ಯ, ರಾಷ್ಟ್ರ ಮಟ್ಟದಲ್ಲಿ ಅಂತರಾಷ್ಟ್ರೀಯ ಮಟ್ಟದಲ್ಲಿ ಪದವಿಗಳಿಗೆ ಮಾನ್ಯತೆ ಸಿಗುವಂತಾಗಬೇಕು. ವಿಶ್ವವಿದ್ಯಾಲಯ ಅಭಿವೃದ್ಧಿ ಆದರೆ ಮಾತ್ರ ಸಾರ್ಥಕವಾಗುತ್ತದೆ. ಬೀದರ ವಿಶ್ವವಿದ್ಯಾಲಯಕ್ಕೆ 124 ಕಾಲೇಜು ಸಂಯೋಜಿತ ಇದ್ದು, ಪದವಿ ಹಾಗೂ ಸ್ನಾತಕೋತ್ತರ ಶಿಕ್ಷಣ ಮಹಾವಿದ್ಯಾಲಯಗಳು ಇದ್ದು, 30 ಸಾವಿರ ವಿದ್ಯಾರ್ಥಿಗಳು ಶಿಕ್ಷಣ ಪಡೆಯುತ್ತಿದ್ದಾರೆ. ಮುಂದಿನ ವರ್ಷ 40 ಸಾವಿರಗಿಂತ ಅರ್ಧ ವಿದ್ಯಾರ್ಥಿಗಳು ಶಿಕ್ಷಣ ಪಡೆಯುವಂತಾಗಬೇಕು. ನಮ್ಮ ವಿದ್ಯಾರ್ಥಿಗಳು ರಾಜ್ಯ, ರಾಷ್ಟ್ರ, ಅಂತರಾಷ್ಟ್ರೀಯ ಮಟ್ಟದಲ್ಲಿ ಮಾನವ ಸಂಪನ್ಮೂಲ ನಮ್ಮೆಲ್ಲರನ್ನು ಜಗತ್ತಿನಲ್ಲಿ ಎಲ್ಲ ಮಾನ್ಯತೆ ಇದೆ. ನಮ್ಮ ದೇಶದಲ್ಲಿ ವಿದ್ಯಾಭ್ಯಾಸ ಪಡೆದ ವಿದ್ಯಾರ್ಥಿಗಳು ಡಾ-ಕ್ಟರ್, ಇಂಜಿನೀಯರ ಆಗಿದ್ದಾರೆ, ವಿಜ್ಞಾನಿಗಳಾಗಿ ಬಾಹ್ಯಕಾಶ, ತಂತ್ರಜ್ಞಾನದಲ್ಲಿದ್ದಾರೆ. ಜಗತ್ತನ್ನು ನಿರ್ಮಾಣ ಮಾಡುವಲ್ಲಿ ನಮ್ಮ ವಿದ್ಯಾರ್ಥಿಗಳು ಪಾಲು ಇದೆ. ಇದೇ ಕಾರಣಕ್ಕೆ ದೇಶಗಳು ನಮ್ಮ ದೇಶದ ಕಡೆ ಮುಖ ಮಾಡುತ್ತಿವೆ. ನಮ್ಮ ವಿದ್ಯಾರ್ಥಿಗಳಲ್ಲಿ ಯಾವುದೇ ಕೊರತೆ ಇಲ್ಲ. ಎಲ್ಲ ಗುರಿ ಮುಟ್ಟಿ ಪರಿಶ್ರಮ ಮಾಡಬೇಕೆಂದರು.

ಬೀದರ ವಿಶ್ವವಿದ್ಯಾಲಯ ಪ್ರಾರಂಭ ಮಾಡಿದ್ದೇವೆ. ಇದರಲ್ಲಿ 75% ವಿದ್ಯಾರ್ಥಿನಿಯರು 25% ಪ್ರತಿಶತ ವಿದ್ಯಾರ್ಥಿಗಳಿದ್ದಾರೆ. ಎಲ್ಲಾ ಮಹಿಳಾ ಸಬಲೀಕರಣಕ್ಕೆ ನಮ್ಮ ಸರ್ಕಾರ ಒತ್ತು ನೀಡಿ ಮೀಸಲಾತಿ ನೀಡಿ ನಮ್ಮ ಸರ್ಕಾರ ಶಕ್ತಿ ನೀಡುತ್ತಿದೆ. ಅನೇಕ ವಿಷಯಗಳಲ್ಲಿ ಬೇಡಿಕೆ ಇದೆ ಆ ವಿಷಯಗಳನ್ನು ಅರಿತು ವಿದ್ಯಾಭ್ಯಾಸ ಮಾಡಿದರೆ ಎಲ್ಲಾ ಕಂಪನಿಗಳು ನಮ್ಮನ್ನು ಉದ್ಯೋಗ ಹುಡುಕಿಕೊಂಡು ಬರುತ್ತವೆ. ನಮ್ಮ ಕೈಗಾರಿಕಗಳನ್ನು ಏನು ಬೇಡಿಕೆ ಇದೆ ಅದನ್ನು ಕಲಿಯಬೇಕಾಗಿದೆ. ಕೌಶಲ್ಯ ತರಬೇತಿ ಅವಶ್ಯಕತೆ ಇದೆ. ಗಡಿ ಭಾಗದಲ್ಲಿಂದು ಬೀದರ ವಿಶ್ವವಿದ್ಯಾಲಯಕ್ಕೆ 312 ಎಕರೆ ಜಮಿನು ಇದೆ. ಶೀಘ್ರದಲ್ಲಿ ಅನುದಾನ ಒದಗಿಸಲಾಗುವುದು ಹತ್ತು ಹಲವಾರು ಬೇಡಿಕೆಗಳು ಇವೆ. ಮೂಲಸೌಕರ್ಯಗಳು ಒದಗಿಸಲಾಗುವುದು. ಬೀದರ ವಿಶ್ವವಿದ್ಯಾಲಯಕ್ಕೆ ಈಗಾಗಲೇ 29 ಉಪನ್ಯಾಸಕರ ಹುದ್ದೆಗಳು ಮಂಜೂರುಆಗಿದ್ದು, ಆಟೋನಮಸ್ ಬಾಡಿ ಇದ್ದು, ಕಾನೂನು ಬದ್ಧವಾಗಿ ಮೆರಿಟ ಹಾಗೂ ರೋಷ್ಟರ ಆಧಾರ ಮೇಲೆ ಯಾವುದೇ ದೂರು ಬಾರದಂತೆ ನೇಮಕಾತಿ ಮಾಡಿಕೊಳ್ಳಬೇಕು. 109 ಬೋಧಕೇತರ ಸಿಬ್ಬಂದಿ, ಇದೇ ಮಾನದಂಡದ ಪ್ರಕಾರ 371.ಜೆ ಅಡಿ ನೇಮಕಾತಿ ಮಾಡಿಕೊಳ್ಳಬೇಕು. ನಮ್ಮ ಯಾರದು ಹಸ್ತಕ್ಷೇಪ ಇರುವುದಿಲ್ಲ. ಪ್ರತಿಭಾವಂತ ಪ್ರಾಧ್ಯಾಪಕರು, ಶಿಕ್ಷಕರು ಸಿಗಲಿದ್ದು, ವಿದ್ಯಾರ್ಥಿಗಳಿಗೆ ಗುಣಮಟ್ಟದ ಶಿಕ್ಷಣ ಸಿಗುತ್ತದೆ. ಬೀದರ ವಿಶ್ವವಿದ್ಯಾಲಯದ ಅಭಿವೃದ್ಧಿಪಡಿಸಲು 300 ಕೋಟಿ ಅನುದಾನ ಬೇಕಾಗಿದ್ದು, ಪ್ರತಿ ವರ್ಷ 100 ಕೋಟಿಯಂತೆ ಯೋಜನೆ ವರದಿ ತಯ್ಯಾರಿಸಿ ನೀಡಿದ್ದಲ್ಲಿ ಕೆಕೆಆರ್‌ಡಿಬಿಯಿಂದ ಅನುದಾನ ಒದಗಿಸಲಾಗುವುದೆಂದರು.

ಪೌರಾಡಳಿತ ಹಾಗೂ ಹಜ್ ಸಚಿವರಾದ ರಹೀಂ ಖಾನ್ ಅವರು ಮಾತನಾಡಿ, ಬೀದರ ವಿಶ್ವವಿದ್ಯಾಲಯಕ್ಕೆ ಮೂಲಭೂತ ಸೌಕರ್ಯಗಳ ಕೊರತೆ ಇದೆ ಎಂದು ಮಾಹಿತಿ ತಿಳಿದಿದ್ದು, ಕೂಡಲೇ ನಾನು ಜಿಲ್ಲಾ ಉಸ್ತುವಾರಿ ಸಚಿವರಾದ ಈಶ್ವರ ಬಿ.ಖಂಡ್ರೆ ಅವರು ಸೇರಿ ಕೆಕೆ ಆರ್‌ಡಿಬಿ ಇಂದ ಹೆಚ್ಚಿನ ಅನುದಾನ ತಂದು ಅಭಿವೃದ್ಧಿಗೆ ಒತ್ತು ನೀಡುತ್ತೇವೆ ಎಂದರು. ಬೀದರ ಜಿಲ್ಲೆ 500 ವರ್ಷಗಳ ಹಿಂದೆ ಮಹಮ್ಮದ ಗವಾನ ಯೂನಿವಸಿಟಿ ಮೂಲಕ ವಿವಿಧ ದೇಶಗಳಿಂದ ಬಂದು ನಮ್ಮಲ್ಲಿ ಶಿಕ್ಷಣ ಪಡೆದಿದ್ದಾರೆ ಎಂಬುವುದು ಹೆಮ್ಮೆಯ ವಿಷಯ ಎಂದರು.

ಇದೇ ಸಂದರ್ಭದಲ್ಲಿ ಬೀದರ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ಬಸವರಾಜ ಜಾಬಶೆಟ್ಟಿ ಮಾತನಾಡಿದರು. ಪ್ರೊ.ಜಿ.ಎಸ್.ಬಿರಾದಾರ ಅವರು ಪ್ರಾಸ್ತಾವಿಕವಾಗಿ ಮಾತನಾಡಿದರು.

ಈ ಕಾರ್ಯಕ್ರಮದಲ್ಲಿ ಬೀದರ ದಕ್ಷಿಣ ಶಾಸಕರಾದ ಡಾ.ಶೈಲೇಂದ್ರ ಕೆ.ಬೆಲ್ದಾಳೆ, ವಿಧಾನ ಪರಿಷತ್ ಸದಸ್ಯರಾದ ಎಂ.ಜಿ.ಮುಳೆ, ಕರ್ನಾಟಕ ಮೀನುಗಾರಿಕೆ ಅಭಿವೃದ್ಧಿ ನಿಗಮದ ಅಧ್ಯಕ್ಷರಾದ ಮಾಲಾ ನಾರಾಯಣರಾವ, ಬಿದರ ನಗರ ಸಭೆ ಅಧ್ಯಕ್ಷರಾದ ಮಹ್ಮದ ಗೌಸ, ಬ್ಯಾಲಹಳ್ಳಿ ಗ್ರಾಮ ಪಂಚಾಯತ ಅಧ್ಯಕ್ಷರಾದ ಅಶೋಕ ಮೋತಿರಾಮ, ಬೀದರ ವಿಶ್ವವಿದ್ಯಾಲಯದ ಸಿಂಡಿ-ಕೇಟ್ ಸದಸ್ಯರಾದ ನಾಗಭೂಷಣ ಮುಡೆಪ್ಪಾ ಕಮಠಾಣೆ, ಬಿಸಿ. ಶಾಂತಲಿಂಗ ಸಾವಳಗಿ, ಶಿವನಾಥ ಎಂ.ಪಾಟೀಲ, ಸಚಿನ ಶಿವರಾಜ, ವಿಠಲದಾಸ ದೇವಿದಾಸ ಪ್ಯಾರೆ, ಅರ್ಜುನ ಮರೆಪ್ಪಾ ಕನಕ, ಅಬ್ದುಲ್ ಸತ್ತಾರ ಚಾಂದಸಾಬ್, ಕು.ವೈಷ್ಣವಿ ಪಾಟೀಲ, ಶಿಕ್ಷಣ ನಿಕಾಮ, ಡೀನರು ಹಾಗೂ ಸಿಂಡಿಕೇಟ್ ಸದಸ್ಯರು, ಬೀದರ ವಿಶ್ವವಿದ್ಯಾಲಯದ ಕುಲಸಚಿವರಾದ ಸುರೇಖಾ, ಮೌಲ್ಯಮಾಪನ ಕುಲಸಚಿವರಾದ ಪ್ರೋ.ಪರಮೇಶ್ವರ ನಾಯಕ, ಶಿಕ್ಷಣ ಸಿಕಾಯ ಡೀನರು ಹಾಗೂ ಬೀದರ ವಿಶ್ವವಿದ್ಯಾಲಯದ ಸಿಂಡಿಕೇಟ್ ಸದಸ್ಯರಾದ ಡಾ.ಮಲ್ಲಿಕಾರ್ಜುನ ಕನಕಟ್ಟೆ, ನಿವೃತ್ತ ಪ್ರಧ್ಯಾಪಕರು, ಬೋಧಕ ಬೋಧಕೇತರು ಸಿಬ್ಬಂದಿ ವರ್ಗದವರು ಸೇರಿದಂತೆ ವಿದ್ಯಾರ್ತಿಗಳು ಉಪಸ್ಥಿತರಿದ್ದರು.

# ಮಹಾದೇವ ಜಾತ್ರಾ ನಿಮಿತ್ಯ ಅದ್ದೂರಿ ಮೆರವಣಿಗೆ

ಮಲ್ಲಮ್ಮ ನುಡಿ ವಾರ್ತೆ

ಕಮಲನಗರ:

ತಾಲೂಕಿನ ಕೋಟಗ್ಯಾಳ ಗ್ರಾಮದಲ್ಲಿ ಮಹಾದೇವರ 4ನೇ ಜಾತ್ರಾ ಮಹೋತ್ಸವ ನಿಮಿತ್ಯ ಹಮ್ಮಿಕೊಂಡ ಅದ್ದೂರಿ ಮೆರವಣಿಗೆ ಶನಿವಾರ ಅದ್ದೂ-ರಿಯಾಗಿ ಜರುಗಿತು.

ಮೆರವಣಿಗೆಯಲ್ಲಿ ಸತತವಾಗಿ ಏಳು ದಿವಸ ಪ್ರವಚನ ನೀಡಿದ ಶಿವಾಣಿ ಹಲಬರ್ಗಾ ಶ್ರೀಗಳಾದ ಪೂಜ್ಯ ಶ್ರೀ ಹಾವಗಿಲಿಂಗೇಶ್ವರ ಶಿವಾಚಾರ್ಯ ಸ್ವಾಮೀಜಿ



ಗಳಿಗೆ ಸರಾಟೆಯಲ್ಲಿ ಗ್ರಾಮದ ಪ್ರಮುಖ ಬೀದಿ ಗಳ ಮೂಲಕ ಮೇರೇವಣಿಗೆ ನಡೆದು ಬಂತು.

ಕಾರ್ಯಕ್ರಮದಲ್ಲಿ ಮಹದೇವ್ ಚಾರಿಟಬಲ್ ಟ್ರಸ್ಟ್ ಅಧ್ಯಕ್ಷರಾದ ಕೈಲಾಶ್ ಪಾಟೀಲ, ಉಪಾಧ್ಯಕ್ಷರಾದ ಸಂಗಮೇಶ್ ಹಾಜ್ನಾಳೆ, ಕಿರಣ್ ಪಾಟೀಲ್, ಅನಿಲ್ ಮೇನ್ಕಿರೆ, ಕಾಶಿನಾಥ್ ಪಾಟೀಲ್, ಶಂಕರ್ ಸ್ವಾಮಿ, ಚನ್ನಬಸವ ಸ್ವಾಮಿ, ಮಹದೇವ ಮಹಾಜನ್, ಮನ್ಮಥ ಮಹಜನ, ಧನರಾಜ ಕೋಟೆ ಸೂರ್ಯಕಾಂತ್ ಬೀರಾದರ್, ಶಿವಕುಮಾರ್ ಕೋಟೆ, ಶಿವಕುಮಾರ ಸ್ವಾಮಿ, ನಾಗರಾಜ ಸ್ವಾಮಿ ಸೇರಿದಂತೆ ಅಕ್ಕನ ಬಳಗ ಹಾಗೂ ಅಣ್ಣ ಬಳಗದವರು ಇದ್ದರು.

# ಡಾ ಬಾಬು ಜಗಜೀವನ್ ರಾಮ್ ಅವರ 118 ನೇ ಜನ್ಮದಿನಾಚರಣೆ

ಮಲ್ಲಮ್ಮ ನುಡಿ ವಾರ್ತೆ

ಲಿಂಗಸಗೂರು.ಎ.5.–ಸ್ವತಂತ್ರ ಭಾರತಕ್ಕಾಗಿ ದೇಶದ ಜನರನ್ನು ಒಗ್ಗೂಡಿಸಿ ಹೋರಾಟದ ಮುಂದಾಳತ್ವವನ್ನು ವಹಿಸಿ ಶೋಷಿತರಿಗೆ ಸಾಮಾಜಿಕ ನ್ಯಾಯ ಒದಗಿಸಿದ ಮಹಾ ಪುರುಷ ಡಾ ಬಾಬು ಜಗಜೀವನ್ ರಾಮ್ ಅವರಾಗಿದ್ದರು ಎಂದು ಸಹಾಯಕ ಆಯುಕ್ತ ಬಸವಣ್ಣಪ್ಪ ಕಲಶೆಟ್ಟಿ ಹೇಳಿದರು.

ಅವರು ತಾಲೂಕ ಪಂಚಾಯತ್, ತಾಲೂಕ ಆಡಳಿತ, ಪುರಸಭೆ, ಹಾಗೂ ಸಮಾಜ ಕಲ್ಯಾಣ ಇಲಾಖೆ ಇವರ ಸಂಯುಕ್ತಾಶ್ರಯದಲ್ಲಿ ಪಟ್ಟಣದ ಪದವಿ ಪೂರ್ವ ಕಾಲೇಜಿನಲ್ಲಿ ಹಮ್ಮಿಕೊಳ್ಳಲಾಗಿದ್ದ ಭಾರತದ ಮಾಜಿ ಉಪ ಪ್ರಧಾನಿ ಹಸಿರು ಕ್ರಾಂತಿಯ ಹರಿಕಾರ ಡಾ ಬಾಬು ಜಗಜೀವನ್ ರಾಮ್ ಅವರ 118 ನೇ ಜನ್ಮದಿನಾಚರಣೆಯ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡುತ್ತಾ ಡಾಕ್ಟರ್ ಬಾಬು ಜಗಜೀವನ್ ರಾಮ್ ಅವರು ಸ್ವಾತಂತ್ರ್ಯ ಪ್ರೇಮಿ ಶೋಷಿತರ ಸಮಾಜಿಕ ನ್ಯಾಯದ ಪರವಾಗಿದ್ದರು ಎಂದು ಹೇಳಿದರು.

ಕಾರ್ಯಕ್ರಮ ಉದ್ದೇಶಿಸಿ ಗ್ಯಾರಂಟಿ ಯೋಜನೆಗಳ ಜಿಲ್ಲಾಧ್ಯಕ್ಷ ಪಾಮಯ್ಯ ಮುರಾರಿ, ಪುರಸಭೆ ಅಧ್ಯಕ್ಷ ಬಾಬುರೆಡ್ಡಿ ಮುನ್ನೂರ, ಪೊಲೀಸ್ ಉಪವಿಭಾಗಾಧಿಕಾರಿ



ದತ್ತಾತ್ರೇಯ ಕಾರ್ನಾಡ ಅವರು ಡಾ ಬಾಬು ಜಗಜೀವನ್ ರಾಮ್ ಅವರ ಕುರಿತು ಮಾತನಾಡಿದರು.

ಪ್ರಾಧ್ಯಾಪಕರಾದ ಮಂಜುನಾಥ್ ಕೆ ಅವರು ಡಾ ಬಾಬು ಜಗಜೀವನ್ ರಾಮ್ ಅವರ ಜೀವನ ಚರಿತ್ರೆಯ ಕುರಿತು ವಿಶೇಷ ಉಪನ್ಯಾಸ ನೀಡಿದರು. ಸಮಾಜ ಕಲ್ಯಾಣ ಇಲಾಖೆಯ ಸಹಾಯಕ ನಿರ್ದೇಶಕ ರವೀಂದ್ರ ಉಪ್ಪಾರ್ ಅವರು ಪ್ರಾಸ್ತಾವಿಕವಾಗಿ ಮಾತನಾಡಿದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ತಹಸಿಲ್ದಾರ್ ಶಂಶಾಲಂ ವಹಿಸಿದ್ದರು. ಕಾರ್ಯಕ್ರಮದಲ್ಲಿ ಎಪಿಎಂಸಿ ಅಧ್ಯಕ್ಷ ಅಮರೇಶ್ ಹಿರೇಹೆಸರೂರು, ಪಿಕಾರ್ಡ್ ಬ್ಯಾಂಕ್ ಅಧ್ಯಕ್ಷ ಬಸನಗೌಡ ಮೇಟಿ. ತಾಲೂಕ ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿ ಉಮೇಶ್, ಸಿಡಿಪಿಓ ಎಂ ಡಿ ಗೋಕುಲ್ ಹುಸೇನ್, ಕ್ಷೇತ್ರ ಶಿಕ್ಷಣಾಧಿಕಾರಿ ಹುಂಬಣ್ಣ ರಾಠೋಡ, ಡಾ ರಾಚಪ್ಪ, ತಾಲೂಕ ಸರ್ಕಾರ ನೌಕರ ಸಂಘದ ಅಧ್ಯಕ್ಷ ಹಾಜಿಬಾಬು ಕಲ್ಯಾಣಿ, ಅಲ್ಪಸಂಖ್ಯಾತರ ಇಲಾಖೆಯ ಷಡಕ್ಷರಿ ಹಾದಿಮನಿ, ಮಹಮ್ಮದ್ ಹುಸೇನ್, ರಮೇಶ್ ರಾಠೋಡ್, ಹನುಮಂತ, ಚಂದ್ರಶೇಖರ್, ಮಂಜುಳಾ ಅಸುಂಡಿ, ದೇವರಾಜ್ ಹನುಮಂತ ಇತರ ಅಧಿಕಾರಿಗಳು ಉಪಸ್ಥಿತರಿದ್ದರು.

ಇದೇ ಸಂದರ್ಭದಲ್ಲಿ ಹೆಚ್ಚು ಅಂಕ ಪಡೆದ ವಿದ್ಯಾರ್ಥಿಗಳಿಗೆ ಹಾಗೂ ವಿವಿಧ ಕ್ಷೇತ್ರದಲ್ಲಿ ಸಾಧನೆಗೈದ ಸಾಧಕರನ್ನು ಗುರುತಿಸಿ ತಾಲೂಕ ಆಡಳಿತದಿಂದ ಸನ್ಮಾನಿಸಲಾಯಿತು.

ಕಾರ್ಯಕ್ರಮವನ್ನು ರವಿಹಟ್ಟಿ ಸ್ವಾಗತಿಸಿದರೆ ಶಿಕ್ಷಕ ಸಂಗಮೇಶ್ ಕಾರ್ಯಕ್ರಮ ನಿರೂಪಣೆ ಮಾಡಿದರು. ಕೊನೆಯಲ್ಲಿ ರವಿಕುಮಾರ್ ವಂದಿಸಿದರು.

# ರಾಚೋಟೇಶ್ವರ ಮೇಲೆ ಭಕ್ತಿ ಶ್ರದ್ಧೆ ಇಟ್ಟರೆ ಇಷ್ಟಾರ್ಥಗಳು ಸಿದ್ಧಿಯಾಗುತ್ತವೆ:- ಹೊನ್ನಲಿಂಗೇಶ್ವರ ಮಹಾಸ್ವಾಮಿ



ಮಲ್ಲಮ್ಮ ನುಡಿ ವಾರ್ತೆ

ಹುಮನಾಬಾದ:- ಮಠ ಮಂದಿರಗಳು ಶಾಂತಿ ಸೌಹಾರ್ದತೆ ಒಡಮುಡಿಸುವ ಕೇಂದ್ರಗಳಾಗಿವೆ ಎಂದು ಹಳ್ಳಿಖೇಡ ಹಿರೇಮಠದ ಪಂಡಿತರಾಧ್ಯ ಶಿವಾಚಾರ್ಯರು ತಾಲೂಕಿನ ಸಿಂಧನಕೇರ ರಾಚೋಟೇಶ್ವರ ವಿರಕ್ತ ಮಠದ ಉತ್ಸವ ಹಾಗೂ ಧಾರ್ಮಿಕ ಪ್ರವಚನ ಹಾಗೂ ಧಾರ್ಮಿಕ ಪ್ರವಚನ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡುತ್ತಾ ತಿಳಿಸಿದರು, ಸಿಂಧನಕೇರಾ ರಾಚೋಟೇಶ್ವರ ವಿರಕ್ತಮಠ ಪುರಾತನ ಮಠಗಳಲ್ಲಿ ಒಂದಾಗಿದೆ, ಈ ಮಠದ ಆಧಿಪತಿಗಳಾದ ಹೊನ್ನಲಿಂಗೇಶ್ವರ ಸ್ವಾಮಿಗಳು ಅತ್ಯುತ್ತಮವಾಗಿ ಭಕ್ತಾದಿಗಳಲ್ಲಿ ಧಾರ್ಮಿಕ ಪ್ರಜ್ಞೆ ಒಡ ಮೂಡಿಸುವಂತಹ ಕೆಲಸ ಮಾಡುತ್ತಿರುವುದು ಶ್ಲಾಘನಿಯವಾಗಿದೆ, ಹೊನ್ನಲಿಂಗೇಶ್ವರ ಸ್ವಾಮಿಗಳು ಸರಳ ಜೀವಿಗಳಾಗಿದ್ದಾರೆ, ರಾಚೊಟೇಶ್ವರರ ಸಂದೇಶಗಳನ್ನು ಮನೆ ಮನೆಗೆ ಮುಟ್ಟಿಸುವಂತಹ ಕೆಲಸ ಮಾಡುತ್ತಿರುವುದು ಶ್ಲಾಘನೀಯವಾಗಿದೆ ಎಂದರು. ಹೊನ್ನಲಿಂಗೇಶ್ವರ ಸ್ವಾಮಿಗಳು ಮಾತನಾಡಿ ರಾಚೋಟೇಶ್ವರ ಮೇಲೆ ಭಕ್ತಿ ಶ್ರದ್ಧೆ ಇಟ್ಟರೆ ನಿಮ್ಮ ಇಷ್ಟಾರ್ಥಗಳು ಸಿದ್ಧಿಯಾಗುತ್ತವೆ ಎಂದರು. ಎಪಿಎಂಸಿ ಮಾಜಿ ಅಧ್ಯಕ್ಷ ಭದ್ರೇಶ ಪಾಟೀಲ್, ಹಾಸ್ಯ ಕಲಾವಿದ ನವಲಿಂಗ್ ಪಾಟೀಲ್, ರೇವಣ್ಣಸಿದ್ದಯ್ಯಾ ಮಠಪತಿ ಹಾಗೂ ಪ್ರಶಾಂತ ಮಠಪತಿ ಇವರಿಂದ ವಿಶೇಷ ದಾಸೋಹ ಜರುಗಿತ್ತು. ಹಾಸ್ಯ ಪ್ರದರ್ಶಿಸಿದರು. ಪಲ್ಲಕ್ಕಿ ಉತ್ಸವ ಅಂಗವಾಗಿ ವಿಶೇಷ ಮಹಾಪ್ರಸಾದ ಜರುಗಿತು, ಛತ್ರಪ್ಪ ಹಡಪದ ತಬಲಾ ಸೇವೆ ಸಲ್ಲಿಸಿದರು. ಈ ಸಂದರ್ಭದಲ್ಲಿ ಶಂಕರರಾವ ಚೇಲವಂತ, ರಾಜು ಕಟ್ಟಿಮನಿ, ಕಂಟೇಪ್ಪ ಶಿವಪೂಜಿ, ಭೀಮರಾವ ಮೊಳಕೇರಿ, ಪಿಕೆಪಿಎಸ್ ಅಧ್ಯಕ್ಷ ಪ್ರಭು ಮರಕಲ್, ಸದಸ್ಯರಾದ ಶಿವಕುಮಾರ್ ರೇಕುಳಗಿ , ಶಿವಲಿಂಗ ಮೂಲಗಿ, ಹಸೀನಾ ಬೇಗಂ, ವಿಜಯಕುಮಾರ್ ಬೋಳಗೈ ಸೇರಿದಂತೆ ಇತರರು ಉಪಸ್ಥಿತರಿದ್ದರು. ವೀರಣ್ಣ ಕುಂಬಾರ್ ಕಾರ್ಯಕ್ರಮ ನಿರೂಪಿಸಿದರು. ರೇವಣಸಿದ್ಧ ಮರಕಲೇ ವಂದಿಸಿದರು.


# ನಿಂತಿದ್ದ ಲಾರಿಗೆ ಟೆಂಪೋ ಟ್ರ್ಯಾವೆಲರ್ ಡಿಕ್ಕಿ: ಐವರ ಸಾವು

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಏ.5: ನಿಂತಿದ್ದ ಲಾರಿಗೆ ಟೆಂಪೋ ಟ್ರ್ಯಾವೆಲರ್ ಡಿಕ್ಕಿಹೊಡೆದ ಪರಿಣಾಮ ಐವರು ಸ್ಥಳದಲ್ಲೇ ಸಾವನ್ನಪ್ಪಿದ ಘಟನೆ ಜೇವರ್ಗಿ ಸಮೀಪದ ಸೊನ್ನ ಕ್ರಾಸ್ ಬಳಿ ಇಂದು ನಸುಕಿನ ಜಾವ ನಡೆದಿದೆ.


ಮಾಲನ್ (52), ವಾಜೀದ್ (2), ಮೆಹಬೂಬ್ ಬಿ (53), ಮೆಹಬೂಬ್ (29) ಹಾಗೂ ಪ್ರಿಯಾಂಕಾ (13) ಸಾವನ್ನಪ್ಪಿದ್ದು, 11 ಮಂದಿ ಗಾಯಗೊಂಡಿ-ದ್ದಾರೆ. ಮೃತರ ಪೈಕಿ ನಾಲ್ವರು ಒಂದೇ ಕುಟುಂಬದವರಾಗಿದ್ದು, ಪ್ರಿಯಾಂಕಾ ಈ ಕುಟುಂಬದ ನೆರೆಮನೆಯ ಬಾಲಕಿ ಎಂದು ಪೊಲೀಸರು ತಿಳಿಸಿದ್ದಾರೆ.

# ಡಾ.ಬಾಬು ಜಗಜೀವನರಾಮ ದೇಶದ ಹಸಿರು ಕ್ರಾಂತಿಯ ಹರಿಕಾರ:- ಲಾಲಪ್ಪ ರಾಂಪುರ



ಮಲ್ಲಮ್ಮ ನುಡಿ ವಾರ್ತೆ

ಚಿಟಗುಪ್ಪ: 'ಅಧಿಕಾರ ಮತ್ತು ಐಶ್ವರ್ಯದಿಂದಗಳಿಸಲಾಗದ ಕೀರ್ತಿಯನ್ನು ಸೇವೆ, ತ್ಯಾಗದಿಂದ ಸಂಪಾದಿಸಬಹುದು ಎನ್ನುವ ಸಂದೇಶ ಸಾರಿದ ಹೆಗ್ಗಳಿಕೆ ಡಾ. ಬಾಬು ಜಗಜೀವನರಾಮ ಅವರಿಗೆ ಸಲ್ಲುತ್ತದೆ ಎಂದು ಡಾ. ಬಾಬು ಜಗಜೀವನರಾಮ ಸಂಘಟನೆಯ ಅಧ್ಯಕ್ಷ ಲಾಲಪ್ಪ ಎಲ್. ರಾಂಪುರೆ ಹೇಳಿದರು. ತಾಲೂಕಿನ ನಿರ್ಣಾ ಗ್ರಾಮದಲ್ಲಿ ಮಾಜಿ ಉಪ ಪ್ರಧಾನಿ ಬಾಬು ಜಗಜೀವನರಾಮ ಅವರ 118ನೇ ಜನ್ಮ ದಿನಾಚರಣೆ ಕಾರ್ಯಕ್ರಮದ ಮಾತನಾಡಿದ ಅವರು, ಸಮಾಜ ಸುಧಾರಣೆ ಹಾಗೂ ಎಲ್ಲರೂ ಸಮಾನವಾಗಿ ಜೀವನ ನಡೆಸಬೇಕು ಎನ್ನುವ ಮಹತ್ವಾಕಾಂಕ್ಷೆಯನ್ನು ಅವರು ಹೊಂದಿದ್ದರು. ಕಾರ್ಮಿಕರ ಏಳಿಗೆಯನ್ನು ಸದಾ ಬಯಸುತ್ತಿದ್ದರು. ದೇಶದ ಜನರು ಅಹಾರ ಕೊರತೆ ಅನುಭವಿಸುತ್ತಿರುವುದನ್ನು ಕಂಡು ಹಸಿರು ಕ್ರಾಂತಿ ಪ್ರಾರಂಭಿಸಿ ನೆರವಾದರು ಎಂದು ತಿಳಿಸಿದರು. ಈ ಸಂದರ್ಭದಲ್ಲಿ ಗ್ರಾಮ ಪಂಚಾಯತ್ ಅಧ್ಯಕ್ಷ ಸಂಜೀವಕುಮಾರ ಕಿರಣ, ಪ್ರಧಾನ ಕಾರ್ಯದರ್ಶಿ ಬಸವರಾಜ ಎಸ್ ಸೊಂಡಿ, ಉಪಾಧ್ಯಕ್ಷ ಸುಭಾಸ ಟಿ ಸೊಂಡಿ, ನಾಗರಾಜ ಆರ್ ರಾಂಪೂರೆ, ಖಜಾಂಚಿ ಶಂಭುಲಿಂಗ ಜಿ. ಧೂಳ, ಸದಸ್ಯರಾದ, ಈಶ್ವರ ಬಿ. ಅಳ್ಳಿಗಿಡ, ದೇವಿಡ್ ಅಳ್ಳಿಗಿಡ, ಬಸವರಾಜ ದುರ್ಗಿ, ಸುನೀಲ ಜುಲ್ಫೆ. ರಾಜಕುಮಾರ ದುರ್ಗಿ, ಸೂರ್ಯಕಾಂತ, ಸುರೇಶ ಶರ್ಮಾ ಶಂಕರ ಚಾಂಗಲೇರಾ, ವಿಕ್ಕಿ ಕುಡಂಬಲ, ಗ್ರಾಮ ಸದಸ್ಯರಾದ ಸತೀಶ ಕೆಳಮನಿ, ಮಹೇಶ ಜೋಗಣಿ, ತಿರುಪತಿ, ನಿರ್ಣಾವಾಡಿ, ಲಕ್ಷ್ಮಣ ಸಾತನೂರ, ಬಾಬು ಅಳ್ಳಿಗಿಡ. ಗೋಪಾಲ ಜೋಗಣೆ, ಮಂಜುನಾಥ ಜೋಗಣಿ, ತಿಪ್ಪಣ್ಣಾ ಮಾಳೆ. ಭರತರೆಡ್ಡಿ ಚಿಟನಳ್ಳಿ, ರಮೇಶ ಸೂಣದೂರ, ಸುಧಾಕರ ಹಲಗಿ. ಕಲ್ಲಪ್ಪಾ ರೇವಣನಾಯಕ, ಅಮರ ಕೇಳಮನಿ, ಸೀಮಾ ಉಡಬಾಳ, ವಿನೋದ ಮಂಗಲಗಿ, ಪ್ರಶಾಂತ ಮುತ್ತಂಗಿ. ಶಿವರಾಜ ಹಳ್ಳಿಖೇಡ, ವೀರಪ್ಪಾ ಕೊಡದೂರ, ಸುಭಾಶ ಜಿ. ಸೊಂಡಿ ರವಿ ಚಿರಚಿ, ಸೇರಿದಂತೆ ಸಮಾಜದ ಮುಖಂಡರು ಗ್ರಾಮದ ಪ್ರಮುಖರು ಉಪಸ್ಥಿತರಿದ್ದರು.



ಚಿಟಗುಪ್ಪ:- ಇಲ್ಲಿಯ ಸರ್ಕಾರಿ ಕನ್ಯಾ ಪ್ರೌಢ ಶಾಲೆಯಲ್ಲಿ ಸೇವಕಿಯಾಗಿ ಸುಮಾರು 25 ವರ್ಷದಿಂದ ಉತ್ತಮ ಸೇವೆ ಸಲ್ಲಿಸುತ್ತಿರುವ ಮಲ್ಲಮ್ಮ ಹುಡಗಿ ಅವರನ್ನು ಶನಿವಾರ ಸಮಾಜ ಕಾರ್ಯಕರ್ತ ಮಹಮ್ಮದ್ ಅಸ್ಲಾಂಮಿಯಾ ಅವರು ವಿಶ್ವ ಗುರು ಬಸವಣ್ಣನವರ ಭಾವಚಿತ್ರ ಸನ್ಮಾನಿಸಿ ಶುಭಾಶಯ ಕೋರಿದರು. ಈ ಸಂದರ್ಭದಲ್ಲಿ ಶಾಲೆಯ ಪ್ರಭಾರಿ ಮುಖ್ಯ ಶಿಕ್ಷಕ ಬಸವರಾಜ ಮೇತ್ರೆ, ಉಪಖಜಾನೆ ಅಧಿಕಾರಿ ವೆಂಕಟಪ್ಪ, ಸಂಜೀವನ ಭೋಸ್ಲೆ, ಪಂಚಶೀಲ ಕಟ್ಟಿಮನಿ, ಅಂಬಿಕಾ ಮಾಳಗೆ, ಸಾದಿಯಾ ಸುಲ್ತಾನಾ, ಹಸನ್, ಚಂದ್ರಕಾಂತ, ರಾಜಕುಮಾರ ಆರ್. ಹಡಪದ ಸೇರಿದಂತೆ ಇತರರು ಉಪಸ್ಥಿತರಿದ್ದರು. (ಮಲ್ಲಮ್ಮ ನುಡಿ ಚಿತ್ರ)

# ಹೃದಯ ಸದ್ಭಾವನೆಯ ಆಲಯವಾಗಲಿ – ಹಾರಕೂಡ ಶ್ರೀ.



ಮಲ್ಲಮ್ಮ ನುಡಿ ವಾರ್ತೆ

ಬಸವಕಲ್ಯಾಣ :- ಏ 5 ಪ್ರತಿ ಮನುಷ್ಯನ ಹೃದಯ ಸದ್ಭಾವನೆಗಳ ಆಲಯವಾದಾಗ ಇಡೀ ಸಮಾಜ ದೈವತ್ವದ ಗಣಿಯಾಗಿ ರೂಪುಗೊಳ್ಳುತ್ತದೆ ಎಂದು ಹಾರಕೂಡದ ಪೂಜ್ಯಶ್ರೀ ಡಾ. ಚನ್ನವೀರ ಶಿವಾಚಾರ್ಯರು ನುಡಿದರು.

ತಾಲೂಕಿನ ಬೋಸಗಾ ಗ್ರಾಮದಲ್ಲಿ ನೂತನವಾಗಿ ನಿರ್ಮಿಸಿದ ಶ್ರೀ ಬೀರಲಿಂಗೇಶ್ವರ ಹಾಗೂ ಮಾಳಿಂಗರಾಯ ದೇವಸ್ಥಾನದ ಕಳಸಾರೋಹಣ ಮತ್ತು ಮೂರ್ತಿ ಪ್ರತಿಷ್ಠಾಪನೆ ಸಮಾರಂಭದ ಪಾವನ ಸಾನಿಧ್ಯ ವಹಿಸಿ ಮಾತನಾಡಿದ ಶ್ರೀಗಳು, ಬುದ್ಧಿವಂತಿಕೆಗಿಂತ ಹೃದಯವಂತಿಕೆ ಶ್ರೇಷ್ಠವಾಗಿದ್ದು, ಹೃದಯದ ಫಲವತ್ತತೆಯಿಂದ ಜೀವನ ಉಜ್ವಲಗೊಳ್ಳುತ್ತದೆ.

ಬೀರಲಿಂಗೇಶ್ವರ ಹಾಗೂ ಮಾಳಿಂಗರಾಯರು ಶ್ರೇಷ್ಠ ಆಧ್ಯಾತ್ಮ ಜೀವಿಗಳಾಗಿದ್ದು ಅವರ ಸಾತ್ವಿಕ ಸಂದೇಶ ಬದುಕಿನಲ್ಲಿ ಅಳವಡಿಸಿಕೊಂಡರೆ ಶ್ರೇಯಸ್ಸು ಲಭಿಸುತ್ತದೆ.

ಅವರ ಆದರ್ಶ ಜೀವನ ಇಂದಿಗೂ ಪ್ರಸ್ತುತ.

ಬೀರಲಿಂಗೇಶ್ವರ ಮತ್ತು ಮಾಳಿಂಗರಾಯರ ದೇವಸ್ಥಾನ ನಿರ್ಮಿಸಿ ಮೂರ್ತಿ ಪ್ರಾಣ ಪ್ರತಿಷ್ಠಾಪನೆ ಹಾಗೂ ಕಳಸಾರೋಹಣ ಮಾಡಿರುವುದು ಬೋಸಗಾ ಗ್ರಾಮದ ಜನತೆಯ ಅನನ್ಯ ಭಕ್ತಿಗೆ ನಿದರ್ಶನವಾಗಿದ್ದು ಹಾರಕೂಡ ಚನ್ನಬಸವ ಶಿವಯೋಗಿಗಳು ಸರ್ವರಿಗೂ ಮಂಗಳವನ್ನುಂಟು ಮಾಡಲಿ ಎಂದು ಶುಭ ಹಾರೈಸಿದರು.

ಸಂದೀಪ ಮಹಾರಾಜ ಮಾತನಾಡಿದರು. ಈ ಸಂದರ್ಭದಲ್ಲಿ

ಬಾಬು ಪೂಜಾರಿ ಕೋಹಿನೂರ, ಬೀರಪ್ಪ ಮುತ್ಯಾ ಗೌರ, ಬಾಬು ಪೂಜಾರಿ ಮನ್ನಳ್ಳಿ, ವಿಜಯಕುಮಾರ ಪಾಟೀಲ, ಮಹಾದೇವಪ್ಪ ಖೂಬಾ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

ಕಾರ್ತಿಕ ಸ್ವಾಮಿ ಯಲದಗುಂಡಿ ಪ್ರಾರ್ಥನೆ ಗೀತೆ.

ವಿಲಾಸ ಪೂಜಾರಿ ನಿರೂಪಿಸಿದರು.

ಕಾರ್ಯಕ್ರಮಕ್ಕೂ ಮೊದಲು ಹಾರಕೂಡ ಶ್ರೀಗಳ ಅದ್ದೂರಿ ಮೆರವಣಿಗೆ ಜರುಗಿತು.

# ಸಮಾಜದಲ್ಲಿ ಅಸ್ಪೃಶ್ಯತೆ ಬಡತನ ನಿರುದ್ಯೋಗ ಹೋಗಲಾಡಿಸಲು ಶ್ರಮಿಸಿದ ಮಹಾನ್ ವ್ಯಕ್ತಿ ಡಾ. ಬಾಬು ಜಗಜೀವನರಾಮ್;ಮಹಾಪೌರ ಯಲ್ಲಪ್ಪ ನಾಯ್ಕೋಡಿ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ: ಏ. 05: ಸಮಾಜದಲ್ಲಿ ಅಸ್ಪಶ್ಯತೆ, ಬಡತನ ನಿರುದ್ಯೋಗ ಮತ್ತು ಹಸಿವು ಈ ಎಲ್ಲ ಸಮಸ್ಯೆಗಳು ನಿವಾರಿಸುವಲ್ಲಿ ಶ್ರಮಿಸಿದ ಹಸಿರು ಕ್ರಾಂತಿ ಹರಿಕಾರ ಡಾ. ಬಾಬು ಜಗಜೀವನರಾಮ್ ರವರು ಮಹಾನ್ ವ್ಯಕ್ತಿಯಾಗಿದ್ದಾರೆ ಎಂದು ಮಹಾನಗರ ಪಾಲಿಕೆಯ ಮಹಾಪೌರರಾದ ಪೂಜ್ಯ ಯಲ್ಲಪ್ಪ ನಾಯ್ಕೋಡಿ ಅವರು ಹೇಳಿದರು.

ಶನಿವಾರದಂದು ಟೌನ್ ಹಾಲ್‌ನಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಸಮಾಜ ಕಲ್ಯಾಣ ಇಲಾಖೆ, ಮಹಾನಗರ ಪಾಲಿಕೆ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಇವುಗಳ ಸಂಯುಕ್ತಾಶ್ರಯದಲ್ಲಿ ಭಾರತದ ಮಾಜಿ ಉಪಪ್ರಧಾನಿ ಹಾಗೂ ಹಸಿರು ಕ್ರಾಂತಿಯ ಹರಿಕಾರ ಡಾ.ಬಾಬುಜಗಜೀವನರಾಂರವರ 118ನೇ ಜಯಂತ್ಯೋತ್ಸವದಲ್ಲಿ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿ ಪ್ರತಿಮೆಗೆ ಮಾಲಾರ್ಪಣೆ ಮಾಡಿ ಮಾತನಾಡಿದರು.

ಹಸಿರು ಕ್ರಾಂತಿ ಹರಿಕಾರದ ಡಾ.ಬಾಬುಜಗಜೀವನರಾಮ್ ರವರು ದೇಶದಲ್ಲಿ ಆಹಾರ ಭದ್ರತೆ ಕಾಡುತ್ತಿರುವ ಸಂದರ್ಭದಲ್ಲಿ ಅವರು ತೆಗೆದುಕೊಂಡು ದಿಟ್ಟ ನಿರ್ಧಾರದಿಂದ ಹಲವಾರು ಸಮಸ್ಯೆಗಳು ನಿವಾರಣೆಯಾಗಲು ಸಾಧ್ಯವಾಯಿತು. ಭಾರತ ದೇಶದಲ್ಲಿ ಏಪ್ರಿಲ್ 5 ರಂದು ಸಂಭ್ರಮದ ದಿನಾಚರಣೆಯನ್ನು ಆಚರಿಸಲಾಗುತ್ತದೆ ಎಂದರು.

ದಕ್ಷಿಣ ಮತಕ್ಷೇತ್ರದ ಶಾಸಕರಾದ ಅಲ್ಲಮಪ್ರಭು ಪಾಟೀಲ್ ಅವರು ಅಧ್ಯಕ್ಷತೆ ವಹಿಸಿ ಮಾತನಾಡಿ, ಸಮಾಜದಲ್ಲಿ ಜಾತಿ ಬೇಧ ಮರೆತು ಸಮಾನತೆಗಾಗಿ ಶ್ರಮಿಸಿದ್ದ ಶ್ರೇಷ್ಠ ರಾಜಕೀಯ ಮುತ್ಸದ್ದಿಯಾಗಿದ್ದರು. ಎಂದು ಹೇಳಿದರು.

ದೇಶವು ಹಸಿವಿನಿಂದ ಬಳಲುತ್ತಿರುವ ಸಂದರ್ಭದಲ್ಲಿ ದೇಶದ ಪರಿಸ್ಥಿತಿ ಅರಿತುಕೊಂಡು ಒಂದು ರೂಪುರೇಷೆಯನ್ನು ತಯಾರಿಸಿಕೊಂಡು ರೈತರು ಆಹಾರ ಧಾನ್ಯದಲ್ಲಿ ಹೆಚ್ಚುವರಿ ಇಳುವರಿ ಪಡೆಯಲು ರೈತರಿಗೆ ನೀರಾವರಿ ಬೀಜ ಗೊಬ್ಬರ



ಆಧುನಿಕ ಕೃಷಿ ಸಲಕರಣೆಗಳನ್ನು ಪರಿಚಯಿಸುವುದರ ಮೂಲಕ ಕೃಷಿಯಲ್ಲಿ ಬದಲಾವಣೆ ತಂದರು.

ರೈತರು ಹೆಚ್ಚಿನ ಇಳುವರಿ ಮತ್ತು ಆರ್ಥಿಕ ಅಭಿವೃದ್ಧಿ ಕಾಣಲು ಸಾಧ್ಯವಾಯಿತು. ಸಿಕ್ಕಂತಹ ಅಧಿಕಾರವನ್ನು ದೇಶದ ಅಭಿವೃದ್ಧಿಗಾಗಿ ಮತ್ತು ದೇಶದ ಪ್ರತಿಯೊಂದು ಸಮಸ್ಯೆಗಳ ನಿವಾರಣೆಗಾಗಿ ಅವಿರತವಾಗಿ ಶ್ರಮಿಸಿದ ಮಹಾನ ವ್ಯಕ್ತಿಯೆಂದು ಹೇಳಿದರು

ಜಿಲ್ಲಾಧಿಕಾರಿ ಬಿ.ಫೌ–ಜಿಯಾ ತರನ್ನುಮ್ ಮಾತನಾಡಿ, ಸಮಾಜದಲ್ಲಿ ಜಾತಿಯತೆ ಅಸ್ಪಶ್ಯತೆ ಹೊಗಲಾಡಿಸಲು ಶ್ರಮಿಸಿದವರು. ಸತತ ಮೂವತ್ತು ವರ್ಷಗಳ ಕಾಲ ಸಂಪುಟ ದರ್ಜೆ ಸಚಿವರಾಗಿ ದೇಶದ ಅಭಿವೃದ್ಧಿಗಾಗಿ ಶ್ರಮಿಸಿದ ಮಹಾನ ನಾಯಕ ಇವರು, ಶಿಕ್ಷಣಕ್ಕೆ ಹೆಚ್ಚಿನ ಒತ್ತನ್ನು ನೀಡಿದವರು. ಶಿಕ್ಷಣದಿಂದ ಪ್ರತಿಯೊಬ್ಬ ವ್ಯಕ್ತಿಯೂ ಜೀವನದಲ್ಲಿ ಬದಲಾವಣೆ ಕಾಣಲು ಸಾಧ್ಯವಿದೆ ಎಂದು ಅವರು ನಂಬಿದವರು ಎಂದು ಹೇಳಿದರು.

ಹಸಿರು ಕ್ರಾಂತಿ ಮೂಲಕ ರೈತರು ಹೆಚ್ಚು ಇಳುವರಿ ಪಡೆಯಲು ಕಾರಣವಾದವರು ಆಹಾರ ಸಮಸ್ಯೆಯನ್ನು ಹೋಗಲಾಡಿಸಲು ಶ್ರಮಿಸಿದವರು. ಹಾಗೂ ಪ್ರತಿಯೊಂದು ಕಾರ್ಯದಲ್ಲಿ ಸಮನತೆಗಾಗಿ ಹೋರಾಡಿದರು.

ಪ್ರತಿಯೊಬ್ಬ ಪೋಷಕರು ತಮ್ಮ ಮಕ್ಕಳಿಗೆ ಶಿಕ್ಷಣವನ್ನು ನೀಡಿದ್ದಾಗ ಮಾತ್ರ ಒಳ್ಳೆಯ ಉದ್ಯೋಗ ಅಧಿಕಾರ ಪಡೆಯಲು ಸಾಧ್ಯವಿದೆ. ಎಲ್ಲಾ ಸಮಾಜದವರು ಒಗ್ಗೂಡಿ ಇಂತಹ ಮಹಾನ ವ್ಯಕ್ತಿಗಳ ಜೀವನ ಕುರಿತು ಅರಿತುಕೊಳ್ಳಬೇಕು. ಇವರ ಸಾಧನೆ ಇಂದಿನ ಜನಾಂಗಕ್ಕೆ ಸ್ಫೂರ್ತಿಯಾಗಬೇಕೆಂದು ತಿಳಿಸಿದರು.

ನಾವೆಲ್ಲರೂ ಒಂದೇ ಅವರ ಆದರ್ಶ ತತ್ವಗಳನ್ನು ಪಾಲಿಸಿಕೊಂಡು ಹೋಗಬೇಕು ಎಲ್ಲರೂ ಒಗ್ಗೂಡಿ ಜಯಂತಿ ಆಚರಣೆ ಮಾಡಿದಾಗ ಮಾತ್ರ ಇದು ಅರ್ಥಪೂರ್ಣ ಜಯಂತಿ ಆಗುತ್ತದೆ ಎಂದು ಹೇಳಿದರು.

ಚಿಂಚೋಳಿ ಸರಕಾರಿ ಪ್ರಥಮ ದರ್ಜೆ ಕಾಲೇಜು ಚಿಂಚೋಳಿ ಇತಿಹಾಸ ಅಧ್ಯಯನ ವಿಭಾಗ ಮುಖಸ್ಥರಾದ ಡಾ.ಮಲ್ಲಿಕಾರ್ಜುನ ಎಂ. ಸಾವರಕರ್ ಉಪನ್ಯಾಸ ನೀಡಿ ಮಾತನಾಡಿ, ಹಸಿರು ಕ್ರಾಂತಿ ಹರಿಕರ ದೀನ ದಲಿತರ ಉದ್ದಾರಕ ಭಾರತ ದೇಶದ ಉಪಪ್ರಧಾನಿಯಾಗಿ ಸಮಾಜಿಕ ಸೇವೆ ದೇಶದ ಅಭಿವೃದ್ಧಿಗಾಗಿ ಹಗಲಿರುಳು ಎನ್ನದೆ ಶ್ರಮಿಸದ ಮಹಾನ ವ್ಯಕ್ತಿ ಡಾ.ಬಾಬು ಜಗಜೀವನರಾಮ್ .ದೇಶದ ವಸಹಾತುಶಾಹಿಮುಕ್ತಿಪಡೆಯುವ ಸಂದರ್ಭದಲ್ಲಿ ಜಾತಿಯತೆ, ಅನಕ್ಷರತೆ, ಬಡತನ, ಇಂತಹ ಸಮಸ್ಯೆಗಳನ್ನು ಎದುರಿಸುತ್ತಿದ್ದಂತಹ ಸಂದರ್ಭದಲ್ಲಿ ಅವರ ಕೊಡುಗೆ ಅಪರವಾಗಿತ್ತು.

ಅಸ್ಪಶ್ಯತೆ ಮತ್ತು ಜಾತೀಯತೆಯನ್ನು ನಿರ್ಮೂಲನೆಯನ್ನು ಮಾಡುವಲ್ಲಿ ಪ್ರಮುಖ ಪಾತ್ರವನು ವಹಿಸುತ್ತಾರೆ ತಮ್ಮ ರಾಜಕೀಯ ಅಧಿಕಾರದಲ್ಲಿ ಸಮಾಜ ಸುಧಾರಣೆ ದೇಶದ ಸಮಸ್ಯೆಗಳ ನಿರ್ಮೂಲನೆ ಮಾಡುವಲ್ಲಿ ಪ್ರಮುಖವಾದ ಪಾತ್ರವನ್ನು ವಹಿಸುತ್ತಾರೆ ಎಂದರು.

ಇದೇ ಪ್ರಬಂಧ ಸ್ಪರ್ಧೆ ವಿಜೇತ ಕಲಬುರಗಿ ಮೇಟ್ರಿಕ್ ಪೂರ್ವ ಬಾಲಕಿಯರ ವಸತಿ ನಿಲಯ, ಪ್ರಬಂಧ ಸ್ಪರ್ಧೆಗಳಲ್ಲಿ ಭಾಗವಹಿಸಿದ್ದ ವಿದ್ಯಾರ್ಥಿಗಳಿಗೆ ಪ್ರಥಮ ಸ್ಥಾನ ಬಸಮ್ಮ ದೌಲಪ್ಪ, ದ್ವಿತೀಯ ಸ್ಥಾನ ಭಾಗ್ಯಶ್ರೀ ಶರಣಬಸು ಎಸ್‌ಟಿ.ಪೋಸ್ಟ್ ಮೇಟ್ರಿಕ್ ಬಾಲಕಿಯರ ವಸತಿ ನಿಲಯ ಶಾಂತಾ ಹರಿಶ್ಚಂದ್ರ ಪ್ರಥಮ, ಲಕ್ಷ್ಮೀ ಬಸಪ್ಪ ದ್ವಿತೀಯ ಸ್ಥಾನ ಪಡೆದ ವಿದ್ಯಾರ್ಥಿಗಳಿಗೆ ಪ್ರಶಸ್ತಿ ಪತ್ರಗಳನ್ನು ನೀಡಿ ಗೌರವಿಸಲಾಯಿತು.

ಸಭೆಯಲ್ಲಿ ಪಂಚಗ್ಯಾರಂಟಿ ಯೋಜನೆ ಸಮಿತಿ ಅಧ್ಯಕ್ಷೆ ಚಂದ್ರಿಕಾ ಪರಮೇಶ್ವರ ವಿಧಾನ ಪರಿಷತ್ ಸದಸ್ಯರಾದ ತಿಪ್ಪಣ್ಣಪ್ಪ ಕಮಕನೂರು, ವಿಧಾನ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಮಜರ ಹುಸೇನೆ, ಬಾಬು ಜಗಜೀವನರಾಮ್ ಜಯಂತ್ಯೋತ್ಸವ ಆಚರಣೆ ಸಮಿತಿ ಅಧ್ಯಕ್ಷರಾದ ರಂಜೀತ ಆರ್. ಮೂಲಿಮನಿ, ನಗರ ಪೋಲಿಸ್ ಆಯುಕ್ತ ಡಾ.ಶರಣಪ್ಪ ಎಸ್.ಡಿ. ಎಸ್.ಪಿ. ಅಡ್ದೂರು ಶ್ರೀನಿವಾಸಲು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಭಂವರ ಸಿಂಗ್ ಮೀನಾ, ಮಹಾನಗರ ಪಾಲಿಕೆ ಆಯುಕ ಅವಿನಾಶ ಶಿಂಧೆ, ಜಿಲ್ಲಾ ಸಮಾಜ ಕಲ್ಯಾಣ ಅಪರ ನಿರ್ದೇಶಕ ಎಂ.ಎಸ್. ಅಲ್ಲಾಬಕಾಷ ಸಮಾಜ ಮುಖಂಡರಾದ ರಾಜು ವಾಡೇಕರ್ ಗಣ್ಯರು ಅಧಿಕಾರಿಗಳು ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.

# ಏ.೩೦ ರಂದು ಅಕ್ಷಯ ತೃತೀಯ ದಿನ: ಬಾಲ್ಯವಿವಾಹ ನಡೆಯದಂತೆ ಎಚ್ಚರ ವಹಿಸಲು ಅಧಿಕಾರಿಗಳಿಗೆ ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ ಸೂಚನೆ

ಬೀದರ:ಏ.5:ಇದೇ ಏಪ್ರಿಲ್.30 ರಂದು ಅಕ್ಷಯ ತೃತೀಯ ದಿನದಂದು ಬಾಲ್ಯವಿವಾಹ ಪ್ರಕರಣಗಳು ಹೆಚ್ಚು ನಡೆಯುವ ಸಾಧ್ಯತೆಯಿರುವುದರಿಂದ ಎಲ್ಲಾ ಬಾಲ್ಯವಿವಾಹ ನಿಷೇಧಾಧಿಕಾರಿಗಳು ಈ ಬಗ್ಗೆ ಹೆಚ್ಚಿನ ಗಮನಹರಿಸಿ ತಮ್ಮ ಕಾರ್ಯವ್ಯಾಪ್ತಿಯಡಿ ಸಾಮೂಹಿಕ ವಿವಾಹದಲ್ಲಾಗಲೀ ಅಥವಾ ವೈಯಕ್ತಿಕ ವಿವಾಹದಲ್ಲಾಗಲೀ ಯಾವುದೇ ಬಾಲ್ಯವಿವಾಹಗಳು ಜರುಗದಂತೆ ಕ್ರಮವಹಿಸಬೇಕೆಂದು ಜಿಲ್ಲಾದಿಕಾರಿಗಳಾದ ಶಿಲ್ಪಾ ಶರ್ಮಾ ಅವರು ತಿಳಿಸಿದ್ದಾರೆ.

ಜಿಲ್ಲೆಯಲ್ಲಿ ಬಾಲ್ಯವಿವಾಹ ನಡೆಯುತ್ತಿರುವುದು ಗಮನಕ್ಕೆ ಬಂದರೆ ತುರ್ತಾಗಿ ಮಕ್ಕಳ ಸಹಾಯವಾಣಿ–1098, ಪೊಲೀಸ್ ಸಹಾಯವಾಣಿ 112 ಮತ್ತು ಜಿಲ್ಲಾ ಮಕ್ಕಳ ರಕ್ಷಣಾ ಘಟಕ 08482–234003/ಹಾಗೂ ಸಂಬಂಧಪಟ್ಟ ಪೊಲೀಸ್ ಠಾಣೆ ಅವರ ಗಮನಕ್ಕೆ ತುರ್ತಾಗಿ ತರಬೇಕು.

ಬಾಲ್ಯವಿವಾಹವು ಹಿಂದಿನ ಕಾಲದಿಂದಲೂ ನಡೆದುಬಂದಿರುವ ಅನಿಷ್ಠ ಪದ್ಧತಿಯಾಗಿದ್ದು, ಈ ಶತಮಾನದಲ್ಲಿಯೂ ಮುಂದುವರೆದಿರುವುದು ಶೋಚನಿಯವಾಗಿರುತ್ತದೆ. ಬಾಲ್ಯ ವಿವಾಹವೆಂದರೆ 18 ವರ್ಷದೊಳಗಿನ ಹುಡುಗಿ ಹಾಗೂ 21 ವರ್ಷದ ಒಳಗಿನ ಹುಡುಗನ ನಡುವೆ ನಡೆಯುವ ಮದುವೆ ಅಥವಾ ಇಬ್ಬರಲ್ಲಿ ಒಬ್ಬರು ನಿಗದಿತ ವಯಸ್ಸಿನೊಳಗಿದ್ದರೂ ಇಂತಹ ಮದುವೆಯನ್ನು ಬಾಲ್ಯವಿವಾಹವೆಂದು ಪರಿಗಣಿಸಲಾಗುತ್ತದೆ. ಇದು ಮಕ್ಕಳ ಹಕ್ಕುಗಳ ಉಲ್ಲಂಘನೆ ಹಾಗೂ ಉತ್ತಮ ಸಮಾಜದ ನಿರ್ಮಾಣಕ್ಕೆ ಧಕ್ಕೆ ಉಂಟು ಮಾಡುತ್ತದೆ. ಈ ಅಪಾಯಕಾರಿ ಪದ್ಧತಿಯು ತಾಯಂದಿರ ಮರಣ, ಶಿಶು ಮರಣ,



ಅಪೌಷ್ಠಿಕತೆಯನ್ನು ಉಂಟು ಮಾಡುವುದಲ್ಲದೇ ಮಕ್ಕಳ ಬೌದ್ಧಿಕ, ದೈಹಿಕ ಹಾಗೂ ಮಾನಸಿಕ ಪರಿಣಾಮಗಳನ್ನು ಉಂಟು ಮಾಡುತ್ತದೆ.

ಈ ಎಲ್ಲಾ ಕಾರಣಗಳಿಂದಾಗಿ ಬಾಲ್ಯವಿವಾಹವೆಂಬ ಅನಿಷ್ಠ ಪದ್ಧತಿ ಹಾಗೂ ಸಾಮಾಜಿಕ ಪಿಡುಗು ಎಂದು ಗುರುತಿಸಿ, ಇದನ್ನು ನಿಷೇಧಿಸಲು ಕೇಂದ್ರ ಸರ್ಕಾರವು ಬಾಲ್ಯವಿವಾಹ ನಿಷೇಧ ಕಾಯ್ದೆ–2006ನ್ನು ಜಾರಿಗೆ ತಂದಿರುತ್ತದೆ. ಸದರಿ ಕಾಯ್ದೆಯನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಲು ರಾಜ್ಯ, ಜಿಲ್ಲಾ, ತಾಲ್ಲೂಕಾ, ಗ್ರಾಮ ಪಂಚಾಯತಿ, ಗ್ರಾಮ ಮಟ್ಟದಲ್ಲಿ ಬಾಲ್ಯವಿವಾಹ ನಿಷೇಧಾಧಿಕಾರಿಗಳನ್ನು ನೇಮಿಸಲಾಗಿರುತ್ತದೆ. ಈ ಕಾರ್ಯವು ಕೇವಲ ಸರ್ಕಾರಿ ಇಲಾಖೆ/ಅಧಿಕಾರಿಗಳ ಜವಾಬ್ದಾರಿಯಾಗಿರದೇ ಪ್ರತಿಯೊಬ್ಬ ನಾಗರಿಕರ ಜವಾಬ್ದಾರಿಯಾಗಿರುತ್ತದೆ. ಬಾಲ್ಯವಿವಾಹನಿಷೇಧ(ಕರ್ನಾಟಕ ತಿದ್ದುಪಡಿ) ಅಧಿನಿಯಮ–2016ರ ಪ್ರಕಾರ ಒಂದು ವೇಳೆ ಬಾಲ್ಯವಿವಾಹ ನಡೆದಲ್ಲಿ 18 ವರ್ಷದೊಳಗಿನ ಹೆಣ್ಣು ಮಗುವನ್ನು ಮದುವೆಯಾದ ವಯಸ್ಕ ವ್ಯಕ್ತಿ, ಮದುವೆ ಮಾಡುವ ಪಾಲಕರು/ಪೋಷಕರು, ಇಂತಹ ಮದುವೆಯಲ್ಲಿ ಭಾಗವಹಿಸುವವರು, ಬಾಲ್ಯವಿವಾಹವನ್ನು ಏರ್ಪಡಿಸುವ, ನಿರ್ದೇಶಿಸುವ, ನೆರವೇರಿಸುವ ಮತ್ತು ಮದುವೆಗೆ ಕುಮ್ಮಕ್ಕು ನೀಡುವ ಸಂಸ್ಥೆ/ವ್ಯಕ್ತಿ, ಕಾಯ್ದೆಯಡಿ ನೀಡಿದ ತಡೆಯಾಜ್ಞೆಯನ್ನು ಉಲ್ಲಂಘಿಸಿದವರು, ಮಗುವಿನ ಜವಾಬ್ದಾರಿಯನ್ನು ಹೊತ್ತ ಯಾವುದೇ ವ್ಯಕ್ತಿ/ಸಂಸ್ಥೆಯ ನಿರ್ಲಕ್ಷತೆಯಿಂದ ಬಾಲ್ಯವಿವಾಹವನ್ನು ತಡೆಯಲು ವಿಫಲರಾದವರು ಸಹ ತಪ್ಪಿತಸ್ಥರು. ಇವರುಗಳಿಗೆ ಕಾಯ್ದೆ ಪ್ರಕಾರ "ಒಂದು ವರ್ಷಕ್ಕೆ ಕಡಿಮೆಯಿಲ್ಲದ ಅಂ–ದರೆ ಎರಡು ವರ್ಷಗಳವರೆಗೆ ವಿಸ್ತರಿಸಬಹುದಾದ ಕಠಿಣ ಜೈಲು ಶಿಕ್ಷೆ" ಅಥವಾ "ಒಂದು ಲಕ್ಷ ರೂಪಾಯಿಗಳವರೆಗೆ ವಿಸ್ತರಿಸಬಹುದಾದ ಜುಲ್ಮಾನೆಗೆ ಅಥವಾ ಇವೆರಡರಿಂದಲೂ ಶಿಕ್ಷೆಗೆ ಗುರಿಯಾಗತಕ್ಕದು"??, ಈ ಕಾಯ್ದೆಯಡಿ ಪ್ರತಿಯೊಬ್ಬ ಪೊಲೀಸ ಅಧಿಕಾರಿಯು ತನ್ನ ಅಧಿಕಾರ ವ್ಯಾಪ್ತಿಯಡಿ ಬಾಲ್ಯವಿವಾಹ ಜರುಗುತ್ತಿರುವ ಮಾಹಿತಿ ಬಂದಾಗ ಸ್ವಪ್ರೇರಿತವಾಗಿ ದೂರು ದಾಖಲು ಮಾಡುವ ಅವಕಾಶವಿರುತ್ತದೆಂದರು.

# ಅನಧಿಕೃತ ಬೆಟ್ಟಿಂಗ ಅಡ್ಡೆಗಳ ಮೇಲೆ ದಾಳಿ:431 ಆರೋಪಿತರನ್ನು ಬಂಧಿಸಿ 35,34,075 ಮುದ್ದೆ ಮಾಲು ಜಪ್ತಿ

ಮಲ್ಲಮ್ಮ ನುಡಿ ವಾರ್ತೆ ಬೀದರ : ಏ.5: ಬೀದರ ಜಿಲ್ಲೆಯ ವಿವಿಧ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಅನಧಿಕೃತವಾಗಿ ಜೂಜಾಟ, ಮಟ್ಕಾ, ಕ್ರಿಕೇಟ್ ಬೆಟ್ಟಿಂಗ್, ಗಾಂಜಾ, ಅಕ್ರಮ ಅಕ್ಕಿ ಸಂಗ್ರಹಣೆ/ಸಾಗಣೆ, ಅಕ್ರಮ ಮದ್ಯಮಾರಾಟ/ಸಾಗಾಣಿಕೆಯ ಕುರಿತು ದಾಖಲಾಗಿದ್ದ 189 ಪ್ರಕರಣಗಳನ್ನು ಬೇಧಿಸಿ ಒಟ್ಟು 431 ಜನ ಆರೋಪಿಗಳನ್ನು ಬಂಧಿಸಿ ಅವರಿಂದ 35,34,075 ರೂ. ಬೆಲೆವುಳ್ಳ ಮುದ್ದೆ ಮಾಲು ಜಪ್ತಿ ಮಾಡಿಕೊಂಡು ಆರೋಪಿತರನ್ನು ನ್ಯಾಯಾಲಯದ ವಶಕ್ಕೆ ಒಪ್ಪಿಸಲಾಗಿದೆ ಎಂದು ಬೀದರ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಾದ ಪ್ರದೀಪ



ಗುಂಟಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಪ್ರಕರಣಗಳ ವಿವರ: ಜೂಜಾಟದ 22 ಪ್ರಕರಣಗಳಲ್ಲಿ 227 ಆರೋಪಿತರನ್ನು ಬಂಧಿಸಿ 303290 ರೂ., ಕ್ರಿಕೇಟ್ ಬೆಟ್ಟಿಂಗ್ 11 ಪ್ರಕರಣಗಳಲ್ಲಿ 19 ಆರೋಪಿಗಳನ್ನು ಬಂಧಿಸಿ 62700 ರೂ., ಮಟ್ಕಾದ 49 ಪ್ರಕರಣಗಳಲ್ಲಿ 65 ಆರೋಪಿಗಳನ್ನು ಬಂಧಿಸಿ 78340 ರೂ., ಇಸಿ ಆಕ್ಟ್ 7 ಪ್ರಕರಣಗಳಲ್ಲಿ 11 ಆರೋಪಿತರನ್ನು ಬಂಧಿಸಿ 643224 ರೂ., ಎನ್.ಡಿ.ಪಿ.ಎಸ್.3 ಪ್ರಕರಣಗಳಲ್ಲಿ 4 ಆರೋಪಿತರನ್ನು ಬಂಧಿಸಿ 2251500 ರೂ., ಹಾಗೂ ಅಬಕಾರಿ 97 ಪ್ರಕರಣಗಳಲ್ಲಿ 105 ಆರೋಪಿಗಳನ್ನು ಬಂಧಿಸಿ 195021 ರೂ.. ಬೆಲೆವುಳ್ಳ ಮುದ್ದೆ ಮಾಲು ಜಪ್ತಿ ಮಾಡಲಾಗಿದೆ.

ಆರೋಪಿಗಳು ಪದೇ ಪದೇ ಕಾನೂನು ವಿರುದ್ಧ ಚಟುವಟಿಕೆಗಳಲ್ಲಿ ತೊಡಗಿದರೆ ಅಂತಹ ಆರೋಪಿಗಳ ವಿರುದ್ಧ ಕಾನೂನು ಕ್ರಮ ಜರುಗಿಸಿ ಗಡಿಪಾರು ಮಾಡಲಾಗುವುದು ಎಂದು ಅವರು ತಿಳಿಸಿದ್ದಾರೆ.

# ನಾಳೆ ಲೋಕಾಯುಕ್ತ ಅಹವಾಲು ಸಭೆ

ಮಲ್ಲಮ್ಮ ನುಡಿ ವಾರ್ತೆ

ಬೀದರ :ಏ.5: ಕರ್ನಾಟಕ ಲೋಕಾಯುಕ್ತ ಬೀದರ ಪೊಲೀಸ್ ಠಾಣೆ ವತಿಯಿಂದ ಚಿಟಗುಪ್ಪಾ ಎಲ್ಲಾ ಇಲಾಖೆಗಳ ತಾಲ್ಲೂಕು ಮಟ್ಟದ ಅಧಿಕಾರಿಗಳ ಉಪಸ್ಥಿತಿಯಲ್ಲಿ ದಿನಾಂಕ: 07–04–2025 ರಂದು ಬೆಳಿಗ್ಗೆ 10.30 ಗಂ–ಟೆಗೆ ಚಿಟಗುಪ್ಪಾ ಪುರಸಭೆ ಸಭಾಂಗಣದಲ್ಲಿ ಸಾರ್ವಜನಿಕ ಕುಂದು ಕೊರತೆ/ಅಹವಾಲು ಸ್ವೀಕಾರ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ ಎಂದು ಕರ್ನಾಟಕ ಲೋಕಾಯುಕ್ತ ಬೀದರ ಪೊಲೀಸ್ ಉಪಾಧೀಕ್ಷಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಈ ಸಭೆಯಲ್ಲಿ ಸಾರ್ವಜನಿಕ ಸರ್ಕಾರಿ ಅಧಿಕಾರಿಗಳಿಂದ ತಮಗೆ ಆಗಬೇಕಾದ ಕೆಲಸಗಳಲ್ಲಿ ವಿಳಂಭವಾಗಿದ್ದರೆ ಅಥವಾ ಅಧಿಕಾರಿಗಳು ನ್ಯಾಯಸಮ್ಮತವಾಗಿ ಮಾಡಿಕೊಡಬೇಕಾದ ಕೆಲಸಗಳಲ್ಲಿ ತೊಂದರೆ ಕೊಡುತ್ತಿದ್ದರೆ ಅಥವಾ ಭ್ರಷ್ಟಾಚಾರಕ್ಕೆ ಸಂಬಂಧಿಸಿದ ದೂರುಗಳಿದ್ದಲ್ಲಿ ಈ ಸಭೆಗೆ ನೇರವಾಗಿ ಬಂದು ಅರ್ಜಿ ಸಲ್ಲಿಸಲು ಹಾಗೂ ಸ್ಥಳದಲ್ಲಿಯೇ ಇದ್ದ ಅಧಿಕಾರಿಗಳೊಂದಿಗೆ ಕೆಲಸ ನೆರವೇರಿಸಿಕೊಳ್ಳಲು ಅಥವಾ ಸ್ಥಳದಲ್ಲಿಯೇ ದೂರು ಅರ್ಜಿ ಫಾರಂ ನಂ. 1 ಮತ್ತು 2 ತೆಗೆದುಕೊಂಡು ದೂರು ನೀಡಲು ಅನುಕೂಲ ಕಲ್ಪಿಸಲಾಗಿದೆ. ಸಾರ್ವಜನಿಕರು ಇದರ ಸದುಪಯೋಗ ಪಡೆದುಕೊಳ್ಳಬೇಕು. ಹೆಚ್ಚಿನ ಮಾಹಿತಿಗಾಗಿ ಎಸ್.ಪಿ. (ಮೊ.9364062519), ಡಿ.ಎಸ್.ಪಿ. (ಮೊ.9364062571), ಪಿಐ–1 (ಮೊ.9364062672), ಪಿಐ–2 (ಮೊ.9364062673), ಪಿಐ–3 (ಮೊ.9364062674) ಹಾಗೂ ಪಿಐ–4(ಮೊ.9364062675) ಗಳಿಗೆ ಸಂಪರ್ಕಿಸಬಹುದಾಗಿದೆ ಎಂದು ಅವರು ತಿಳಿಸಿದ್ದಾರೆ.

# ನಂದಿ ಧ್ವಜಕ್ಕೆ ಅದ್ದೂರಿ ಸ್ವಾಗತ ದರ್ಶನ ಪಡೆದ ಸಾವಿರಾರು ಭಕ್ತರು



ಮಲ್ಲಮ್ಮನುಡಿವಾರ್ತೆ ಕಮಲನಗರ :ಏ.5:ಗಡಿರಾಜ್ಯ ಮಹಾರಾಷ್ಟ್ರದ ಶ್ರೀ ಕ್ಷೇತ್ರ ಶಿಖರ ಶಿಂಗಣಾಪೂರ್‌ನಲ್ಲಿ ನಡೆಯುವ ಮಹಾದೇವ ಮಂದಿರದ ದಿಂಡಿ ಪಾದಯಾತ್ರೆಗೆ ತಾಲೂಕಿನ ಬೆಳಕೋಣಿ(ಭೋ) ಗ್ರಾಮಕ್ಕೆ ನಂದಿ ಧ್ವಜ ಆಗಮಿಸಿದಾಗ ನೆರೆದ ಸಾವಿರಾರು ಭಕ್ತರು ದರ್ಶನ ಪಡೆದರು.

ನಂದಿ ಧ್ವಜ ಪಾದಯಾತ್ರೆ ಬೆಳಕೋಣಿ ಮತ್ತು ಬೋಪಾಳಗಢ ಗ್ರಾಮಕ್ಕೆ ಆಗಮಿಸಿದಾಗ ಭಕ್ತರು ಅದ್ದೂರಿಯಿಂದ ಸ್ವಾಗತಿಸಿದರು.

ಪಾದಯಾತ್ರೆ ಗ್ರಾಮದ ಪ್ರಮುಖ ಬೀದಿಗಳಲ್ಲಿ ಸಂಚರಿಸಿತ್ತು. ಹೆಣ್ಣು ಮಕ್ಕಳು ಆರತಿ ಎತ್ತಿ ಟೆಂಗು, ಪ್ರಸಾದ, ನೈವಿದ್ಯ ಅರ್ಪಿಸಿ, ಅದ್ದೂರಿ ಮೆರವಣಿಗೆ ನಡೆಸಿದರು. ಈ ವೇಳೆ ಗ್ರಾ.ಪಂ.ಅಧ್ಯಕ್ಷ ಅಭಿಲಾಷ ಮೇತ್ರೆ, ಬಸವರಾಜ ಬಸನಾಳೆ, ರವಿ ಸ್ವಾಮಿ, ನವನಾಥ ರಾಸೂರೆ, ಕಾಳಿದಾಸ ನಿಲಂಗೆ, ಶಿವಕುಮಾರ ಮೇತ್ರೆ, ಬಸವರಾಜ ಪುಣೆ, ಹಾಗೂ ಇನ್ನಿತರರು ಉಪಸ್ಥಿತರಿದ್ದರು. ಸುತ್ತಲಿನ ಗ್ರಾಮಗಳಾದ ಚಿಮ್ಮೇಗಾಂವ, ಭವಾನಿ ಬಿಜಲಗಾಂವ, ಸಂಗನಾಳ, ಭೋಪಾಳಗಢ, ಗ್ರಾಮಸ್ಥರು ಆಗಮಿಸಿ ದರುಶನ ಪಡೆದರು.

# ಮುಧೋಳ (ಬಿ): ಮಹಾದೇವ ಜಾತ್ರಾ ಪ್ರಯುಕ್ತ ಅಖಂಡ ಹರಿನಾಮ ಸಪ್ತಾಹ

ಮಲ್ಲಮ್ಮ ನುಡಿ ವಾರ್ತೆ

ಕಮಲನಗರ:ಏ.5:ತಾಲೂಕಿನ ಮುಧೋಳ(ಬಿ) ಗ್ರಾಮದಲ್ಲಿ ಮಹಾದೇವ ಜಾತ್ರಾ, ರಾಮ ನವಮಿ ಹಾಗೂ ಅಖಂಡ ಹರಿನಾಮ ಸಪ್ತಾಹ ನಿಮಿತ್ತ ಹಮ್ಮಿಕೊಂಡ ಪ್ರವಚನ ಕಾರ್ಯಕ್ರಮದಲ್ಲಿ ಹೆಡಗಾಪೂರ ಶಿವಲಿಂಗೇಶ್ವರ ಮಠದ ಧಾರುಕಲಿಂಗ ಶಿವಾಚಾರ್ಯ ಮಾತನಡಿದರು.

ಇಂದಿನ ಯುವಗದಲ್ಲಿ ಪ್ರವಚನ ಹಾಗೂ ಶರಣ ವಾಣಿ ಆಲಿಸಿ ಅಧ್ಯಾತ್ಮದಿಂದ ಮಾತ್ರ ಮನಸ್ಸು ಹಾಗೂ ಆತ್ಮ ಪರಿಶುದ್ಧವಾಗಲು ಸಾಧ್ಯ. ನಾವು ಬದುಕಿನಲ್ಲಿ ಮಾನಸಿಕ ಒತ್ತಡದ ನಿವಾರಣೆಗೆ ಅಧ್ಯಾತ್ಮ



ನೆರವಾಗುತ್ತದೆ. ಮನಸ್ಸಿನ ಚಂಚಲತೆಯಿಂದ ಹೊರ ಬರಲು ಪ್ರತಿಯೊಬ್ಬರೂ ಅಧ್ಯಾತ್ಮದ ಮೊರೆ ಹೋಗಬೇಕು ಎಂದರು. ಈ ಸಂದರ್ಭದಲ್ಲಿ

ಮುಧೋಳ(ಬಿ) ಪಿಕೆಪಿಎಸ್ ಅಧ್ಯಕ್ಷ ಗುರುನಾಥ ವಟಗೆ, ಗ್ರಾ.ಪಂ. ಸದಸ್ಯ ಸೋಮನಾಥ ಸ್ವಾಮಿ, ವಿಜಯಕುಮಾರ ಹೋಸಖಂಡೆ, ಸಂತೋಷ ಬದನಾಳೆ, ಹಣಮಂತ ವಟಗೆ, ಗೋವಿಂದ ಮಹಾರಾಜ, ರಘುನಾಥರಾವ ರೋಟ್ಟೆ, ವೆಂಕಟರಾವ, ಶಿವಕುಮಾರ ಕುಂಬಾರ, ಬಾಲಾಜಿ ಹಲಬುರ್ಗೆ, ನಾಗನಾಥ ಶಂಕು, ನಾಗಯ್ಯ ಸ್ವಾಮಿ, ಅಮೃತ ವಾಡೆ, ಹಾವಗೀರಾವ ಹೊಸಖಂಡೆ, ಪ್ರಭುಲಿಂಗಸ್ವಾಮಿ, ರಾಜಕುಮಾರ ಬಿಚಕುಂದೆ ಹಾಗೂ ಭಜನಾ ಮಂಡಳಿಯವರು ಹಾಜರಿದ್ದರು.

# ಏ. 7 ರಂದು ನೇರ ಫೋನ್ ಇನ್ ಕಾರ್ಯಕ್ರಮ

ಕಲಬುರಗಿ:ಏ.05: ಕಲಬುರಗಿ ಜಿಲ್ಲೆಯಲ್ಲಿ ಏಪ್ರಿಲ್ 7ರಂದು ನೇರ ಫೋನ್ ಇನ್ ಕಾರ್ಯಕ್ರಮವನ್ನು ಆಯೋಜಿಸಲಾಗಿದೆ ಎಂದು ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮ ಕಲಬುರಗಿ ವಿಭಾಗ –2 ವಿಭಾಗೀಯ ನಿಯಂತ್ರಣಾಧಿಕಾರಿ ತಿಳಿಸಿದ್ದಾರೆ. ಜಿಲ್ಲೆಯ ಸಾರ್ವಜನಿಕರಿಗೆ ಹಾಗೂ ಶಾಲಾ ಕಾಲೇಜು ವಿದ್ಯಾರ್ಥಿಗಳಿಗೆ ಉಂಟಾಗುವ ಸಾರಿಗೆ ಸಮಸ್ಯೆಗಳಿಗೆ ಪರಿಹಾರ ಕಂಡುಕೊಳ್ಳುವ ನಿಟ್ಟಿನಲ್ಲಿ ಪ್ರತಿ ತಿಂಗಳು ಮೊದಲನೇ ಸೋಮವಾರದಂದು ಫೋನ್ ಇನ್ ಕಾರ್ಯಕ್ರಮವನ್ನು ಆಯೋಜಿಸಲಾಗಿದೆ. ಕಲಬುರಗಿ ಜಿಲ್ಲೆಯ ಸಾರ್ವಜನಿಕರಿಗೆ ಮತ್ತು ಶಾಲಾ ಕಾಲೇಜು ವಿದ್ಯಾರ್ಥಿಗಳಿಗೆ ಇರುವ ಸಾರಿಗೆ ಸಮಸ್ಯೆಗಳ ಕುರಿತು ಏಪ್ರಿಲ್ 7ರ ಸೋಮವಾರ ಮಧ್ಯಾಹ್ನ 4.30 ರಿಂದ ಸಂಜೆ 5.30 ಗಂಟೆಯ ವರೆಗೆ ಫೋನ್ ಇನ್ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ.

# ನರೇಂದ್ರ ಕಾಲೇಜಿನಲ್ಲಿ ಜಗಜೀವನರಾಂ ಜಯಂತಿ ಆಚರಣೆ

ಮಲ್ಲಮ್ಮ ನುಡಿ ವಾರ್ತೆ

ಬೀದರ್:ಏ.5: ನಗರದ ಸ್ವಾಮಿ ನರೇಂದ್ರ ಪದವಿಪೂರ್ವ ಕಾಲೇಜಿನಲ್ಲಿ ಶನಿವಾರ ಮಾಜಿ ಉಪ ಪ್ರಧಾನಿ ಡಾ. ಬಾಬು ಜಗಜೀವನರಾಂ ಅವರ 118ನೇ ಜಯಂತಿ ಆಚರಿಸಲಾಯಿತು.

ಕಾಲೇಜು ನಿರ್ದೇಶಕಿ ಕಲ್ಪನಾ ಮಠಪತಿ ಅವರು ಜಗಜೀವನರಾಂ ಅವರ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿದರು.

ಜಗಜೀವನರಾಂ ಅವರು ದೇಶಕ್ಕೆ ನೀಡಿದ ಕೊಡುಗೆ ಅಪಾರ. ಹಸಿರು ಕ್ರಾಂತಿ ಹರಿಕಾರರೆಂದೇ ಪ್ರಖ್ಯಾತಿ



ಪಡೆದಿದ್ದರು ಎಂದು ಅವರು ಹೇಳಿದರು.

ಪ್ರಾಚಾರ್ಯೆ ಮಂಗಲಾ ಎಸ್., ಸಿಬ್ಬಂದಿ ಮೇನಕಾ, ಪ್ರಜಕ್ತ, ಪಾರ್ವತಿ, ಶಶಿಕಾಂತ, ಪ್ರಕಾಶ ಮತ್ತಿತರರು ಇದ್ದರು.

# ಯಾದಗಿರಿ ಮತಕ್ಷೇತ್ರದ ಅಭಿವೃದ್ಧಿಯೇ ತಮ್ಮ ಗುರಿ: ಚನ್ನಾರಡ್ಡಿ ಪಾಟೀಲ್ ಅಭಿಲಾಷೆ.



ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ:ಮತದಾರರ ಋಣ ತೀರಿಸುವ ಪ್ರಮಾಣಿಕ ಕೆಲಸ ಮಾಡುತ್ತಿರುವುದಾಗಿ ಹೇಳಿದ ಶಾಸಕ ಚನ್ನಾರಡ್ಡಿ ಪಾಟೀಲ್ ತುನ್ನೂರು, ಯಾದಗಿರಿ ಮತಕ್ಷೇತ್ರವನ್ನು ಬರುವ ಮೂರು ವರ್ಷಗಳಲ್ಲಿ ಮಾದರಿ ಕ್ಷೇತ್ರವನ್ನಾಗಿ ಮಾಡುವ ವಿಶ್ವಾಸ ವ್ಯಕ್ತಪಡಿಸಿದ್ದಾರೆ.

2024-25ನೇ ಸಾಲಿನ ಕಲ್ಯಾಣ ಪಥ ಯೋಜನೆಯಡಿ ಯಾದಗಿರಿ ಮತಕ್ಷೇತ್ರದ ವಡಗೇರಾ ತಾಲೂಕಿನ ತೇಕರಾಳ ಗ್ರಾಮದಿಂದ ಬಸವನಗರ ಗ್ರಾಮದವರೆಗೆ 4.50 ಕಿ.ಮಿ. ರಸ್ತೆ ನಿರ್ಮಾಣ ಕಾಮಗಾರಿಯ ಅಂದಾಜು ಮೊತ್ತ ರೂ. 426.70 ಲಕ್ಷಗಳು ಕಾಮಗಾರಿ ಹಾಗೂ ಶಹಾಪೂರ ತಾಲೂಕಿನ ವಡಗೇರಾ ತಾಂಡದಲ್ಲಿ ಬೀರನಕಲ್ ಗ್ರಾಮದಿಂದ ವಡಗೇರಾ ಗೊಂದೆನೂರು ರಸ್ತೆಯವರೆಗೆ ವಾಯಾ ಬೀರನಕಲ್ ತಾಂಡಾ ಮತ್ತು ವಡಗೇರಾ ತಾಂಡಾ ಗ್ರಾಮದವರೆಗೆ 5.00 ಕಿ.ಮೀ. ರಸ್ತೆ ನಿರ್ಮಾಣ ಕಾಮಗಾರಿಯ ಅಂದಾಜು ಮೊತ್ತ ರೂ. 496.00 ಲಕ್ಷಗಳು ಕಾಮಗಾರಿಗಳಿಗೆ ಭೂಮಿ ಪೂಜೆ ನೆರವೇರಿಸಿ ಮಾತನಾಡಿದರು.

ಕ್ಷೇತ್ರದ ಜನತೆಗೆ ಮೂಲಭೂತ ಸೌಲಭ್ಯಗಳ ಜೊತೆಗೆ ಅಗತ್ಯ ಸೌಲತ್ತುಗಳನ್ನು ಒದಗಿಸಲಾಗುವುದೆಂದರು.

ಮುಖ್ಯವಾಗಿ ಗ್ರಾಮೀಣ ಜನರ ಕಷ್ಟಗಳಿಗೆ, ಬೇಡಿಕೆಗಳಿಗೆ ಸ್ಪಂಧಿಸುವ ಕೆಲಸ ಮಾಡುವುದರ ಜೊತೆಗೆ ಇಡಿ ಯಾದಗಿರಿ ಮತಕ್ಷೇತ್ರದ ಜನರ ಬೇಕು, ಬೇಡಗಳಿಗೆ ಸದಾ ಸ್ಪಂಧಿಸುವ ಕೆಲಸ ಮಾಡುವುದಾಗಿ ಶಾಸಕರು ಹೇಳಿದರು.

ಕಲ್ಯಾಣ ಪಥದ ಯೋಜನೆಯಡಿ ಕೈಗೆತ್ತಿಕೊಂಡ ಕೆಲಸಗಳು ಸರಿಯಾದ ರೀತಿಯಲ್ಲಿ ಆಗಬೇಕೆಂದರು.

ಈ ಸಂದರ್ಭದಲ್ಲಿ ಗ್ರಾಮೀಣ ಅಭಿವೃದ್ಧಿ ಮತ್ತು ಪಂಚಾಯತ ರಾಜ ಇಲಾಖೆ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರ ಪ್ರವೀಣ ಕುಮಾರ್, ಜಿಲ್ಲಾ ಪ್ರಚಾರ ಸಮಿತಿ ಅಧ್ಯಕ್ಷ ಮರೆಪ್ಪ ಬಿಳ್ಹಾರ್, ತಾಲೂಕು ಪಂಚಾಯತ ಕಾರ್ಯನಿರ್ವಾಹ ಅಧಿಕಾರಿ ಮಲ್ಲಿಕಾರ್ಜುನ ಸಂಗವಾರ್ , ಮಲ್ಲಿಕಾರ್ಜುನ ಈಟೆ, ಲಕ್ಷ್ಮಾರೆಡ್ಡಿ, ತಾಲೂಕು ಪಂಚ ಗ್ಯಾರಂಟಿ ಅಧ್ಯಕ್ಷ ಖಾಜಾ ಮೈನೋದಿನ್ ಮೀರ್ಚಿ, ಗುತ್ತಿಗೆದಾರ ದೀಪಕ್ ಯಲಸತ್ತಿ, ವಡಗೇರಾ ಪಿಎಸ್ಐ ಮಹೆಬೂಬ ಅಲಿ, ಶರಣು ಪಡೀಶೆಟ್ಟಿ, ಶಿವರಾಜ ವಡಗೇರಾ, ಪಿಡಿಓ ಶರಣಗೌಡ ಉಳ್ಳೆಸುಗೂರ್, ಬಗರ ಹುಕಂ ನಾಮ ನಿರ್ದೇಶನ ಸದಸ್ಯರಾದ ಶಿವರಾಜ ಸಾಹುಬಾವುರ್, ಪರಶುರಾಮ ವಕೀಲರು ಖಾನಾಪುರ, ಗೋಪಾಲ ನಾಯಕ, ಪಿಡಿಓ ಶರಣಗೌಡ, ವಡಗೇರಾ ಎಇಇ, ಸಾಬಣ್ಣ ಗೊಂದೆನೂರ್, ಗೋಪಾಲ ನಾಯಕ, ಅಮರೇಶ ಇದ್ದರು.

# ನಗರದ ಕರವೇ ಕಾರ್ಯಾಲಯದಲ್ಲಿ ಡಾ॥ ಬಾಬು ಜಗಜೀವನರಾಮ್ ಜಯಂತಿ ಆಚರಣೆ



ಮಲ್ಲಮ್ಮ ನುಡಿ ವಾರ್ತೆ


ಯಾದಗಿರಿ: ನಗರದ ಕರವೇ ಕಾರ್ಯಾಲಯದಲ್ಲಿ ಹಸಿರುಕ್ರಾಂತಿಯ ಹರಿಕಾರ ಮಾಜಿ ಉಪಪ್ರಧಾನಿ ಸ್ವಾತಂತ್ರ್ಯ ಹೋರಾಟಗಾರರು ಸಮಾಜ ಸೇವಕರದ ಡಾ॥ ಬಾಬು ಜಗಜೀವನರಾಮ್ ರವರ 118ನೇ ಜಯಂತಿಯ ನಿಮಿತ್ಯ ಕರ್ನಾಟಕ ರಕ್ಷಣಾ ವೇದಿಕೆಯ ಜಿಲ್ಲಾಧ್ಯಕ್ಷರಾದ ಶ್ರೀ ಟಿ.ಎನ್.ಭೀಮುನಾಯಕ ರವರು ಬಾಬೂಜೀ ರವರ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿ ಪುಷ್ಪಾರ್ಚನೆ ಮಾಡುವ ಮೂಲಕ ಜಯಂತಿ ಆಚರಣೆ ಮಾಡಿ ಮಾತನಾಡಿದ ಅವರು ಬಾಬು ಜಗನಜೀವನರಾಮ್ ನಮ್ಮ ದೇಶದ ಅತ್ಯಂತ ಪ್ರಸಿದ್ದ ನಾಯಕರಲ್ಲಿ ಒಬ್ಬರು. ವಿವಿಧ ಸಂಧರ್ಭಗಳಲ್ಲಿ ಅವರು ಒಹಿಸಿದ ನ್ಯಾಯಯುತ ಪಾತ್ರಕ್ಕಾಗಿ ಭಾರತದ ರಾಜಕೀಯ ಸನ್ನಿವೇಶದಲ್ಲಿ ಚಿನ್ನದ ಅಕ್ಷರಗಳಲ್ಲಿ ಉಬ್ಬು ಹಾಕಿದವರಲ್ಲಿ ಅವರ ಹೆಸರು ಕೂಡ ಒಂದು ಎಂದರು.

ಬಾಬು ಜಗಜೀವನರಾಮ್ ಅದ್ಯಯನದ ಸಂಶೋಧನೆ ಮತ್ತು ವಿಸ್ತರಣಾ ಕೇಂದ್ರವು ಒಂದು ಪ್ರಮುಖವಾದದ್ದು ಮೈಸೂರು ವಿಶ್ವವಿದ್ಯಾಲಯದ ಸಂಶೋದನಾ ಕೇಂದ್ರಗಳು ಮತ್ತು ಸಂಶೋಧನೆ ಮತ್ತು ವಿಸ್ತರಣಾ ಚಟುವಟಿಗಳಲ್ಲಿ ತೊಡಗಿಸಿಕೊಂಡಿದ್ದರು ಎಂದು ಹೇಳಿದರು.

ಡಾ.ಬಾಬೂಜೀರವರು ದಲಿತ ಸಮಾಜದಲ್ಲಿ ಜನಿಸಿ ಇಡೀ ದೇಶಕ್ಕೆ ಸ್ಪೂರ್ತಿಯಾಗಿ ಬೆಳೆದ ವ್ಯಕ್ತಿಯಲ್ಲೊಬ್ಬರು ವಿಭಿನ್ನ ಸಮಸ್ಯೆಗಳು ಮತ್ತು ಪ್ರದೇಶಗಳ ಕುರಿತು ಬಾಬುಜಿಯವರ ಆಲೋಚನೆಗಳನ್ನು ಪ್ರತಿಬಿಂಬಿಸುತ್ತದೆ ಅಂತಹ ಚಟುವಟಿಕೆಗಳು ಮತ್ತು ವಿಸ್ತರಣೆ ಕಾರ್ಯಕ್ರಮಗಳು ಕೃಷಿ ಆಹಾರಕ್ಕೆ ಸಂಬಂದಿಸಿದ ಕಾರ್ಮಿಕ ಕಲ್ಯಾಣ ಜಾಗೃತೀತತೆ ಸಾಮಾಜಿಕ ಮಹಿಳಾ ಅಧ್ಯಯನ ಮತ್ತು ಬಾಬು ಜಗಜೀವನರಾಮ್ ಅವರ ಕಾರ್ಯಗಳು ಪಾಲಿಸಬೇಕೆಂದು ನುಡಿದರು,

ಈ ಸಂಧರ್ಭದಲ್ಲಿ ಕರವೇ ಜಿಲ್ಲಾ ಪ್ರಧಾನ ಕಾರ್ಯದರ್ಶಿಯಾದ ಸಿದ್ದುನಾಯಕ ಹತ್ತಿಕುಣಿ, ಸಂತೋಷಕುಮಾರ ನಿರ್ಮಲಕರ್, ಸಿದ್ದಲಿಂಗರೆಡ್ಡಿ ಮುನಗಲ್, ಅನೀಲ್ ದಾಸನಕೇರಿ, ವಿಜಯಕುಮಾರ ರಾಠೋಡ, ಜನಾರ್ಧನ ಚಾಮನಳ್ಳಿ, ಲಕ್ಷ್ಮಣ ತಳಕ ಜಿನಕೇರಾ, ಹಣಮಂತ ದೊರೆ, ರಮೇಶ.ಡಿ.ನಾಯಕ ಇನ್ನಿತರರು ಭಾಗಿಯಾಗಿದ್ದರು,

# ಆರೋಗ್ಯ ಶಿಬಿರ, ರಕ್ತ ತಪಾಸಣಾ ಶಿಬಿರಕ್ಕೆ ಸೂಚನೆ



ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ : ಏಪ್ರಿಲ್ 05,ಅಕ್ಕ ಕೆಫೆ ಹಾಗೂ ಜಲಶಕ್ತಿ ಕೇಂದ್ರ ಉದ್ಘಾಟನೆ ಹಿನ್ನೆಲೆ ಆರೋಗ್ಯ ಶಿಬಿರ ಮತ್ತು ರಕ್ತ ತಪಾಸಣಾ ಶಿಬಿರವನ್ನು 2025ರ ಏಪ್ರಿಲ್ 7ರ ಸೋಮವಾರರಂದು ಯಾದಗಿರಿ ಜಿಲ್ಲಾ ಪಂಚಾಯತ ಆವರಣದಲ್ಲಿ ಹಮ್ಮಿಕೊಳ್ಳಲಾಗಿದೆ ಎಂದು ಯಾದಗಿರಿ ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಶ್ರೀ ಲವೀಶ್ ಒರಡಿಯಾ ಅವರು ತಿಳಿಸಿದ್ದಾರೆ. ಎನ್‌ಆರ್‌ಎಲ್‌ಎಂ ಯೋಜನೆಯಡಿ ಶುಚಿ ರುಚಿಯಾಗಿ ಕೈಗೆಟ್ಟುವ ದರದಲ್ಲಿ ಮಹಿಳೆಯರು ನಡೆಸುವ ಅಕ್ಕ ಕೆಫೆ (ಅಕ್ಕ ಕೆಫೆ ಕ್ಯಾಂಟಿನ್) ಹಾಗೂ ಜಲಶಕ್ತಿ ಕೇಂದ್ರ ಉದ್ಘಾಟನಾ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದ್ದು, ಅಕ್ಕ ಕೆಫೆ ಕಾರ್ಯಕ್ರಮದಲ್ಲಿ ಯಾದಗಿರಿ ಜಿಲ್ಲೆಯ ಎಲ್ಲಾ ತಾಲ್ಲೂಕಿನ ಸ್ವ ಸಹಾಯ ಗುಂಪಿನ ಮಹಿಳೆಯರು ಭಾಗವಹಿಸುವರು. ಈ ಅಂ-ದು ಆರೋಗ್ಯ ಇಲಾಖೆದಿಂದ ಆರೋಗ್ಯ ತಪಾಸಣೆ ಶಿಬಿರ ಹಾಗೂ ರಕ್ತದಾನ ಶಿಬಿರ ಹಮ್ಮಿಕೊಂಡಿದ್ದು, ರಕ್ತದಾನ ಮಾಡುವ ಆಸಕ್ತ ಸಾರ್ವಜನಿಕರು ಯಾದಗಿರಿ ಜಿಲ್ಲಾ ಪಂಚಾಯತ ವೆಬ್‌ಸೈಟ್ https://forms.gle/zpEWatYHv48AU-VZr5 ಲಿಂಕ್‌ನ್ನು ಮುಖಾಂತರ ನೊಂದಾಯಿಸಿಕೊಳ್ಳಲು ಸಾರ್ವಜನಿಕರಲ್ಲಿ ಮನವಿ ಮಾಡಿದೆ ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಇಂದರಗಿ ಗ್ರಾಮದ ಹಳೆ ಕೆರೆ ಹೂಳೆತ್ತುವ ಕಾಮಗಾರಿ ಸ್ಥಳಕ್ಕೆ

# ಜಿ.ಪಂ ಯೋಜನಾ ನಿರ್ದೇಶಕ ಪ್ರಕಾಶ ವಿ ಭೇಟಿ



ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ : ಗ್ರಾಮೀಣ ಭಾಗದ ಕೂಲಿಕಾರರಿಗೆ ಮಹಾತ್ಮಾ ಗಾಂಧಿ ನರೇಗಾ ಯೋಜನೆಯು ವರದಾನವಾಗಿದ್ದು ಯೋಜನೆಯಡಿ ಕೂಲಿಕಾರರು ನಿಮ್ಮೂರಲ್ಲೇ 100 ದಿನ ಕೆಲಸ ನಿರ್ವಹಿಸಿ ಕೂಲಿ ಹಣ ಪಡೆದು ಆರ್ಥಿಕ ಸಬಲರಾಗಬೇಕೆಂದು *ಜಿಲ್ಲಾ ಪಂಚಾಯತ ಯೋಜನಾ ನಿರ್ದೇಶಕ ಪ್ರಕಾಶ ವಿ* ಕರೆ ನೀಡಿದರು.


ಕೊಪ್ಪಳ ತಾಲೂಕಿನ ಇಂದರಗಿ ಗ್ರಾಮ ಪಂಚಾಯತಿಯಿಂದ ಮಹಾತ್ಮಾ ಗಾಂಧಿ ನರೇಗಾ ಯೋಜನೆಯಡಿ ಇಂದರಗಿ ಗ್ರಾಮದ ಹೊಸಕರೆ ಹೂಳೆತ್ತುವ ಸ್ಥಳಕ್ಕೆ ಭೇಟಿ ನೀಡಿ* ಕಾಮಗಾರಿ ಪರಿಶೀಲಿಸಿದರು.

ಪ್ರಸಕ್ತದಲ್ಲಿ ಬೇಸಿಗೆ ಇರುವದರಿಂದ ಕೂಲಿಕಾರರಿಗೆ ಉದ್ಯೋಗ ಖಾತ್ರಿ ಯೋಜನೆಯಡಿ ಕೂಲಿ ಕೆಲಸ ನೀಡಲಾಗಿದ್ದು ಇಲ್ಲಿ ಕೆಲಸ ನಿರ್ವಹಿಸುತ್ತಿರುವ ಎಲ್ಲಾ ಕೂಲಿಕಾರರು ರೂ.370/- ಕೂಲಿ ಹಣ ಬರುವಂತೆ ಕೆಲಸ ನಿರ್ವಹಿಸಬೇಕೆಂದು ಕರೆ ನೀಡಿದರು. ಒಂದು ಜಾಬಕಾರ್ಡಗೆ 100 ಮಾನವ ದಿನಗಳ ಕೂಲಿ ಕೆಲಸ ನೀಡಲಾಗುತ್ತಿದ್ದು ಯಾವುದೇ ಕಾರಣಕ್ಕೂ ಕೂಲಿ ಅರಸಿ ಬೇರೆ ಕಡೆ ಹೋಗುವಂತಿಲ್ಲವೆಂದರು. ರೂ.370/- ಕೂಲಿ ಹಣವನ್ನು ನಿಗದಿಪಡಿಸಲಾಗಿದ್ದು ಪ್ರತಿಯೊಬ್ಬರು 40 ಕ್ಯೂಬಿಕ್ ಮೀಟರ್ ಮಣ್ಣನ್ನು ಅಗೆದಲ್ಲಿ ಮಾತ್ರ ರೂ.370/- ಕೂಲಿ ಹಣ ಪಾವತಿಸಲಾಗುತ್ತದೆ. ಅಳತೆ ಕಡಿಮೆ ಬಂದಲ್ಲಿ ಕಡಿಮೆ ಕೂಲಿ ಹಣ ಪಾವತಿಯಾಗುತ್ತದೆ ಎಂದರು.

ಪ್ರಸಕ್ತದಲ್ಲಿ ಸ್ತ್ರೀಚೇತನ ಅಭಿಯಾನದಡಿ ಮಹಿಳೆಯರು ಹೆಚ್ಚಿನ ರೀತಿಯಲ್ಲಿ ನರೇಗಾ ಯೋಜನೆಯಡಿ ಕೂಲಿ ಕೆಲಸಕ್ಕೆ ಹಾಜರಾಗಲು ಹೊಸದಾಗಿ ಮಹಿಳಾ ಕಾಯಕ ಬಂಧುಗಳನ್ನು ನೇಮಿಸಿಕೊಂಡು ಮಹಿಳೆಯರನ್ನು ಯೋಜನೆಯಡಿ ಭಾಗವಹಿಸಲು ಕ್ರಮವಹಿಸಲಾಗುತ್ತಿದೆ ಎಂದರು. ಜೂನ್ ವೇಳೆಗೆ ಮಳೆಗಾಲ ಪ್ರಾರಂಭವಾಗುತ್ತದೆ ಅಂತಹ ಸಂದರ್ಭದಲ್ಲಿ ಕೂಲಿ ಹಣದಿಂದ ಬರುವ ಬಿತ್ತನೆಗೆ ಕಾಳು, ಗೊಬ್ಬರ ಖರೀದಿಸಲು ಹಾಗು ಮಕ್ಕಳ ಶೈಕ್ಷಣಿಕ ವೆಚ್ಚಕ್ಕೆ ಬಳಸಲು ಅನುಕೂಲವಾಗುತ್ತದೆ ಎಂದರು. ಮಹಿಳೆಯರು ಹೆಚ್ಚು ಹೆಚ್ಚು ಯೋಜನೆಯಲ್ಲಿ ಭಾಗವಹಿಸುತ್ತಿರುವದರಿಂದ ಮಹಿಳಾ ಸಬಲೀಕರಣ ಆಗುವದಲ್ಲದೇ ಕುಟುಂಬಗಳು ಸದೃಢಗೊಳ್ಳುತ್ತವೆ ಎಂದರು. ನರೇಗಾ ಯೋಜನೆಯು ಸಮಾಜದ ದುರ್ಬಲವರ್ಗದವರಿಗೆ ಕೆಲಸದ ಪ್ರಮಾಣದಲ್ಲಿ ರಿಯಾಯಿತಿ ನೀಡಲಾಗುತ್ತಿದ್ದು ಅವರು ಕೂಡಾ ಸಾಮಾನ್ಯ ವ್ಯಕ್ತಿಗೆ ನೀಡಿದ ಅಳತೆಗಿಂತ ಅದರ ಅರ್ಧ ಕೆಲಸ ನಿರ್ವಹಿಸಿದಲ್ಲಿ ರೂ.370/- ಕೂಲಿ ಹಣ ಪಡೆದು ಜೀವನ ಸಾಗಿಸಬಹುದಾಗಿದೆ ಎಂದು ಮಾಹಿತಿ ನೀಡಿದರು. ನಂತರ ಕಾಮಗಾರಿ ಸ್ಥಳದಲ್ಲಿ ಕೂಲಿಕಾರರಿಗೆ ನೆರಳಿನ ವ್ಯವಸ್ಥೆ ಮತ್ತು ಕುಡಿಯಲು ಯೋಗ್ಯವಾದ ನೀರು ಸೌಲಭ್ಯ ಕಲ್ಪಿಸಿರುವ ಬಗ್ಗೆ ಖುದ್ದು ಪರಿಶೀಲಿಸಿದರು.

ಈ ಸಂದರ್ಭದಲ್ಲಿ ತಾಲೂಕ ಪಂಚಾಯತ ನರೇಗಾ ಸಹಾಯಕ ನಿರ್ದೇಶಕ ಯಂಕಪ್ಪ, ಜಿಲ್ಲಾ ಐಇಸಿ ಸಂಯೋಜಕ ಶ್ರೀನಿವಾಸ ಚಿತ್ರಗಾರ, ತಾಲೂಕ ಐಇಸಿ ಸಂಯೋಜಕ ದೇವರಾಜ ಪತ್ತಾರ, ಪಂಚಾಯತ ಅಭಿವೃದ್ಧಿ ಅಧಿಕಾರಿ ನಾಗರಾಜ, ತಾಂತ್ರಿಕ ಸಹಾಯಕ ಕೊಟ್ರೇಶ್ ಜವಳಿ, ಬೇರ್ ಫೂಟ್ ಟೆಕ್ನಿಷಿಯನ್ ಗಾಳೆಪ್ಪ, ಗ್ರಾಮ ಕಾಯಕ ಮಿತ್ರ ಯಮನಮ್ಮ, ಗ್ರಾಮ ಪಂಚಾಯತ ಕರವಸೂಲಿಗಾರ ಮಂಜುನಾಥ ಕುರಿ, ಕೂಲಿಕಾರರು ಕಾಯಕ ಬಂಧುಗಳು ಹಾಜರಿದ್ದರು.

# ಬಿಜೆಪಿ ಜಿಲ್ಲಾ ಕಾರ್ಯಾಲಯದಲ್ಲಿ ಜಗಜೀವನರಾಂ ಜಯಂತಿ ಆಚರಣೆ.



ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ :ನಗರದ ಬಿಜೆಪಿ ಜಿಲ್ಲಾ ಕಾರ್ಯಾಲಯದಲ್ಲಿ ಡಾ.ಬಾಬು ಜಗಜೀವನರಾಂ ಅವರ ಭಾವಚಿತ್ರಕ್ಕೆ ಪುಷ್ಪನಮನ ಜಿಲ್ಲಾ ಘಟಕದ ಅಧ್ಯಕ್ಷ ಬಸವರಾಜ ವಿಭೂತಿಹಳ್ಳಿ ಮಾತನಾಡಿ, "ಡಾ.ಬಾಬು ಜಗಜೀವನ ರಾಂ ಅವರು ತಮ್ಮ ಬದುಕಿನುದ್ದಕ್ಕೂ ಎಲ್ಲಾ ಕ್ಷೇತ್ರಗಳಿಗೆ ಅಪಾರ ಕೊಡುಗೆ ನೀಡಿದ ಮಹಾನ್ ನಾಯಕ ಎಂದು ಹೇಳಿದರು.

ಈ ಸಂದರ್ಭದಲ್ಲಿ ರಾಜ್ಯ ಅಲೆಮಾರಿ ಅರೆಅಲೆಮಾರಿ ನಿಗಮದ ಮಾಜಿ ಅಧ್ಯಕ್ಷ ದೇವಿಂದ್ರನಾಥ ನಾದ ಮಾತನಾಡಿದ ಅವರು ಅಭಿವೃದ್ಧಿ ಹೊಂದುತ್ತಿರುವ ದೇಶಗಳ ಪಟ್ಟಿಗೆ ಭಾರತವನ್ನು ಸೇರಿಸುವಲ್ಲಿ ಜಗಜೀವನರಾಂ ಅವರ ಪಾತ್ರ ಮಹತ್ವದ್ದಾಗಿದೆ' ಎಂದು ಹೇಳಿದರು.

ಈ ಸಂದರ್ಭದಲ್ಲಿ ರಾಜ್ಯ ಮಾಜಿ ಉಪಾಧ್ಯಕ್ಷೆ ನಾಗರತ್ನ ಕುಪ್ಪಿ,ಹಿರಿಯ ಮುಖಂಡ ರಾಚಣ್ಣಗೌಡ ಮುದ್ನಾಳ, ಯುವ ಮುಖಂಡ ಮಹೇಶರಡ್ಡಿ ಮುದ್ನಾಳ, ಯುಡ ಮಾಜಿ ಅಧ್ಯಕ್ಷ ಬಸವರಾಜ ಚಂಡ್ರಕಿ, ಜಿಲ್ಲಾ ಪ್ರಧಾನ ಕಾರ್ಯದರ್ಶಿ ಪರುಶುರಾಮ ಕುರಕುಂದಿ, ವೆಂಕಟರೆಡ್ಡಿ ಅಬ್ಬೆತುಮಕೂರು, ನಗರಸಭೆ ಸದಸ್ಯ ಹಣಮಂತ ಇಟಗಿ ಮತ್ತು ಸ್ವಾಮಿದೇವದಾಸನಕೆರಿ, ವಿಜಯಲಕ್ಷ್ಮಿ ನಾಯಕ, ನಗರ ಮಂಡಲ ಅಧ್ಯಕ್ಷ ಲಿಂಗಪ್ಪ ಹತ್ತಿಮನಿ, ಗ್ರಾಮೀಣ ಮಂಡಲ ಅಧ್ಯಕ್ಷ ರಾಜಶೇಖರ್ ಕಾಡಂನೊರ, ರಮೇಶ್ ದೊಡಮನಿ, ಮಲ್ಲಿಕಾರ್ಜುನ ಕಟ್ಟಿಮನಿ, ಗೋಪಾಲ ದಾಸನಕೆರಿ, ಮೋನೇಶ ಬೆಳಿಗೇರಿ, ಆಂಜನೇಯ ಬಬಲಾದಿ, ಸುನೀತಾ ಚವ್ಹಾಣ, ವೀಣಾ ಮೋದಿ, ಶಕುಂತಲಾ ಜಿ, ಯಲ್ಲಪ್ಪ ಮ್ಯಾಳಿಕೇರಿ, ಭೀಮಬಾಯಿ ಶೆಂಡಿಗಿ, ಸಿದ್ದಲಿಂಗಪ್ಪ ನಾಯಕ, ಶಿವಣ್ಣ ಪಂಚಾಳ, ಶಿವರಾಜ ದಾಸನಕೇರಿ, ಶಿವು ಮುದ್ನಾಳ, ಶ್ರಿಕಾಂತ ಸುಂಗಲ್ಕರ್, ಜಿಲ್ಲಾ ಮಾಧ್ಯಮ ಸಹ ಸಂಚಾಲಕ ಚಂದ್ರಶೇಖರ ಕಡೆಸೂರ, ಮರಿಲಿಂಗ ಜಿನಿಕೇರಿ ಸೇರಿದಂತೆ ಅನೇಕರು ಉಪಸ್ಥಿತರಿದ್ದರು....

# ಮಹಿಳೆಯರು ಸ್ವಾವಲಂಬನೆ ಬದುಕು ರೂಪಿಸಿಕೊಳ್ಳಿ : ತಳವಾಡಿ

ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ : ಸ್ಪರ್ಧಾತ್ಮಕ ಯುಗದಲ್ಲಿ ಮಹಿಳೆಯರು ಕೂಡ ಪುರುಷ ಸಮಾನರಾಗಿ ಸಮಾಜದಲ್ಲಿ ಎಲ್ಲಾ ಕ್ಷೇತ್ರಗಳಲ್ಲಿ ಸಾಧನೆ ಮಾಡುತ್ತಿದ್ದಾರೆ, ಕಾರಣ ಗ್ರಾಮೀಣ ಭಾಗದ ಮಹಿಳೆಯರು ಕೂಡ ಕೌಶಲ್ಯ ತರಬೇತಿಯನ್ನು ಪಡೆದು ಸ್ವಾವಲಂಬನೆ ಬದುಕು ರೂಪಿಸಿಕೊಂಡು ಸಮಾಜದ ಮುಖ್ಯವಾಹಿನಿಗೆ ಬನ್ನಿ ಎಂದು ಜೀವನೋಪಾಯ ಮತ್ತು ಕೌಶಲ್ಯಾಭಿವೃದ್ಧಿ ಇಲಾಖೆ ಯಾದಗಿರಿ ಜಿಲ್ಲಾ ಸಹಾಯಕ ನಿರ್ದೇಶಕರಾದ ಬಸಪ್ಪ ಎಸ್. ತಳವಾಡಿ ಹೇಳಿದರು.




ತಾಲ್ಲೂಕಿನ ಹೊನಗೇರಾ ಗ್ರಾಮದಲ್ಲಿ ರುಚಿ ಟ್ರಸ್ಟ್ ಯಾದಗಿರಿ ವತಿಯಿಂದ ಕೌಶಲ್ಯಾಭಿವೃದ್ಧಿ ಮತ್ತು ಟೇಲರಿಂಗ್ ತರಬೇತಿ ಕೇಂದ್ರದಲ್ಲಿ ಆಯೋಜಿಸಿದ್ದ ಮಾಸಿಕ ಕಾರ್ಯಾಗಾರವನ್ನು ಸಸಿಗೆ ನೀರೆರೆಯುವ ಮೂಲಕ ಉದ್ಘಾಟಿಸಿ ಮಾತನಾಡಿದ ಅವರು, ಕೇಂದ್ರ ಮತ್ತು ರಾಜ್ಯ ಸರ್ಕಾರಗಳು ಪ್ರಸ್ತುತ ದಿನಗಳಲ್ಲಿ ಮಹಿಳೆಯರಿಗಾಗಿ ವಿಶೇಷ ಯೋಜನೆಗಳು ಅನುಷ್ಠಾನಕ್ಕೆ ತರಲು ನಿಟ್ಟಿನಲ್ಲಿ ಕಾರ್ಯೋನ್ಮುಖವಾಗಿದ್ದು ಅದರಲ್ಲಿ ವಿಶೇಷವಾಗಿ ನಮ್ಮ ಯಾದಗಿರಿ ಜಿಲ್ಲೆಯಲ್ಲಿ ಮಹಿಳೆಯರ ಸ್ವಾವಲಂಬಿ ಬದುಕು ಕಟ್ಟಿಕೊಳ್ಳಲು ರುಚಿ ಟ್ರಸ್ಟ್ ವಿಶೇಷ ಕಾರ್ಯ ಚಟುವಟಿಕೆಗಳು ಮುನ್ನಡೆಸಿಕೊಂಡು ಹೋಗುವುದು ಗಮನಿಸಿದಾಗ ನಮಗೆ ಬಹಳ ಸಂತಸದ ವಿಷಯ ಜೊತೆಗೆ ಟೇಲರಿಂಗ್ ತರಬೇತಿ ಕೇಂದ್ರದ ಕೌಶಲ್ಯಾಭಿವೃದ್ಧಿ ತರಬೇತಿ ಮಹಿಳೆಯರಿಗೆ ಮಾಸಿಕ ಕಾರ್ಯಾಗಾರವನ್ನು ನಿರಂತರವಾಗಿ ನಡೆಸುವ ಮೂಲಕ ಮಹಿಳೆಯರು ಎಲ್ಲಾ ರಂಗದಲ್ಲಿನ ಅನುಭವ ಕಟ್ಟಿಕೊಡುವ ಕಾರ್ಯ ವೈಖರಿ ಮೆಚ್ಚುವಂತದ್ದು ಎಂದು ಹರ್ಷ ವ್ಯಕ್ತಪಡಿಸಿದರು.

ನಂತರ 2025 ಎಪ್ರೀಲ್ 16 ನೇ ದಿನಾಂಕದಂದು ಕಲ್ಬುರ್ಗಿಯಲ್ಲಿ ವಿಭಾಗ ಮಟ್ಟದ ಕೌಶಲ್ಯಾಭಿವೃದ್ಧಿ ಉದ್ಯೋಗ ಮೇಳವನ್ನು ಸರ್ಕಾರ ಆಯೋಜಿಸಲಿದ್ದು ತಾವೂ ಮೊದಲು ಆನಲೈನ್ ಲಿಂಕ್ ಮೂಲಕ ತಮ್ಮ ಸಂಪೂರ್ಣ ಸ್ವವಿವರಗಳು ಅಪ್ಲೋಡ್ ಮಾಡಿ ನೋಂದಾಯಿಸಿ ಮೇಳದಲ್ಲಿ ಭಾಗವಹಿಸಿ ಅದರ ಸದುಪಯೋಗ ಪಡೆದುಕೊಳ್ಳಬೇಕು ಎಂದು ಮಾಹಿತಿ ನೀಡಿದರು.

ರುಚಿ ಟ್ರಸ್ಟ್ ಟೇಲರಿಂಗ ತರಬೇತಿ ಕೇಂದ್ರದ ಮಾರ್ಗದರ್ಶಿಕಿಯರಾದ ಶ್ರೀಮತಿ ಶ್ವೇತಾ ಆರ್. ಚಿಕ್ಕಮಠ ಪರಸನಹಳ್ಳಿ ಮಾತನಾಡಿ ಪ್ರತಿಯೊಬ್ಬ ಮಹಿಳೆಯೂ ಸಾಮಾಜಿಕವಾಗಿ ಆರ್ಥಿಕವಾಗಿ ಸದೃಢವಾಗುವ ಮೂಲಕ ಸ್ವತಂತ್ರ ಬದುಕು ರೂಪಿಸಿಕೊಳ್ಳಬೇಕು ಜೊತೆಗೆ ಶೈಕ್ಷಣಿಕ ಜ್ಞಾನ ಪಡೆಯುವ ಮೂಲಕ ವಿವಿಧ ಕೌಶಲಗಳನ್ನು ಕಲಿಯಿರಿ ಎಂದು ಹೇಳಿ ಆದ್ದರಿಂದಲೇ ರುಚಿ ಟ್ರಸ್ಟ್ ಮುಂಬರುವ ದಿನಗಳಲ್ಲಿ ಇನ್ನೂ ಹತ್ತು ಹಲವಾರು ಗ್ರಾಮಗಳಲ್ಲಿ ಟೇಲರಿಂಗ್ ತರಬೇತಿ ಕೇಂದ್ರಗಳು ತೆರೆಯುವ ಮೂಲಕ ಮಹಿಳೆಯರ ಸ್ವಾವಲಂಬಿ ಬದುಕು ಕಟ್ಟಿಕೊಳ್ಳಲು ಕಾರ್ಯಯೋಜನೆ ಸಿದ್ಧಪಡಿಸುತ್ತಿದ್ದು ಅದರ ಸದುಪಯೋಗವನ್ನು ಗ್ರಾಮೀಣ ಮಹಿಳೆಯರು ಪಡೆದುಕೊಳ್ಳಬೇಕೆಂದು ಕಿವಿ ಮಾತು ಹೇಳಿದರು.

ಕಾರ್ಯಾಗಾರದಲ್ಲಿ ತರಬೇತಿ ನಿರತ ಅಭ್ಯರ್ಥಿಗಳಾದ ಸಾಬಮ್ಮ ಹೊನಗೇರಾ ಹಾಗೂ ವಿದ್ಯಾಶ್ರೀ ಹೊನಗೇರಾ ತಮ್ಮ ತಮ್ಮ ಕೌಶಲ್ಯಾಭಿವೃದ್ಧಿ ಕುರಿತಾದ ಅನಿಸಿಕೆಗಳನ್ನು ವ್ಯಕ್ತಪಡಿಸಿದರು.


ಕಾರ್ಯಕ್ರಮದಲ್ಲಿ ತರಬೇತಿ ನಿರತ ಅಭ್ಯರ್ಥಿಗಳು ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

# ಶಾಂತರಸ -100 ಶತಮಾನೋತ್ಸವ ಆಚರಣೆ

ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ : ನಾಡಿನ ಖ್ಯಾತ ಕವಿ, ಬರಹಗಾರ, ಕನ್ನಡದ ಮೊಟ್ಟ ಮೊದಲ ಗಝಲ್ ಕವಿ, ನಾಡಿನ ಸಾಕ್ಷಿ ಪ್ರಜ್ಞೆ ಶಾಂತರಸ ಅವರ 100ನೇ ಜನ್ಮದಿನದ ನಿಮಿತ್ತ ಶಾಂತರಸ 100-ಶತಮಾನೋತ್ಸವ ಎನ್ನುವ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ.

ಕವಿ ಸಮೂಹ ಕೊಪ್ಪಳ , ಬಹುತ್ವ ಬಳಗ ಕೊಪ್ಪಳ, ಸಂಸ ಥಿಯೇಟರ್ ಬೆಂಗಳೂರು ಹಾಗೂ ಕನ್ನಡ ವಿಭಾಗ ಸರ್ಕಾರಿ ಪ್ರಥಮ ದರ್ಜೆ ಕಾಲೇಜ್ ಕೊಪ್ಪಳ ಇವರ ಸಹಯೋಗದಲ್ಲಿ ದಿ. 7-5-2025 ರಂದು ಸೋಮವಾರ ಬೆಳಿಗ್ಗೆ ಹತ್ತು ಗಂಟೆಗೆ ಕಾಲೇಜಿನ ಸಭಾಂಗಣದಲ್ಲಿ ಕಾರ್ಯಕ್ರಮವನ್ನು



ಹಮ್ಮಿಕೊಳ್ಳಲಾಗಿದೆ.

ಕಾರ್ಯಕ್ರಮದ ಉದ್ಘಾಟನೆಯನ್ನು ಡಾ. ಸುರೇಶ ಜಿ. ಸಹಾಯಕ ನಿರ್ದೇಶಕರು, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ಕೊಪ್ಪಳ ಇವರು ನೆರವೇರಿಸುವರು. ಶಾಂತರಸರ ಬದುಕು ಬರಹ ಕುರಿತು ಬರಹಗಾರ

ಅಕ್ಬರ್ ಕಾಲಿ ಮಿರ್ಚಿ ಹಾಗೂ ಗಾಯತ್ರಿ ಭಾವಿಕಟ್ಟಿ ಮುಖ್ಯಸ್ಥರು, ಕನ್ನಡ ವಿಭಾಗ ಸರಕಾರಿ ಪ್ರಥಮ ದರ್ಜೆ ಕಾಲೇಜ್ ಉಪನ್ಯಾಸ ನೀಡಲಿದ್ದಾರೆ. ಡಾ.ಭಾಗ್ಯಜ್ಯೋತಿ ಸಹ ಪ್ರಾಧ್ಯಾಪಕರು , ಹಾಗೂ ಗ್ಯಾನೇಶ್ ಹ್ಯಾಟಿ ಅಧ್ಯಕ್ಷರು ಬ್ಯಾಡ್ಮಿಂಟನ್ ಅಸೋಸಿಯೇಷನ್ ಇವರು ಕಾರ್ಯಕ್ರಮದಲ್ಲಿ ಉಪಸ್ಥಿತರಿರಲಿದ್ದು ಕಾಲೇಜಿನ ವಿದ್ಯಾರ್ಥಿಗಳಿಂದ ಗಜಲ್ ವಾಚನ ನಡೆಯಲಿದೆ.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಡಾ. ಡಿ.ಎಚ್.ನಾಯ್ಕ ಪ್ರಾಂಶುಪಾಲರು ವಹಿಸಿಕೊಳ್ಳಲಿದ್ದಾರೆ.

ಈ ಕಾರ್ಯಕ್ರಮದಲ್ಲಿ ಆಸಕ್ತರು ಭಾಗವಹಿಸಲು ಸಂಘಟಕ ಸಿರಾಜ್ ಬಿಸರಳ್ಳಿ ಕೋರಿದ್ದಾರೆ. ಹೆಚ್ಚಿನ ಮಾಹಿತಿಗಾಗಿ: 98802574888, 9945873626, 9448183708 ಸಂಪರ್ಕಿಸಬಹುದು.

# ಕೆ .ಮಂಜುನಾಥ್ ದೇವ್ ಬಣ)ಕನ್ನಡ ಜಾಗೃತಿ ವೇದಿಕೆಯಿಂದ ಕೊಪ್ಪಳ ಜಿಲ್ಲಾಧ್ಯಕ್ಷರಾಗಿ ಸೈಯದ್ ಅಸ್ಲಾಂ ನೇಮಕ

ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ : ಗಂಗಾವತಿ ನಗರದ ಸೈಯದ್ ಅಸ್ಲಾಂ ಅವರು ಕನ್ನಡ ಜಾಗೃತಿ ವೇದಿಕೆಯ ಸಂಸ್ಥಾಪಕ ರಾಜ್ಯಾಧ್ಯಕ್ಷ ಅವರನ್ನು ಬೆಂಗಳೂರಿನಲ್ಲಿ ಭೇಟಿಯಾದ ಸಂದರ್ಭದಲ್ಲಿ ಸೈಯದ್ ಅಸ್ಲಾಂ ಅವರನ್ನು ಕೊಪ್ಪಳ ಜಿಲ್ಲಾಧ್ಯಕ್ಷರನ್ನಾಗಿ ನೇಮಕ ಮಾಡಿದ್ದಾರೆ. ಕೆ.ಮಂಜುನಾಥ್ ದೇವ್

ಕಳೆದ ಹಲವು ವರ್ಷಗಳಿಂದ ನಾಡು, ನುಡಿ, ನೆಲ, ಜಲ, ಭಾಷೆ ವಿಚಾರವಾಗಿ ಸಂಘಟನೆ ಹಮ್ಮಿಕೊಂಡಿದ್ದ ವಿವಿಧ ಹೋರಾಟಗಳಲ್ಲಿ ತೊಡಗಿಸಿಕೊಂಡಿದ್ದ ಅವರನ್ನು ರಾಜ್ಯಾಧ್ಯಕ್ಷ ಸೈಯದ್ ಅಸ್ಲಾಂ ಕೆ.ಮಂಜುನಾಥ್ ದೇವ್ ಅವರು ಸೈಯದ್ ಅಸ್ಲಾಂ ಅವರನ್ನು ಜಿಲ್ಲಾಧ್ಯಕ್ಷ ಸ್ಥಾನಕ್ಕೆ ಆಯ್ಕೆ ಮಾಡಿದ್ದಾರೆ.

ಇದೇ ಸಂದರ್ಭದಲ್ಲಿ ಕೊಪ್ಪಳ ಜಿಲ್ಲಾ ಅಧ್ಯಕ್ಷರಾಗಿ ಆಯ್ಕೆಯಾದ ಸೈಯದ್ ಅಸ್ಲಾಂ ಅವರು ಕನ್ನಡ ಜಾಗೃತಿ ವೇದಿಕೆಯ ರಾಜ್ಯಾಧ್ಯಕ್ಷ ಕೆ.ಮಂಜುನಾಥ್ ದೇವ್ ಅವರನ್ನು ಶಾಲು ಹಾರ ಹಾಕಿ ಸನ್ಮಾನಿಸಿದ್ದಾರೆ.ಮತ್ತು ಕೊಪ್ಪಳ ಜಿಲ್ಲಾ ಅಧ್ಯಕ್ಷರಾಗಿ ನೇಮಕ ಮಾಡಿ ರಾಜ್ಯಾಧಕ್ಷರು ಆದೇಶ ಮಾಡಿದ್ದಾರೆ.

ಜಾಹೀರಾತಿಗಾಗಿ ಇಂದೇ ಸಂಪರ್ಕಿಸಿ:9980209238

ಜಿಲ್ಲಾ ಮಟ್ಟದ ಸರ್ಕಾರಿ ನೌಕರರ ಕ್ರೀಡಾಕೂಟ ಮತ್ತು ಸಾಂಸ್ಕೃತಿಕ ಸ್ಪರ್ಧೆಗಳಿಗೆ ಮೇಯರ್ ಚಾಲನೆ

# ಕ್ರೀಡೆಯು ದೈಹಿಕ–ಮಾನಸಿಕ ಆರೋಗ್ಯದ ಅವಿಭಾಜ್ಯ ಅಂಗ: ಮುಲ್ಲಂಗಿ ನಂದೀಶ್

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಏ.05–ದೈನಂದಿನ ಜೀವನದಲ್ಲಿ ಪ್ರತಿಯೊಬ್ಬರ ದೈಹಿಕ ಮತ್ತು ಮಾನಸಿಕ ಸದೃಢ ಆರೋಗ್ಯಕ್ಕೆ ಕ್ರೀಡೆಗಳು ಅವಿಭಾಜ್ಯಅಂಗವಾಗಿದ್ದು,ಪ್ರತಿದಿನ ಸಮಯಕ್ಕನುಗುಣವಾಗಿಕ್ರೀಡೆಹಾಗೂ ವ್ಯಾಯಾಮಗಳಿಗೆಮೀಸಲಿಡಬೇಕು ಎಂದು ಬಳ್ಳಾರಿ ಮಹಾನಗರ ಪಾಲಿಕೆಯ ಮಹಾಪೌರರಾದ ಮುಲ್ಲಂಗಿ ನಂದೀಶ್ ಅವರು ಹೇಳಿದರು.



ಜಿಲ್ಲಾಡಳಿತ,ಜಿಲ್ಲಾಪಂಚಾಯತ್, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಹಾಗೂ ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘ, ಬಳ್ಳಾರಿ ಇವರ ಸಂಯುಕ್ತಾಶ್ರಯದಲ್ಲಿ ನಗರದ ಜಿಲ್ಲಾಕ್ರೀಡಾಂಗಣ ಮೈದಾನದಲ್ಲಿ ಶನಿವಾರಆಯೋಜಿಸಲಾಗಿದ್ದಜಿಲ್ಲಾ ಮಟ್ಟದ ರಾಜ್ಯ ಸರ್ಕಾರಿ ನೌಕರರ ಕ್ರೀಡಾಕೂಟ ಮತ್ತು ಸಾಂಸ್ಕೃತಿಕ ಸ್ಪರ್ಧೆ ಕಾರ್ಯಕ್ರಮಗಳಿಗೆ ಚಾಲನೆ ನೀಡಿ ಅವರು ಮಾತನಾಡಿದರು.

ಪ್ರಸ್ತುತದಲ್ಲಿ ಎಲ್ಲರೂ ಮೊಬೈಲ್ ಗೀಳಿಗೆ ದಾಸರಾಗುತ್ತಿದ್ದು, ದೈಹಿಕ ಮತ್ತು ಮಾನಸಿಕ ಆರೋಗ್ಯ ಕಾಪಾಡುವಲ್ಲಿ ಸೋಮಾರಿತನ ಹಿಂಬಾಲಿಸುತ್ತಿದೆ. ಹಾಗಾಗಿ ಎಲ್ಲರೂ ತಪ್ಪದೇ ಸಿಗುವ ಸಮಯದಲ್ಲಿಯೇ ನಿಯಮಿತ ವ್ಯಾಯಾಮ ಮತ್ತು ಕ್ರೀಡೆಗಳಲ್ಲಿ ತೊಡಗಿಸಿಕೊಳ್ಳೋಣ ಎಂದು ಕರೆ ನೀಡಿದರು.

ಜಿಲ್ಲಾ ಪಂಚಾಯತ್‌ನ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಮಹಮ್ಮದ್ ಹ್ಯಾರೀಸ್ ಸುಮೈರ್ ಅವರು ಕ್ರೀಡಾ ಪ್ರತಿಜ್ಞಾ ವಿಧಿ ಬೋಧಿಸಿ ಮಾತನಾಡಿ, ದೈಹಿಕ ಹಾಗೂ ಮಾನಸಿಕ ನೆಮ್ಮದಿಗೆ ಕ್ರೀಡಾಕೂಟಗಳು ಹೆಚ್ಚು ಸಹಕಾರಿಯಾಗಿದ್ದು, ಸರ್ಕಾರಿ ನೌಕರರು ಉತ್ಸಾಹದಿಂದ ಭಾಗವಹಿಸಬೇಕು. ಕ್ರೀಡಾ ಚಟುವಟಿಕೆಗಳು ಕೇವಲ ಒಂದು ದಿನಕ್ಕೆ ಸೀಮಿತವಾಗದೇ ಹೆಚ್ಚಾಗಿ ಆಯೋಜಿಸಬೇಕು ಎಂದು ಹೇಳಿದರು.

ಸರ್ಕಾರಿ ನೌಕರರು ದಿನನಿತ್ಯದ ಒತ್ತಡನಿವಾರಣೆಗೆ ತಮ್ಮ ಆರೋಗ್ಯಕ್ಕೆ ಹೆಚ್ಚಿನ ಗಮನ ನೀಡಬೇಕು. ತಮ್ಮಿಷ್ಟದ ಕ್ರೀಡೆಗಳಲ್ಲಿ ದಿನಂಪ್ರತಿ ಭಾಗವಹಿಸುವ ಮೂಲಕ ದೈಹಿಕ ಮತ್ತು ಮಾನಸಿಕ ಆರೋಗ್ಯ ಕಾಪಾಡಿಕೊಳ್ಳಲು ಸಲಹೆ ನೀಡಿದರು.

ಅಪರ ಜಿಲ್ಲಾಧಿಕಾರಿ ಮಹಮ್ಮದ್ ಝುಬೇರ್.ಎನ್ ಅವರು ಮಾತನಾಡಿ, ಹಣದಿಂದ ಆರೋಗ್ಯ ಸಿಗುವುದಿಲ್ಲ, ಬದಲಾಗಿ ದೈನಂದಿನ ಚಟುವಟಿಕೆಗಳಲ್ಲಿ ತಮ್ಮನ್ನು ತಾವು ತೊಡಗಿಸಿಕೊಂಡಾಗ ಮಾತ್ರ ಆರೋಗ್ಯವನ್ನು ಸದೃಢವಾಗಿಟ್ಟುಕೊಳ್ಳಬಹುದು ಎಂದು ಕಿವಿಮಾತು ಹೇಳಿದರು.

ರಾಜ್ಯ ಸರ್ಕಾರಿ ನೌಕರರ ಸಂಘದ ಜಿಲ್ಲಾ ಶಾಖೆಯ ಕಾರ್ಯದರ್ಶಿ ಜಿ.ವೈ.ತಿಪ್ಪಾರೆಡ್ಡಿ ಅವರು ಪ್ರಾಸ್ತಾವಿಕವಾಗಿ ಮಾತನಾಡಿ, ಸರ್ಕಾರಿ ನೌಕರರು ಇಲಾಖೆಗಳ ಪ್ರತಿದಿನದ ಕೆಲಸಗಳಿಂದ ಒತ್ತಡಮುಕ್ತರಾಗಿ ಕ್ರೀಡೆ ಮತ್ತು ಸಾಂಸ್ಕೃತಿಕ ಕಾರ್ಯಕ್ರಮಗಳಲ್ಲಿ ಭಾಗವಹಿಸಿ ತಮ್ಮಲ್ಲಿನ ಪ್ರತಿಭೆ ಹೊರಹಾಕಲು ಸೂಕ್ತ ವೇದಿಕೆಯಾಗಿದ್ದು, ಬಿರು–ಬಿಸಿಲಿನಲ್ಲಿಯೂ ಉತ್ಸುಕತೆಯಿಂದ ಭಾಗವಹಿಸುತ್ತಿರುವುದು ಕೀರ್ತಿದಾಯಕ ಸಂಗತಿಯಾಗಿದೆ ಎಂದು ಹೇಳಿದರು.

ಸ್ಪರ್ಧಾ ಮನೋಭಾವನೆಯಿಂದ ಭಾಗವಹಿಸಿ ಜಿಲ್ಲಾ, ರಾಜ್ಯ ಹಾಗೂ ರಾಷ್ಟ್ರಮಟ್ಟದಲ್ಲಿ ಜಿಲ್ಲೆಯ ಕೀರ್ತಿ ಬೆಳಗಿಸಬೇಕು. 2024–25ನೇ ಸಾಲಿನ ಜಿಲ್ಲಾ ಮಟ್ಟದ ಸರ್ಕಾರಿ ನೌಕರರ ಕ್ರೀಡಾಕೂಟ ಮತ್ತು ಸಾಂಸ್ಕೃತಿಕ ಸ್ಪರ್ಧೆಗಳು ಏ.05 ರಿಂದ ಎರಡು ದಿನಗಳ ಕಾಲ ಜಿಲ್ಲಾ ಕ್ರೀಡಾಂಗಣದಲ್ಲಿ ನಡೆಯಲಿದ್ದು, ಎಲ್ಲರೂ ಭಾಗವಹಿಸಬಹುದು ಎಂದು ತಿಳಿಸಿದರು.

*ಆಕರ್ಷಕ ಪಥಸಂಚಲನ:*

ಉದ್ಘಾಟನೆಗೂ ಮುನ್ನ ಸಂಡೂರು, ಸಿರುಗುಪ್ಪ, ಕುರುಗೋಡು, ಕಂಪ್ಲಿ ಮತ್ತು ಬಳ್ಳಾರಿ ತಾಲ್ಲೂಕುಗಳಿಂದ ಕ್ರೀಡೆ ಮತ್ತು ಸಾಂಸ್ಕೃತಿಕ ಸ್ಪರ್ಧೆಗಳಲ್ಲಿ ನೋಂದಾಯಿಸಿಕೊಂಡಿದ್ದ ನೌಕರರಿಂದ ಕ್ರೀಡಾಧ್ವಜದೊಂದಿಗೆ ಆಕರ್ಷಕ ಪಥಸಂಚಲನ ನಡೆಯಿತು. ಇದೇ ವೇಳೆ ಗಣ್ಯರು ಪಥಸಂಚಲನದಿಂದ ಗೌರವ ವಂದನೆ ಸ್ವೀಕರಿಸಿದರು.

ಬಳಿಕ ಗಣ್ಯರೆಲ್ಲರೂ ಸೇರಿ ಕ್ರೀಡಾ ಧ್ವಜಾರೋಹಣಾ ನೆರವೇರಿಸಿದರು.

ಸಮಾರಂಭದಲ್ಲಿ ಹಸಿರು ಕ್ರಾಂತಿಯ ಹರಿಕಾರ, ಭಾರತದ ಮಾಜಿ ಉಪ ಪ್ರಧಾನಮಂತ್ರಿ ಡಾ.ಬಾಬು ಜಗಜೀವನ್‌ರಾಮ್ ಅವರ 118 ನೇ ಜನ್ಮದಿನೋತ್ಸವದ ಅಂಗವಾಗಿ ಅವರ ಭಾವಚಿತ್ರಕ್ಕೆ ಗಣ್ಯರೆಲ್ಲರೂ ಸೇರಿ ಪುಷ್ಪಾರ್ಚನೆಗೈದರು.

ಈ ಸಂದರ್ಭದಲ್ಲಿ ಅಬಕಾರಿ ಉಪ ಆಯುಕ್ತ ಮಂಜುನಾಥ. ಎನ್., ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಯಲ್ಲಾ ರಮೇಶ್ ಬಾಬು, ರಾಜ್ಯ ಸರ್ಕಾರಿ ನೌಕರರ ಸಂಘದ ಉಪಾಧ್ಯಕ್ಷರು ಹಾಗೂ ಜಿಲ್ಲಾಧ್ಯಕ್ಷರಾದ ಎಂ.ಎ.ಆಸೀಫ್ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಸಹಾಯಕ ನಿರ್ದೇಶಕರಾದ ಕೆ.ಗ್ರೇಸಿ, ರಾಜ್ಯ ಜಂಟಿ ಕಾರ್ಯದರ್ಶಿ ಎನ್. ರಮೇಶ್, ಸಿರುಗುಪ್ಪ ತಾಲ್ಲೂಕು ಅಧ್ಯಕ್ಷ ಹುಚ್ಚೀರಪ್ಪ, ಸಂಡೂರು ತಾಲ್ಲೂಕು ಅಧ್ಯಕ್ಷ ಸಿದ್ದಣ್ಣ ಯಳವಾರ, ಕುರುಗೋಡು ತಾಲ್ಲೂಕು ಅಧ್ಯಕ್ಷ ಗುಂಡಪ್ಪನವರ ನಾಗರಾಜ, ಕಂಪ್ಲಿ ತಾಲ್ಲೂಕು ಅಧ್ಯಕ್ಷ ಹೆಚ್. ದೊಡ್ಡಬಸಪ್ಪ ಸೇರಿದಂತೆ ರಾಜ್ಯ ಸರ್ಕಾರಿ ನೌಕರರ ಸಂಘದ ಜಿಲ್ಲಾ ಮಟ್ಟದ ಪದಾಧಿಕಾರಿಗಳು, ವಿವಿಧ ತಾಲ್ಲೂಕುಗಳ ಅಧ್ಯಕ್ಷರು, ಜಿಲ್ಲೆಯ ಎಲ್ಲಾ ಶಾಖೆಯ ಪದಾಧಿಕಾರಿಗಳು, ಕಾರ್ಯಕಾರಿ ಸಮಿತಿ ಸದಸ್ಯರು ಹಾಗೂ ಎಲ್ಲಾ ಇಲಾಖೆಯ ವೃಂದ ಸಂಘಗಳ ಅಧ್ಯಕ್ಷರು, ಪದಾಧಿಕಾರಿಗಳು, ಜಿಲ್ಲೆಯ ಅಧಿಕಾರಿಗಳು, ನೌಕರರ ಬಾಂಧವರು ಹಾಗೂ ಇತರರು ಉಪಸ್ಥಿತರಿದ್ದರು.

# ಹಳ್ಳಿಗಳಲ್ಲಿದೆ ಜಾನಪದ ಜೀವಂತ: ಡಾ.ಚಿತ್ರಶೇಖರ ಚಿರಳ್ಳಿ.



ಮಲ್ಲಮ್ಮ ನುಡಿ ವಾರ್ತೆ

ಬಸವಕಲ್ಯಾಣ: – ಏ 5 ಜಾನಪದದ ಜೀವಂತಿಕೆ ಹಳ್ಳಿಗಳಲ್ಲಿ ಮಾತ್ರಯಿದೆ. ನಗರಗಳು ಆಧುನಿಕತೆಯ ಭರಾಟೆಯಲ್ಲಿ ಮುಳುಗಿದೆ ಎಂದು ಚಿಟಗುಪ್ಪಾ ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಸಹಾಯಕ ಪ್ರಾಧ್ಯಾಪಕ ಡಾ. ಚಿತ್ರಶೇಖರ ಚಿರಳ್ಳಿ ಹೇಳಿದರು.

ನಗರದ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಹಮ್ಮಿಕೊಂಡಿದ್ದ ಜಾನಪದ ಉತ್ಸವ–2025 ಸಮಾರಂಭದಲ್ಲಿ ಮಾತನಾಡಿ ನಮ್ಮ ಹಿರಿಯರ ಒಟ್ಟು ಜೀವನ ಕ್ರಮವೇ ಜಾನಪದವಾಗಿತ್ತು ಎಂದರು.

ಹಬ್ಬ,ಹರಿದಿನ,ಜಾತ್ರೆ,ಉತ್ಸವಗಳು ಸೇರಿ ಇಡೀ ಜನಪದ ಸಂಸ್ಕೃತಿ ಹೊಸ ಪೀಳಿಗೆಗೆ ಪರಿಚಯಿಸುವ ಕೆಲಸ ಜಾನಪದ ಉತ್ಸವದಿಂದ ನಡೆಯುತ್ತದೆ. ಜಾನಪದ ಸಂಸ್ಕೃತಿ ಗ್ರಾಮೀಣ ಪ್ರದೇಶದಲ್ಲಿ ಇಂದಿಗೂ ಜೀವಂತವಾಗಿದೆ ಎಂದರು.

ಬಸವೇಶ್ವರ ಪದವಿ ಕಾಲೇಜು ಅಧ್ಯಾಪಕ ಡಾ. ಭೀಮಾಶಂಕರ ಬಿರಾದಾರ ಮಾತನಾಡಿ,

ಸಂವಾದಗಳಿಲ್ಲದಿದ್ದರೆ ಲೋಕ ನಿರ್ವಾತ ಸ್ಥಿತಿಗೆ ತಲುಪುತ್ತದೆ. ಸಾಹಿತ್ಯ,ರಂಗಭೂಮಿ,ಜಾನಪದಗಳು ಮನುಷ್ಯ ಲೋಕದ ಚೈತನ್ಯದ ಕ್ರಿಯಾಶೀಲತೆಗೆ ಕಾರಣವಾಗಿದೆ. ಸಾಂಸ್ಕೃತಿಕ ಸಂವಾದಗಳು ಲೋಕಪ್ರಜ್ಞೆಯ ದಾರಿಗಳಾಗಿವೆ. ರಂಗಭೂಮಿ ಕಲೆಯ ಜೊತೆಗೆ ಸಾಂಸ್ಕೃತಿಕ ಎಚ್ಚರ ಮೂಡಿಸುವ ಮಾಧ್ಯಮವಾಗಿದೆ ಎಂದರು.

ಜನಪದ ರಂಗಭೂಮಿಗಿಂತ ಬೌದ್ಧಿಕ ಲೋಕವಾದ ಹವ್ಯಾಸಿ ರಂಗಭೂಮಿ ಸಮಾಜದ ಅರಿವಿಗೆ, ಪ್ರತಿರೋಧಕ್ಕೆ, ಕನಸುಗಾರಿಕೆಗೆ ವೇದಿಕೆಯಾಗಿದೆ. ಸಂವಾದಗಳಿಲ್ಲದ ಈ ಕಾಲಘಟ್ಟದಲ್ಲಿ ತಾತ್ವಿಕ ಭಿನ್ನಾಭಿಪ್ರಾಯ ಇರುವವರನ್ನೂ ವಿರೋಧಿಗಳಾಗಿಗ್ರಹಿಸುತ್ತಿರುವುದು ಅಪಾಯಕಾರಿ. ಜನಪದರು ಮಾತುಕತೆ , ಸಂವಾದಕ್ಕೆ ಆದ್ಯತೆ ನೀಡಿಯೇ ಜೀವನ ಪ್ರೀತಿ ಕಾಯ್ದುಕೊಳ್ಳಲು ಸಾಧ್ಯವಾಗಿತ್ತು ಎಂದರು.

ಭೂಮಿತತ್ವಹಾಗೂ ಮನುಷ್ಯತ್ವದ ತಾತ್ವಿಕತೆ ತನ್ನ ಒಡಲಿನಲ್ಲಿ ಇರಿಸಿಕೊಂಡ ಜಾನಪದ ಸಂಸ್ಕೃತಿ ಸೌಹಾರ್ದತೆ, ಸಹಬಾಳ್ವೆಯನ್ನು ಪ್ರತಿನಿಧಿಸುತ್ತದೆ. ಉತ್ಸವಗಳು ಕಲೆ, ಸೃಜನಶೀಲತೆಯನ್ನು ಅರಳಿಸುವ ಹಾಗೂ ಮಾನವೀಯ ಸಂಬಂಧಗಳನ್ನು ಕಾಪಿಡುವ ದಾರಿಯಾಗಿವೆ. ಬಹುಸಂಸ್ಕೃತಿಯ ಮೇಳೈಕೆ ಉತ್ಸವಗಳ ಚೆಹರೆಯಾಗಿದೆ ಎಂದರು.

ಸಮಾರಂಭ ಉದ್ಘಾಟಿಸಿ ಮಾತನಾಡಿ ಜಿಲ್ಲಾ ಶರಣ ಸಾಹಿತ್ಯ ಪರಿಷತ್ತಿನ ಅಧ್ಯಕ್ಷ ಪ್ರೊ. ಶಂಭುಲಿಂಗ ಕಾಮಣ್ಣ

ಜನಪದರು ಬದುಕುವ ಕಲೆ ಅರಿತಿದ್ದರು. ಹಾಗಾಗಿಯೇ ಬದುಕಿನುದ್ದಕ್ಕೂ ಅವರು ಸಂತೋಷ ಮತ್ತು ಸಂಭ್ರಮದಿಂದಿದ್ದರು. ಬದುಕುವ ಕಲೆಯಿಂದಲೇ ಬದುಕಿಗೆ ಘನತೆಯಿದೆ ಎಂದರು.

ಆಧುನಿಕ ಕಾಲಘಟ್ಟದಲ್ಲಿ ಬದುಕುವ ಕಲೆಗಿಂತ ಭೌತಿಕ ಸಂಗತಿಗಳ ಬೆನ್ನಟ್ಟಿ ಓಡುವ ಅವಸರ ಕಲಿತಿದ್ದೇವೆ. ಕಲೆಯಿಂದ ಬದುಕುವುದು ಅರಿತಿಲ್ಲ. ಯಾಂತ್ರಿಕ ಜೀವನದಿಂದ ನೆಮ್ಮದಿ, ಶಾಂತಿ ಹಾಳಾಗುತ್ತದೆ. ಸಂಕೀರ್ಣತೆ ಇಲ್ಲದ, ಸಹಜ, ಸರಳ, ಅನುಭವದಿಂದ ಕೂಡಿದ ಜನಪದರ ಜೀವನದ ಸತ್ವ ತಿಳಿಯಬೇಕು. ಬದುಕು ಹಸನಾಗುವ ಬಗೆ ಜನಪದರಲ್ಲಿ ಕರಗತವಾಗಿತ್ತು. ಜೀವನ ಸತ್ವ ಹಾಗೂ ಜಾನಪದ ಸಂಸ್ಕೃತಿ ಯುವ ಸಮೂಹಕ್ಕೆ ದಾಟಿಸಲು ಜಾನಪದ ಉತ್ಸವ ಸರ್ಕಾರ ಮಾಡುತ್ತಿದೆ ಎಂದರು.

ಅಧ್ಯಕ್ಷತೆ ವಹಿಸಿದ್ದ ಕಾಲೇಜಿನ ಪ್ರಾಚಾರ್ಯರಾದ ಡಾ. ಬಲಿರಾಮ ಹುಡೆ ಮಾತನಾಡಿ, ಇಂದು ಒಕ್ಕಲುತನ ಮಾಡುವ ಎಲ್ಲರ ಮನೆಯಲ್ಲೂ ಜಾನಪದ ಸಂಸ್ಕೃತಿ ಜೀವಂತವಾಗಿದೆ. ಗ್ರಾಮೀಣ ಸೊಗಡಿನಿಂದ, ಸಂಸ್ಕೃತಿಯಿಂದ ದೂರ ಸರಿಯುತ್ತಿರುವ ಈ ಕಾಲದ ಎಲ್ಲಾ ಜನರು ಜಾಗತೀಕರಣದ ಗುಲಾಮರಾಗುತ್ತಿದ್ದಾರೆ. ಇದು ಜಾನಪದ ಸಂಸ್ಕೃತಿ ಅಳಿಯಲು ಕಾರಣವಾಗಿದೆ ಎಂದು ಹೇಳಿದರು.

ಈ ಸಂದರ್ಭದಲ್ಲಿ

ದೀಪಕಗೌಡ, ಸುಭಾಷಮಚಕುರೆ, ಸುದರ್ಶನಾ, ಶ್ರೀದೇವಿ ಚೌಧರಿ, ಮಹೇಶ ಮಂತಾಳೆ, ಬಸವರಾಜ ಬಿರಾದಾರ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

ಡಾ. ಚಂದ್ರಕಾಂತ ಗಾಯಕವಾಡ ಸ್ವಾಗತಿಸಿದರು. ಡಾ. ಶ್ರೀಕಾಂತ ಚೌಹಾಣ್ ಪ್ರಾಸ್ತಾವಿಕ.

ಮೀನಾಕ್ಷಿ ಬಿರಾದಾರ ನಿರೂಪಿಸಿದರು. ಡಾ. ಪೀರಪ್ಪ ಸಜ್ಜನ್ ವಂದಿಸಿದರು.

# ಡಾ.ಬಾಬು ಜಗಜೀವನರಾಂ ಅವರ ಆದರ್ಶ, ಚಿಂತನೆಗಳು ಎಲ್ಲಾ ಕಾಲಕ್ಕೂ ಮಾದರಿ: ಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರಾ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಏ.05–ಹಸಿರು ಕ್ರಾಂತಿ ಹರಿಕಾರ, ರಾಷ್ಟ್ರನಾಯಕ, ಭಾರತದ ಮಾಜಿ ಉಪಪ್ರಧಾನ ಮಂತ್ರಿಗಳಾದ ಡಾ.ಬಾಬು ಜಗಜೀವನರಾಂ ಅವರ ಆದರ್ಶ, ಚಿಂತನೆಗಳು ಎಲ್ಲಾ ಕಾಲಕ್ಕೂ ಮಾದರಿಯಾಗಿದ್ದು, ಅವರ ವ್ಯಕ್ತಿತ್ವ ಹಾಗೂ ಜೀವನ ಚರಿತ್ರೆಯನ್ನು ಯುವಪೀಳಿಗೆಗೆ ಪರಿಚಯಿಸಬೇಕು ಎಂದು ಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರಾ ಅವರು ಹೇಳಿದರು.




ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಸಮಾಜಕಲ್ಯಾಣ ಇಲಾಖೆ ಹಾಗೂ ಮಹಾನಗರ ಪಾಲಿಕೆ ಇವರ ಸಂಯುಕ್ತಾಶ್ರಯದಲ್ಲಿ ನಗರದ ಡಾ.ಜೋಳದರಾಶಿ ದೊಡ್ಡನಗೌಡ ರಂಗಮದಿರದ ವೇದಿಕೆ ಸಭಾಂಗಣದಲ್ಲಿ ಶನಿವಾರ ಆಯೋಜಿಸಲಾಗಿದ್ದ ಹಸಿರು ಕ್ರಾಂತಿಯ ಹರಿಕಾರ, ಭಾರತದ ಮಾಜಿ ಉಪ ಪ್ರಧಾನಮಂತ್ರಿ ಡಾ.ಬಾಬು ಜಗಜೀವನ್ ರಾಮ್ 118 ನೇ ಜಯಂತಿ ಕಾರ್ಯಕ್ರಮವನ್ನು ಡಾ.ಬಾಬು ಜಗಜೀವನ್ ರಾಮ್ ಅವರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡುವುದರ ಮೂಲಕ ಉದ್ಘಾಟಿಸಿ ಅವರು ಮಾತನಾಡಿದರು.

ಶೋಷಿತರ ಹಕ್ಕುಗಳಿಗಾಗಿ ಹೋರಾಟ ಮಾಡಿದ ಮಹಾನ್ ನಾಯಕರಾದ ಡಾ. ಬಾಬುಜಗಜೀವನರಾಂ ಅವರು ಶೋಷಿತರ ಆಶಾಕಿರಣರಾಗಿದ್ದಾರೆ ಎಂದರು.

ಮಹಾನಗರಪಾಲಿಕೆಯ ಮಹಾಪೌರರಾದ ಮುಲ್ಲಂಗಿ ನಂದೀಶ್ ಅವರು ಅಧ್ಯಕ್ಷತೆ ವಹಿಸಿ ಮಾತನಾಡಿ, ಬಾಬು ಜಗಜೀವನ್ ರಾಮ್ ಅವರ ಜನ್ಮ ವಾರ್ಷಿಕೋತ್ಸವವನ್ನು ಏಪ್ರಿಲ್ 5 ರಂದು ಪ್ರತಿವರ್ಷ ಆಚರಿಸುತ್ತೇವೆundefined. ಪರಿಶಿಷ್ಟಜಾತಿಗಳಂತಹ ತುಳಿತಕ್ಕೊಳಗಾದ ವರ್ಗಗಳ ಹಕ್ಕುಗಳಿಗಾಗಿ ಹೋರಾಡಿದ ಗಮನಾರ್ಹ ಭಾರತೀಯ ಕಾರ್ಯಕರ್ತ ಮತ್ತು ರಾಜಕಾರಣಿಯಾಗಿದ್ದರು ಎಂದರು.

ಜಿಲ್ಲಾ ಪಂಚಾಯತ್‌ನ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಮಹಮ್ಮದ್ ಹ್ಯಾರಿಸ್ ಸುಮೈರ್ ಅವರು ಪ್ರಾಸ್ತಾವಿಕವಾಗಿ ಮಾತನಾಡಿ, ರಾಷ್ಟ್ರದ ಬೆನ್ನೆಲುಬು ರೈತ ಹಾಗೂ ಯೋಧ ಈ ಎರಡೂ ಸಮುದಾಯಕ್ಕೆ ಡಾ.ಬಾಬು ಜಗಜೀವನ ರಾಂ ಅವರ ಮಾರ್ಗದರ್ಶನ ಹಾಗೂ ನಾಯಕತ್ವ ಉಲ್ಲೇಖನಾರ್ಹವಾಗಿದೆ. ಅವರ ಸಾಮಾಜಿಕ ಕಳ–ಕಳಿ ಹಾಗೂ ರಾಜಕೀಯ ವಿಚಾರಧಾರೆಗಳನ್ನು ನಾವೆಲ್ಲರೂ ಅಳವಡಿಸಿಕೊಳ್ಳಬೇಕು ಎಂದು ಹೇಳಿದರು.

ಸಂಗನಕಲ್ಲಿನ ಲೇಖಕರು ಮತ್ತು ಚಿಂತಕರಾದ ಬಿ.ಶ್ರೀನಿವಾಸಮೂರ್ತಿ ಅವರು ಕಾರ್ಯಕ್ರಮದ ವಿಶೇಷ ಭಾಷಣಕಾರರಾಗಿ ಮಾತನಾಡಿ, ಡಾ.ಬಾಬು ಜಗಜೀವನ್ ರಾಮ್ ಅವರು 1908 ರ ಏ.05 ರಂದು ಬಿಹಾರ್‌ನ ಚಾಂದ್ವಾ ಗ್ರಾಮದಲ್ಲಿ ಜನಿಸಿದರು. ಇವರನ್ನು ಜನಪ್ರಿಯವಾಗಿ ಬಾಬೂಜಿ ಎಂದು ಕರೆಯಲ್ಪಡುತ್ತಾರೆ ಹಾಗೂ ಇವರು ಭಾರತದ ಸ್ವಾತಂತ್ರ್ಯ ಹೋರಾಟಗಾರ ಮತ್ತು ಬಿಹಾರದ ರಾಜಕಾರಣಿಯಾಗಿದ್ದರು ಎಂದು ತಿಳಿಸಿದರು.

1935 ರಲ್ಲಿ ದಲಿತರಿಗೆ ಸಮಾನತೆಯನ್ನು ಸಾಧಿಸಲು ಸಮರ್ಪಿತವಾದ ಅಖಿಲ ಭಾರತ ಶೋಷಿತ ವರ್ಗಗಳ ಲೀಗ್ ಅನ್ನು ಸ್ಥಾಪಿಸುವಲ್ಲಿ ಅವರು ಪ್ರಮುಖ ಪಾತ್ರ ವಹಿಸಿದ್ದರು ಮತ್ತು 1937 ರಲ್ಲಿ ಬಿಹಾರ ವಿಧಾನಸಭೆಗೆ ಆಯ್ಕೆಯಾದರು. ನಂತರ, ಅವರು ಗ್ರಾಮೀಣ ಕಾರ್ಮಿಕ ಚಳವಳಿಯನ್ನು ಸಂಘಟಿಸಿದರು ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಚಿಗುರು ಕಲಾತಂಡದಿಂದ ಡಾ.ಬಾಬು ಜಗಜೀವನ್ ರಾಮ್ ಕುರಿತ ಗೀತೆಗಳನ್ನು ಪ್ರಸ್ತುತ ಪಡಿಸಿದರು ಮತ್ತು ಕರ್ನಾಟಕ ರಾಜ್ಯ ಡಾ.ಬಾಬು ಜಗಜೀವನ್ ರಾಮ್ ಜನಜಾಗೃತಿ ವೇದಿಕೆ ವತಿಯಿಂದ ಜಯಂತಿಯ ಅಂಗವಾಗಿ ರಕ್ತದಾನ ಶಿಬಿರ ನಡೆಯಿತು. ಡಾ.ಬಾಬು ಜಗಜೀವನ್ ರಾಮ್ ಜಯಂತಿಯ ಅಂಗವಾಗಿ ಪದವಿ ವಿದ್ಯಾರ್ಥಿಗಳಿಗೆ ಏರ್ಪಡಿಸಿದ್ದ ಪ್ರಭಂದ ಮತ್ತು ಭಾಷಣ ಸ್ಪರ್ಧೆಗಳಲ್ಲಿ ವಿಜೇತರಾದ ವಿದ್ಯಾರ್ಥಿಗಳಿಗೆ ಬಹುಮಾನ ವಿತರಿಸಲಾಯಿತು. ಆರು ಫಲಾನುಭವಿಗಳಿಗೆ ಆಧುನಿಕ ಚರ್ಮಕಾರರ ಪಾದುಕೆ ಕುಟಿರಗಳನ್ನು ವಿತರಣೆ ಮಾಡಲಾಯಿತು.

ಈ ಸಂದರ್ಭದಲ್ಲಿ ಜಿಲ್ಲಾ ಗ್ಯಾರಂಟಿ ಯೋಜನೆ ಅನುಷ್ಠಾನ ಪ್ರಾಧಿಕಾರದ ಜಿಲ್ಲಾಧ್ಯಕ್ಷ ಚಿದಾನಂದಪ್ಪ, ಕರ್ನಾಟಕ ರಾಜ್ಯ ಡಾ.ಬಾಬು ಜಗಜೀವನ್ ರಾಮ್ ಜನಜಾಗೃತಿವೇದಿಕೆ ರಾಜ್ಯಾಧ್ಯಕ್ಷ ಟಿ.ಪಂಪಾಪತಿ, ಸಮಾಜ ಕಲ್ಯಾಣ ಇಲಾಖೆಯ ಉಪ ನಿರ್ದೇಶಕ ಮಲ್ಲಿಕಾರ್ಜುನ.ಬಿ., ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಬಿ.ನಾಗರಾಜ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕ ವಿಜಯ್ ಕುಮಾರ್ ಸೇರಿದಂತೆ ಸೇರಿದಂತೆ ಎಲ್ಲಾ ಸ್ಥಳೀಯ ಸಂಸ್ಥೆಗಳ ಜನಪ್ರತಿನಿಧಿಗಳು, ಸಂಘ–ಸಂಸ್ಥೆಗಳ ಪದಾಧಿಕಾರಿಗಳು, ಮುಖಂಡರು ಹಾಗೂ ಸಾರ್ವಜನಿಕರು ಹಾಗೂ ಇತರರು ಉಪಸ್ಥಿತರಿದ್ದರು.

*ಸಂಭ್ರಮದ ಮೆರವಣಿಗೆ:*

ಡಾ.ಬಾಬು ಜಗಜೀವನ್ ರಾಮ್ ಜಯಂತಿಯ ಅಂಗವಾಗಿ ಏರ್ಪಡಿಸಿದ್ದ ಮೆರವಣಿಗೆಯು ವಿವಿಧ ಸಾಂಸ್ಕೃತಿ ಕಲಾ ತಂಡಗಳನ್ನೊಳಗೊಂಡು ನಗರದಲ್ಲಿ ಸಂಭ್ರಮದಿಂದ ನಡೆಯಿತು.

ಮೆರವಣಿಗೆಗೆ ಮಹಾನಗರ ಪಾಲಿಕೆಯ ಮಹಾಪೌರರಾದ ಮುಲ್ಲಂಗಿ ನಂದೀಶ್ ಮತ್ತು ಸಹಾಯಕ ಆಯುಕ್ತ ಪ್ರಮೋದ್ ಅವರು ಡಾ.ಬಾಬು ಜಗಜೀವನ್ ರಾಮ್ ಅವರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡುವುದರ ಮೂಲಕ ಮೆರವಣಿಗೆಗೆ ಚಾಲನೆ ನೀಡಿದರು.

ಮೆರವಣಿಗೆಗೆ ಮುನ್ನ ನಗರದ ನಲ್ಲಚೇರುವು ಪ್ರದೇಶದ ಡಾ.ಬಾಬು ಜಗಜೀವನ್ ರಾಮ್ ಅವರ ಪುತ್ಥಳಿಗೆ ಗಣ್ಯರು ಮಾಲಾರ್ಪಣೆ ಮಾಡಿದರು.

ಆಕರ್ಷಕ ಸ್ತಬ್ಧಚಿತ್ರ:

ಮೆರವಣಿಗೆಯಲ್ಲಿ ಸಾರಿಗೆ ಇಲಾಖೆ ವತಿಯಿಂದ ರೂಪಿಸಿದ್ದ ವಿಧಾನಸೌಧ ಸ್ತಬ್ಧಚಿತ್ರ, ಕೃಷಿ ಇಲಾಖೆ, ತೋಟಗಾರಿಕೆ ಇಲಾಖೆ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಹಾಗೂ ವಿವಿಧ ಇಲಾಖೆಗಳ ವತಿಯಿಂದ ವಿವಿಧ ಸರ್ಕಾರದ ಕಾರ್ಯಕ್ರಮಗಳು ಮತ್ತು ವಿವಿಧ ಯೋಜನೆಗಳ ಮಾಹಿತಿ ಕುರಿತ ಸ್ತಬ್ಧಚಿತ್ರಗಳು ಗಮನ ಸೆಳೆದವು.

ಮೆರವಣಿಗೆಯು ನಗರದ ಡಾ.ರಾಜ್ ಕುಮಾರ್ ರಸ್ತೆಯ ಮುನ್ಸಿಪಾಲ್ ಕಾಲೇಜು ಮೈದಾನದಿಂದ ಆರಂಭವಾಗಿ ಗಡಿಗಿ ಚೆನ್ನಪ್ಪ ವೃತ್ತ, ಬೆಂಗಳೂರು ರಸ್ತೆ, ಬ್ರೂಸ್ ಪೇಟೆ ಪೋಲಿಸ್ ಠಾಣೆ, ಹೆಚ್.ಆರ್.ಗವಿಯಪ್ಪ ವೃತ್ತದ ಮೂಲಕ ಡಾ.ಜೋಳದರಾಶಿ ದೊಡ್ಡನಗೌಡ ರಂಗಮದಿರದ ವೇದಿಕೆ ಸಭಾಂಗಣಕ್ಕೆ ತಲುಪಿ ಸಂಪನ್ನಗೊಂಡಿತು.



ಬಸವಕಲ್ಯಾಣ: – ಇಲ್ಲಿನ ಸಂಸ್ಥಾನ ಗವಿಮಠದಲ್ಲಿ ಎಪ್ರಿಲ್ 10ರಂದು ಬೆಳಿಗ್ಗೆ 10:00 ಗಂಟೆಗೆ ಜರಗುವ ರಾಜ್ಯ ಮಟ್ಟದ ಕರ್ನಾಟಕ ಚುಟುಕು ಸಾಹಿತ್ಯ ಸಮ್ಮೇಳನದ ಸರ್ವಾಧ್ಯಕ್ಷರಾದ ಶ್ರೀ ಷ.ಬ್ರ ಡಾ.ರೇವಣಸಿದ್ದ ಶಿವಾಚಾರ್ಯರು ಹಿರೇಮಠ. ಪೂಜ್ಯಶ್ರೀ ಶ್ರೀನಿವಾಸ ಸರಡಗಿ, ತಿಪುರಾಂತಿನ ಪೂಜ್ಯ ಶ್ರೀ ಷ.ಬ್ರ ಡಾ.ಅಭಿನವ ಘನಲಿಂಗ ರುದ್ರಮುನಿ ಶಿವಾಚಾರ್ಯರು ಕಾರ್ಯಕ್ರಮದ ಆಮಂತ್ರಣ ಪತ್ರಿಕೆ ನೀಡಿ ಆಮಂತ್ರಿಸಿದರು. ಈ ಸಂದರ್ಭದಲ್ಲಿ ಕನ್ನಡ ಸಾಹಿತ್ಯ ಪರಿಷತ್ತಿನ ತಾಲೂಕ ಅಧ್ಯಕ್ಷರಾದ ಶಾಂತಲಿಂಗ ಮಠಪತಿ, ಪ್ರೋ ಸೂರ್ಯಕಾಂತ ಶೀಲವಂತ. ಮಲ್ಲಿಕಾರ್ಜುನ ಅಲಗುಡೆ, ರಾಕೇಶ ಪುರವಂತ ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು. (ಮಲ್ಲಮ್ಮ ನುಡಿ ಚಿತ್ರ)

# ಲಿಂಗಸುಗೂರು : ಪಿ.ಬಿ.ಎ ಸೆಂಟ್ರಲ್ ಶಾಲೆಯಲ್ಲಿ ಜಗಜೀವನ್ ರಾಮ್ ಜನ್ಮದಿನಾಚರಣೆ




ಮಲ್ಲಮ್ಮ ನುಡಿ ವಾರ್ತೆ

ಲಿಂಗಸಗೂರ. ಎ. 5.– ಪಟ್ಟಣದಲ್ಲಿರುವ ಶ್ರೀಶೈಲ ಮಲ್ಲಿಕಾರ್ಜುನ ಶಿಕ್ಷಣ ಮತ್ತು ಗ್ರಾಮೀಣ ಅಭಿವೃದ್ಧಿ ಸಂಸ್ಥೆಯ ಪಿಬಿಎ ಸೆಂಟ್ರಲ್ ಶಾಲೆಯಲ್ಲಿ ಮಾಜಿ ಉಪ ಪ್ರಧಾನಿ ಡಾ. ಬಾಬು ಜಗಜೀವನ್ ರಾಮ್ ರವರ 118 ನೇ ಜನ್ಮದಿನಾಚರಣೆಯನ್ನು ಶ್ರೀಶೈಲ ಮಲ್ಲಿಕಾರ್ಜುನ ಶಿಕ್ಷಣ ಹಾಗೂ ಗ್ರಾಮೀಣ ಅಭಿವೃದ್ಧಿ ಸಂಸ್ಥೆಯ ಅಧ್ಯಕ್ಷರಾದ ಶ್ರೀ ಶರಣಪ್ಪ ಮೇಟಿ ಅವರು ಹಸಿರು ಕ್ರಾಂತಿಯ ಹರಿಕಾರ ಡಾ ಬಾಬು ಜಗಜೀವನ್ ರಾಮ್ ಅವರ ಭಾವಚಿತ್ರಕ್ಕೆ ಮಾಲಾರ್ಪಣೆ ಮಾಡುವ ಮೂಲಕ ಜನ್ಮದಿನವನ್ನು ಆಚರಣೆ ಮಾಡಿ ಡಾಕ್ಟರ್ ಬಾಬು ಜಗಜೀವನ್ ರಾಮ್ ರವರ 118ನೇ ಜನ್ಮದಿನಾಚರಣೆ ಶುಭ ಕೋರಿದರು. ಈ ಸಂದರ್ಭದಲ್ಲಿ ಶಿಕ್ಷಕರಾದ ವೆಂಕಟೇಶ್ ಅವರು ಹಸಿರು ಕ್ರಾಂತಿಯ ಹರಿಕಾರ ಮಾಜಿ ಉಪ ಪ್ರಧಾನಿ ಡಾಕ್ಟರ್ ಬಾಬು ಜಗಜೀವನ್ ರಾಮ್ ರವರ ಜೀವನ ಮತ್ತು ಸಾಧನೆಯ ಕುರಿತು ವಿಸ್ತಾರವಾಗಿ ಮಾತನಾಡಿದರು. ಈ ಸಂದರ್ಭದಲ್ಲಿ ಪ್ರಾಂಶುಪಾಲರಾದ ಜೇಮ್ಸ್, ಸೇರಿದಂತೆ ಶಾಲಾ ವಿದ್ಯಾರ್ಥಿಗಳು ಪಾಲ್ಗೊಂಡಿದ್ದರು. ಶಿಕ್ಷಕ ಗಂಗಾಧರ ಕಾರ್ಯಕ್ರಮ ನಿರೂಪಣೆ ಮಾಡಿದರು.

# ಯುಕ್ತಧಾರ ತಂತ್ರಾಂಶದ ತರಬೇತಿ ಪ್ರಾಯೋಗಿಕ ಕಾರ್ಯಾಗಾರ

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಏಪ್ರಿಲ್ 05–ಕೇಂದ್ರಗ್ರಾಮೀಣಾಭಿವೃದ್ಧಿ ಮಂತ್ರಾಲಯದವರನಿರ್ದೇಶನದಂತೆ ಮಹಾತ್ಮ ಗಾಂಧಿ ನರೇಗಾ ಯೋಜನೆಯಡಿ ಸಮಗ್ರ ನೈಸರ್ಗಿಕ ಸಂಪನ್ಮೂಲ (ಎನ್ ಆರ್ ಎಮ್) ನಿರ್ವಹಣೆ ಕಾಮಗಾರಿಗಳಿಗೆ ಜಿಐಎಸ್ ಆಧಾರಿತ ಯೋಜನೆಗಳನ್ನು ವೈಜ್ಞಾನಿಕವಾಗಿ ಯುಕ್ತಧಾರ ತಂತ್ರಾಂಶದಲ್ಲಿ ತಯಾರಿಸಲು ಹಾಗೂ 2025–26ನೇ ಸಾಲಿನಲ್ಲಿ ಯುಕ್ತಧಾರ ತಂತ್ರಾಂಶದ ಮೂಲಕ ಯೋಜನೆಯನ್ನು ಸಿದ್ಧಪಡಿಸಲು ಪ್ರಾಯೋಗಿಕವಾಗಿ ತರಬೇತಿ ಕಾರ್ಯಾಗಾರವನ್ನು ನಗರದ ಜಿಲ್ಲಾ ಪಂಚಾಯತಿಯ ಜಲನಿರ್ಮಲ ಸಭಾಂಗಣದಲ್ಲಿ ಆಯೋಜಿಸಲಾಗಿತ್ತು.

ಜಿಲ್ಲಾ ಪಂಚಾಯತ್ ಯೋಜನಾ ನಿರ್ದೇಶಕರಾದ ಶರಣಬಸವರಾಜ ಕೆಸರಟ್ಟಿ ಅವರು ಮಾತನಾಡಿ, ನರೇಗಾ ಯೋಜನೆಯಡಿ ಜಲನಯನ ಮಾದರಿಯಲ್ಲಿ ವೈಜ್ಞಾನಿಕವಾಗಿ ಯೋಜನೆಯನ್ನು ಸಿದ್ಧಪಡಿಸಲು ಜಿಲ್ಲೆಯ ದೇವದುರ್ಗ ತಾಲ್ಲೂಕಿನ ಚಿಂಚೋಡಿ, ಲಿಂಗಸೂಗೂರು ತಾಲ್ಲೂಕಿನ ಅನ್ವರಿ, ಮಾನವಿ ತಾಲ್ಲೂಕಿನ ಕಪಗಲ್, ಮಸ್ಕಿ ತಾಲ್ಲೂಕಿನ ಅಡವಿಬಾವಿ ಮಸ್ಕಿ, ರಾಯಚೂರು ತಾಲ್ಲೂಕಿನ ಬಿಚ್ಚಾಲಿ, ಸಿಂಧನೂರು ತಾಲ್ಲೂಕಿನ ಉಮಲೂಟಿ ಹಾಗೂ ಸಿರವಾರ ತಾಲ್ಲೂಕಿನ ಚಿಂಚರಕಿ ಗ್ರಾ.ಮ ಪಂಚಾಯತಿಗಳನ್ನು ಆಯ್ಕೆ ಮಾಡಲಾಗಿದೆ. ಈ ಗ್ರಾ.ಪಂಗಳಲ್ಲಿ ಸಮಗ್ರ ನೈಸರ್ಗಿಕ ಸಂಪನ್ಮೂಲ (ಎನ್.ಆರ್.ಎಮ್) ನಿರ್ವಹಣೆ ಕಾಮಗಾರಿಗಳಿಗೆ ಜಿ.ಐ.ಎಸ್ ಆಧಾರಿತ ಯೋಜನೆಗಳನ್ನು ವೈಜ್ಞಾನಿಕವಾಗಿ ಯುಕ್ತಧಾರ ತಂತ್ರಾಂಶದಲ್ಲಿ ತಯಾರಿಸಲು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚಿಸಿದರು.

# ಮಕ್ಕಳನ್ನು ಸರಕಾರಿ ಶಾಲೆಗಳಲ್ಲೇ ಓದಿಸಿ–ನಾಗರಾಜ




ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಏ.5–ಮಕ್ಕಳನ್ನು ಸರಕಾರಿಶಾಲೆಗಳಿಗೆಸೇರಿಸುವಮೂಲಕ ಸರಕಾರ ನೀಡುವ ಸೌಲಭ್ಯಗಳನ್ನು ಸದುಪಯೋಗಪಡಿಸಿಕೊಳ್ಳುವಂತೆ ಮುಖ್ಯಗುರು ನಾಗರಾಜ ಕಮ್ಮಾರ ಹೇಳಿದ್ದಾರೆ. ತಾಲೂಕಿನ ಮನ್ನಿಕಟ್ಟಿ ಗ್ರಾಮದ ಸರಕಾರಿ ಹಿರಿಯ ಪ್ರಾಥಮಿಕ ಶಾಲೆಯ ವಾರ್ಷಿಕೋತ್ಸವ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಎಲ್ಲ ದಾನಗಳಲ್ಲಿವಿದ್ಯಾದಾನಶ್ರೇಷ್ಠವಾಗಿದ್ದು, ಮಕ್ಕಳಿಗೆ ತಮ್ಮಲ್ಲಿರುವ ಜ್ಞಾನವನ್ನು ನೀಡಿ ಅವರ ಭವಿಷ್ಯ ರೂಪಿಸಿ, ಉತ್ತಮ ಪ್ರಜೆಗಳನ್ನಾಗಿ ಬೆಳೆಸುವ ಹೊಣೆಗಾರಿಕೆ ಶಿಕ್ಷಕರ ಮೇಲಿದೆ ಎಂದರು.

ಶಿಕ್ಷಕ ಬಸವರಾಜ ಅನಗವಾಡಿ ಮಾತನಾಡಿ, ಮಕ್ಕಳಲ್ಲಿ ಹುದುಗಿರುವ ಪ್ರತಿಭೆಯನ್ನುಗುರುತಿಸಿಪ್ರೋತ್ಸಾಹಿಸುವ ಕೆಲಸವನ್ನು ಶಿಕ್ಷಕ ಸಮೂಹ ಮಾಡಬೇಕಿದೆ ಎಂದು ಹೇಳಿದರೆ, ಇನ್ನೋರ್ವ ಶಿಕ್ಷಕಿ ಮಾಲಾಶ್ರೀ ಗಡ್ಡಿ ಮಾತನಾಡಿ, ಪಾಲಕರು ತಮ್ಮ ಮಕ್ಕಳನ್ನು ಸರಕಾರಿ ಶಾಲೆಗಳಲ್ಲಿ ಓದಿಸಬೇಕು. ಸರಕಾರ ನೀಡುವ ಸೌಲಭ್ಯಗಳನ್ನು ಬಳಸಿಕೊಳ್ಳಬೇಕು ಎಂದು ಹೇಳಿದರು.

ಗ್ರಾಪಂ ಅಧ್ಯಕ್ಷೆ ಪಾರ್ವತೆವ್ವ ಮಾದರ ಅಧ್ಯಕ್ಷತೆ ವಹಿಸಿದ್ದರು. ಶಿವಕುಮಾರ ನಂದಿಕೋಲಮಠ, ಶ್ರೀಧರ ದಾಸ, ಈರಣ್ಣ ಪತ್ತಾರ, ಗ್ರಾಪಂ ಸದಸ್ಯರಾದ ಹನಮಂತ ಪಲ್ಲೇದ, ಮುತ್ತಪ್ಪ ಹುಣಸೀಕಟ್ಟಿ ಹಾಗೂ ಮಲ್ಲಮ್ಮ ಜುಮನಾಳ, ಪ್ರಕಾಶ ಕೊಣ್ಣೂರ, ಉಮೇಶ ಜುಮನಾಳ, ಪರಸಪ್ಪ ಹುಣಸಿಕಟ್ಟಿ, ಶಿಕ್ಷಕರಾದ ವಿನೋದ ಎಡಹಳ್ಳಿ, ಶಿವಪ್ಪ ದೇವಸಂಗಿ, ಎಂ.ಡಿ.ಭಗವತಿ, ಎಸ್.ವಿ.ಅರೇಸೀಮೆ, ಎಸ್.ಎ.ಪತ್ತಾರ ಇದ್ದರು.

ಸಮಾರಂಭದ ನಂತರ ಶಾಲಾ ಮಕ್ಕಳಿಂದ ಸಾಂಸ್ಕೃತಿಕ ಕಾರ್ಯಕ್ರಮಗಳು ಜರುಗಿದವು.

# ಮನ್ನಿಕಟ್ಟಿಯಲ್ಲಿ ಇಂದು ಪಲ್ಲಕ್ಕಿ ಉತ್ಸವ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಏ.5–ತಾಲೂಕಿನ ಮನ್ನಿಕಟ್ಟಿ ಗ್ರಾಮದಲ್ಲಿ ನಾಳೆ ಏ.6 ರಂದು ಮಾರುತೇಶ್ವರ ಜಾತ್ರೆಯ ಅಂಗವಾಗಿ ಪಲ್ಲಕ್ಕಿ ಉತ್ಸವ ಜರುಗಲಿದೆ. ರವಿವಾರ ಬೆಳಿಗ್ಗೆ ಪಲ್ಲಕ್ಕಿ ಉತ್ಸವ ಗ್ರಾಮದ ಪ್ರಮುಖ ಬೀದಿಗಳಲ್ಲಿ ನಡೆಯಲಿದ್ದು, ಮುಂಜಾನೆ 9 ಗಂಟೆಗೆ 4 ಕಿ.ಮೀ ದೂರ ಕ್ರಮಿಸುವ ಕೂಡುಬಂಡಿ ರೇಸ್ ಜರುಗಲಿದೆ. ವಿಜೇತರಿಗೆ ಪ್ರಥಮ ಬಹುಮಾನ 15 ಸಾವಿರ, ದ್ವಿತಿಯ 10, ತೃತೀಯ 7 ಹಾಗೂ ಚತುರ್ಥ ಬಹುಮಾನ 5 ಸಾವಿರ ರೂ.ಗಳು ದೊರೆಯಲಿವೆ.

ಸಾಯಂಕಾಲ 4 ಗಂಟೆಗೆ ಜಂಗೀ ಕುಸ್ತಿಗಳು, ರಾತ್ರಿ 9–30 ಗಂಟೆಗೆ ಅರಳದಿನ್ನಿಯ ಸುಪರ್ ಸ್ಟಾರ್ ಮೆಲೋಡಿಸ್ ತಂಡದಿಂದ ರಸಮಂಜರಿ ಕಾರ್ಯಕ್ರಮ ಜರುಗಲಿದೆ.

ಪೂಜ್ಯ ಹನಮಪ್ಪಜ್ಜ ದೊಡ್ಡಪೂಜಾರಿ ಸಾನಿಧ್ಯವಹಿಸಲಿದ್ದು, ಕಾರ್ಯಕ್ರಮವನ್ನು ರಾಜು ನಾಯ್ಕರ ಉದ್ಘಾಟಿಸುವರು. ಮುಖ್ಯ ಅತಿಥಿಗಳಾಗಿ ಗ್ರಾಪಂ ಅಧ್ಯಕ್ಷೆ ಪಾರ್ವತೆವ್ವ ಮಾದರ, ಸದಸ್ಯರು, ಪಿಕೆಪಿಎಸ್ ಸದಸ್ಯರು, ಗಣ್ಯರು ಪಾಲ್ಗೊಳ್ಳಲಿದ್ದಾರೆ ಎಂದು

# ಬಾಗಲಕೋಟೆ–ಬೆಲೆ ಏರಿಕೆ ಖಂಡಿಸಿ ಬಿಜೆಪಿ ಪ್ರತಿಭಟನೆ




ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಏ.5–ಬೆಲೆ ಏರಿಕೆ ಖಂಡಿಸಿ ನಗರದಲ್ಲಿ ಶನಿವಾರ ಭಾರತೀಯ ಜನತಾ ಪಕ್ಷದ ಕಾರ್ಯಕರ್ತರು ಪ್ರತಿಭಟನೆ ನಡೆಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಮಾಜಿ ಶಾಸಕ ವೀರಣ್ಣ ಚರಂತಿಮಠ, ಕಾಂಗ್ರೆಸ್ ಸರಕಾರ ಎಲ್ಲ ವಸ್ತುಗಳ ಬೆಲೆಗಳನ್ನು ಏರಿಸಿ ಜನರ ಹೊಟ್ಟೆಗೆ ಹೊಡೆಯುತ್ತಿದೆ. ಜೊತೆಗೆ ಬಿಜೆಪಿ ಕಾರ್ಯಕರ್ತರಿಗೆ ಪೋಲಿಸರಿಂದ ಅನಗತ್ಯ ಕಿರುಕುಳ ಉಂಟಾಗುತ್ತಿದೆ. ಇದು ಸರಕಾರದ ದರ್ಪದ ನೀತಿಯಾಗಿದೆ ಎಂದು ಹೇಳಿದರು.

ಸರಕಾರದ ಕುಮ್ಮಕ್ಕಿನಂತೆ ಪೋಲಿಸರು ನಡೆದುಕೊಳ್ಳುತ್ತಿದ್ದು, ಬಿಜೆಪಿ ಕಾರ್ಯಕರ್ತರು ಆತ್ಮಹತ್ಯೆ ಮಾಡಿಕೊಳ್ಳುವಷ್ಟರ ಮಟ್ಟಿಗೆ ಬೆದರಿಕೆ ಹಾಗೂ ಒತ್ತಡ ಹೇರುತ್ತಿರುವುದು ಖಂಡನೀಯ. ಸರಕಾರದ ಈ ವರ್ತನೆ ನಿಲ್ಲಬೇಕು ಎಂದ ಚರಂತಿಮಠ, ಮಡಿಕೇರಿಯ ಬಿಜೆಪಿ ಕಾರ್ಯಕರ್ತ ವಿನಯ ಸೋಮಯ್ಯ ಅವರ ಆತ್ಮಹತ್ಯೆ ವಿಚಾರವನ್ನು ರಾಜ್ಯ ಗ್ರಹ ಸಚಿವರು ಗಂಭಿರವಾಗಿ ಪರಿಗಣಿಸಿ ತಪ್ಪಿತಸ್ತರ ವಿರುದ್ಧ ಕಠಿಣ ಕಾನೂನು ಕ್ರಮಗೊಳ್ಳಬೇಕು ಎಂದರು.

ಪ್ರತಿಭಟನೆಯಲ್ಲಿ ಬಿಜೆಪಿ ಮುಖಂಡರಾದ ಜಿ.ಎನ್.ಪಾಟೀಲ, ಡಾ.ಎಂ.ಎಸ್.ದಡ್ಡೇನವರ, ನಗರಸಭೆ ಅಧ್ಯಕ್ಷೆ ಸವಿತಾ ಲೆಂಕೆನ್ನವರ, ಉಪಾಧ್ಯಕ್ಷೆ ಶೋಭಾ ರಾವ್, ಸದಸ್ಯೆ ಸರಸ್ವತಿ ಕುರಬರ, ನಗರಮಂಡಲ ಅಧ್ಯಕ್ಷ ಬಸವರಾಜ ಹುನಗುಂದ, ಶಿವಾನಂದ ಟವಳಿ, ಮುತ್ತಣ್ಣ ಬೇಣ್ಣೂರ, ಸತ್ಯನಾರಾಯಣ ಹೇಮಾದ್ರಿ, ನಾಗರಾಜ ನಾರಾಯಣಕರ, ಯಲ್ಲಪ್ಪ ನಾರಾಯಣಿ, ಉಮೇಶ ಹಂಚಿನಾಳ, ಶ್ರೀಧರ ನಾಗರಬೆಟ್ಟ ಸೇರಿದಂತೆ ಅನೇಕರು ಭಾಗವಹಿಸಿದ್ದರು.

ಶಿವಾನಂದ ಜೀನನಿಂದ ಕಾರ್ಯಕರ್ತರು ಪಾದಯಾತ್ರೆ ಮೂಲಕ ಬಸವೇಶ್ವರ ವೃತ್ತದ ಬಳಿ ಆಗಮಿಸಿ ಪ್ರತಿಭಟನೆ ನಡೆಸಿದರು.

# ಡಾ.ಜಗಜೀವನರಾಂ ಹಸಿರು ಕ್ರಾಂತಿಯ ಹರಿಕಾರ: ಚರಂತಿಮಠ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಏ.5–ಹಸಿರು ಕ್ರಾಂತಿಯ ಹರಿಕಾರ ಡಾ.ಬಾಬು ಜಗಜೀವನರಾಂ ಅಧಿಕಾರ ಮತ್ತು ಐಶ್ವರ್ಯಗಳಿಂದ ಗಳಿಸಲಾಗದ ಕೀರ್ತಿಯನ್ನು ಸೇವೆ, ತ್ಯಾಗದಿಂದ ಗಳಿಸಬಹುದೆಂಬ ಸಂದೇಶ ಸಾರಿದ ಮಹಾನ್ ನಾಯಕ ಎಂದು ಮಾಜಿ ಶಾಸಕ ವೀರಣ್ಣ ಚರಂತಿಮಠ ಹೇಳಿದರು.

ನಗರದ ಶಿವಾನಂದ ಜೀನನಲ್ಲಿರುವ ಬಿಜೆಪಿ ಕಾರ್ಯಾಲಯದಲ್ಲಿ ಭಾರತೀಯ ಜನತಾ ಪಾರ್ಟಿ ಬಾಗಲಕೋಟೆ ವಿಧಾನಸಭಾ ಮತಕ್ಷೇತ್ರದಿಂದ ಶನಿವಾರ ಹಮ್ಮಿಕೊಂಡ ಡಾ.ಬಾಬು ಜಗಜೀವನರಾಂ ಜನ್ಮ ದಿನಾಚರಣೆ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಸಮಾಜ ಸುಧಾರಣೆ ಹಾಗೂ ಎಲ್ಲರೂ ಸಮಾನವಾಗಿ ಬದುಕಬೇಕು ಎಂಬ ಮಹದಾಸೆಯನ್ನು ಹೊಂದಿದ್ದ ಬಾಬು ಜಗಜೀವನರಾಂ, ದೇಶದ ಜನರು ಅಹಾರ ಕೊರತೆ ಅನುಭವಿಸುತ್ತಿರುವುದನ್ನು ಕಂಡು ಹಸಿರು ಕ್ರಾಂತಿ ಪ್ರಾರಂಭಿಸಿದವರು. ಇಂತಹ ಮಹಾನ್ ನಾಯಕನ ತತ್ವಾದರ್ಶಗಳನ್ನು ಯುವ ಜನತೆ ಜೀವನದಲ್ಲಿ ಅಳವಡಿಸಿಕೊಳ್ಳಬೇಕು ಎಂದರು.

ಮುತ್ತಣ್ಣ ಬೆಣ್ಣೂರ ಪ್ರಾಸ್ತಾವಿಕವಾಗಿ ಮಾತನಾಡಿ ಡಾ.ಬಾಬು ಜಗಜೀವನರಾಂ ಅವರ ಜೀವನ, ಸಮಾಜಸೇವೆ ಕುರಿತು ತಿಳಿಸಿದರು.

ಮುಖಂಡರಾದ ಡಾ.ಎಂ.ಎಸ್. ದಡ್ಡೆನ್ನವರ, ಜಿ.ಎನ್.ಪಾಟೀಲ, ನಗರಸಭೆ ಅಧ್ಯಕ್ಷೆ ಸವಿತಾ ಲೆಂಕೆನ್ನವರ, ಉಪಾಧ್ಯಕ್ಷೆ ಶೋಭಾ ರಾವ್, ಸದಸ್ಯೆ ಸರಸ್ವತಿ ಕುರಬರ, ಶಿವಾನಂದ ಟವಳಿ, ಯಲ್ಲಪ್ಪ ನಾರಾಯಣಿ, ಸತ್ಯನಾರಾಯಣ ಹೇಮಾದ್ರಿ, ಬಸವರಾಜ ಹುನಗುಂದ, ಉಮೇಶ

# ಐತಿಹಾಸಿಕ ತಾಣಗಳ ಅಭಿವೃದ್ಧಿಗೆ ಒತ್ತು ನೀಡಿ–ಗದ್ದಿಗೌಡರ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಏ.5–ವಿಶಿಷ್ಟ ವಾಸ್ತುಶಿಲ್ಪಕಲೆಯ ಮೂಲಕ ಜಗತ್ತಿನ ಗಮನಸೆಳೆದಿರುವ ಬಾಗಲಕೋಟೆ ಜಿಲ್ಲೆಯ ಬಾದಾಮಿ, ಪಟ್ಟದಕಲ್ಲು ಹಾಗೂ ಐಹೊಳೆಯಲ್ಲಿನ ಐತಿಹಾಸಿಕ ತಾಣಗಳ ಸಂರಕ್ಷಣೆ ಮತ್ತು ಅಭಿವೃದ್ಧಿಗೆ ಒತ್ತು ನೀಡಬೇಕೆಂದು ಸಂಸದ ಪಿ.ಸಿ.ಗದ್ದಿಗೌಡರ ಕೇಂದ್ರ ಸರಕಾರಕ್ಕೆ ಮನವಿ ಮಾಡಿದ್ದಾರೆ.

ಸಂಸತ್ತಿನ ಅಧಿವೇಶನದಲ್ಲಿ ಈ ಕುರಿತು ಸರಕಾರದ ಗಮನ ಸೆಳೆದಿರುವ ಗದ್ದಿಗೌಡರ, ಚಾಲುಕ್ಯರ ಆಳ್ವಿಕೆಯಲ್ಲಿ ನಾಲ್ಕನೇ ಶತಮಾನದಲ್ಲೇ ಐಹೊಳೆಯಲ್ಲಿ ದೇವಸ್ಥಾನಗಳ ಸಮುಚ್ಛಯವಿತ್ತು. ಹಿಂದೂ ದೇವಾಲಯಗಳ ರಚನೆಗೆ ಅದೊಂದು ಪ್ರಯೋಗಾಲಯವಾಗಿತ್ತು ಎಂದು ಬಣ್ಣಿಸಲಾಗುತ್ತದೆ. ಒಂದೇ ಆವರಣದಲ್ಲಿ 130ಕ್ಕೂ ಅಧಿಕ ದೇವಸ್ಥಾನಗಳು ಅಲ್ಲಿದ್ದು, ದೇವಸ್ಥಾನಗಳ ನಿರ್ಮಾಣದ ಪ್ರಯೋಗ ಶಾಲೆ ಅದು ಎಂದು ಇತಿಹಾಸದಲ್ಲಿ ಉಲ್ಲೇಖಿಸಲಾಗಿದೆ ಎಂದು ವಿವರಿಸಿದರು.

ಬಾದಾಮಿಯ ಮೇಣಬಸದಿಯನ್ನು 6ನೇ ಶತಮಾನದಲ್ಲಿ ನಿರ್ಮಿಸಲಾಗಿದೆ. ಏಕಶಿಲೆಯಲ್ಲಿ 12 ವರ್ಷಗಳ ಸುದೀರ್ಘ ಕೆತ್ತನೆಯ ನಂತರ ಅದು ರೂಪಗೊಂಡಿದೆ. ಪಟ್ಟದಕಲ್ಲು ಶಿಲ್ಪಕಲೆಯ ತೊಟ್ಟಿಲಾಗಿದ್ದು, 1987ರಲ್ಲಿ ಯುನೆಸ್ಕೋ ಪಟ್ಟಿಯಲ್ಲಿ ಸ್ಥಾನಮಾನ ಪಡೆದಿದೆ. ಬಾದಾಮಿ ದೇವಸ್ಥಾನ ಸಮುಚ್ಛಯ, ಏಕಶಿಲಾ ಕೆತ್ತನೆಗಳು ಸಹ ಯುನೆಸ್ಕೋ ಪಟ್ಟಿಯಲ್ಲಿ ಸ್ಥಾನಪಡೆಯುವ ಅರ್ಹತೆಯನ್ನು ಹೊಂದಿದ್ದು, ಕೇಂದ್ರ ಸರ್ಕಾರ ಈ ಬಗ್ಗೆ ಸೂಕ್ತ ನಿರ್ಧಾರ ಕೈಗೊಳ್ಳಬೇಕೆಂದು ಅವರು ಒತ್ತಾಯಿಸಿದ್ದಾರೆ.

# ಬಾಗಲಕೋಟೆ ನಗರಸಭೆ ಸಾಮಾನ್ಯ ಸಭೆ ಬಿಜೆಪಿ, ಕಾಂಗ್ರೆಸ್ ಸದಸ್ಯರ ಮಧ್ಯೆ ವಾಕ್ಸಮರ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಏ.5–ನಗರದ ನಗರಸಭೆಯ ಸಾಮಾನ್ಯ ಸಭೆಯಲ್ಲಿ ಶನಿವಾರ ಶಾಸಕರ ಆಪ್ತ ಮುಖಂಡ ಹೊಳಬಸು ಶೆಟ್ಟರ ವಿಚಾರ ಪ್ರಸ್ತಾಪಗೊಂಡು ಬಿಜೆಪಿ–ಕಾಂಗ್ರೆಸ್ ಸದಸ್ಯರ ನಡುವೆ ವಾಕ್ಸಮರಕ್ಕೆ ಕಾರಣವಾಯಿತು.

ಶಾಸಕ ಎಚ್.ವಾಯ್.ಮೇಟಿ ಅವರ ಆಪ್ತ ಹೊಳಬಸು ಶೆಟ್ಟರ, ನಗರಸಭೆಯ ಪ್ರತಿ ವಿಷಯದಲ್ಲೂ ಹಸ್ತಕ್ಷೇಪಮಾಡುತ್ತಿದ್ದಾರೆ. ಕಾಮಗಾರಿಗಳ ವಿಷಯದಲ್ಲೂ ಕೈಹಾಕುತ್ತಿದ್ದಾರೆ ಎಂದು ಬಿಜೆಪಿ ಸದಸ್ಯೆ ಸ್ಮೀತಾ ಪವಾರ ಹೇಳುತ್ತಿದ್ದಂತೆ, ಕಾಂಗ್ರೆಸ್ ಸದಸ್ಯರು ಇದಕ್ಕೆ ವಿರೋಧ ವ್ಯಕ್ತಪಡಿಸಿದರು. ಈ ಹಂತದಲ್ಲಿ ಎರಡೂ ಪಕ್ಷಗಳ ಸದಸ್ಯರ ಮಧ್ಯೆ ಮಾತಿಗೆ ಮಾತು ಬೆಳೆದು ಗೊಂದಲ ಸೃಷ್ಠಿಯಾಯಿತು. ಅಧಿಕಾರಿಗಳು ಯಾವುದೇ ಕೆಲಸವನ್ನು ಸರಿಯಾಗಿ ಮಾಡುತ್ತಿಲ್ಲ. ಸದಸ್ಯರ ಮಾತಿಗೆ ಬೆಲೆ ಕೊಡುತ್ತಿಲ್ಲ ಎಂದು ದೂರಿದ ಬಿಜೆಪಿ ಸದಸ್ಯರು, ಹೊಳಬಸು ಶೆಟ್ಟರ ಹೇಳಿದ ಮಾತು ಇಲ್ಲಿ ನಡೆಯುತ್ತಿದೆ ಎಂದು ಆರೋಪಿಸಿದರು.

ಕಾಮಗಾರಿಯೊಂದರ ಬಗ್ಗೆ ಅಧಿಕಾರಿಗಳನ್ನು ಕೇಳಿದರೆ ಹೊಳಬಸು ಶೆಟ್ಟರ ಹೆಸರು ಹೇಳುತ್ತಾರೆ. ಇದನ್ನು ಸಹಿಸಲು ಆಗುವುದಿಲ್ಲ ಎಂದು ಸದಸ್ಯೆ ಪವಾರ ಹೇಳಿದರು. ಬಿಜೆಪಿಯ ಸಾಗರ ಬಂಡಿ ಹಾಗೂ ಬಸವರಾಜ ಅವರಾದಿ ಇದಕ್ಕೆ ಧ್ವನಿಗೂಡಿಸಿ ಅಧಿಕಾರಿಗಳ ವಿರುದ್ಧ ಹರಿಹಾಯ್ದರು. ನವನಗರದ ಯುನಿಟ್–2 ನಗರಸಭೆಗೆ ಹಸ್ತಾಂತರವಾಗದೇ ಇರುವಾಗ ಅಲ್ಲಿರುವ ಖಾಸಗಿ ಶಾಲೆಯೊಂದರ ಸ್ವಚ್ಛತೆಗೆ ನಗರಸಭೆ ಸಿಬ್ಬಂದಿಯನ್ನು ಕಳುಹಿಸಿದ್ದು ಯಾಕೆ ಎಂದು ಅಧಿಕಾರಿಗಳನ್ನು ಪ್ರಶ್ನಿಸಿದ ಸಾಗರ ಬಂಡಿ, ಹೊಳಬಸು ಶೆಟ್ಟರಗೆ ಸಂಬಂಧಿಸಿದ ಶಿಕ್ಷಣ ಸಂಸ್ಥೆಯ ಸ್ವಚ್ಛತೆ ಸಿಬ್ಬಂದಿ ಕಳುಹಿಸಿದ್ದು ಅಕ್ಷಮ್ಯ ಅಪರಾಧ ಎಂದು ಗುಡುಗಿದರು.

ನಗರಸಭೆ ವಿಷಯದಲ್ಲಿ ಖಾಸಗಿ ವ್ಯಕ್ತಿಗಳಿಗೆ ಮಣೆ ಹಾಕಿದರೆ ನಗರಸಭೆಗೆ ಕೀಲಿ ಜಡಿದು ಉಗ್ರ ಪ್ರತಿಭಟನೆ ನಡೆಸಬೇಕಾದೀತು ಎಂದು ಅಧಿಕಾರಿಗಳನ್ನು ಎಚ್ಚರಿಸಿದರು.

ಈ ಹಂತದಲ್ಲಿ ಸಭೆಯಲ್ಲಿ ಉಪಸ್ಥಿತರಿದ್ದ ವಿಧಾನ ಪರಿಷತ್ ಸದಸ್ಯ ಪಿ.ಎಚ್.ಪೂಜಾರ, ಅಧಿಕಾರಿಗಳ ಈ ಕ್ರಮಕ್ಕೆ ಆಕ್ರೋಶ ವ್ಯಕ್ತಪಡಿಸಿ, ನಗರಸಭೆ ಅಧಿಕಾರಿಗಳು ಎಚ್ಚರದಿಂದ ಕೆಲಸ ಮಾಡಬೇಕು. ಖಾಸಗಿ ವ್ಯಕ್ತಿಗಳ ಮಾತಿಗೆ ಮನ್ನಣೆ ಕೊಡಬಾರದು. ಸದಸ್ಯರ ಗೌರವಕ್ಕೆ ಧಕ್ಕೆ ತರುವ ಕೆಲಸ ಮಾಡಬಾರದು ಎಂದು ಹೇಳಿ, ಖಾಸಗಿ ಸಂಸ್ಥೆಯೊಂದರ ಸ್ವಚ್ಛತೆಗೆ ನಗರಸಭೆ ಸಿಬ್ಬಂದಿ ಬಳಕೆ ಮಾಡಿದ ಅಧಿಕಾರಿಗೆ ನೋಟಿಸ ಕೊಡಿ. ಇಲ್ಲವೇ ಅಧಿಕಾರಿ ಕ್ಷಮೆ ಕೇಳಲಿ ಎಂದು ಹೇಳಿದರು.

## ಕಾಂಗ್ರೆಸ್ ಸದಸ್ಯರ ತಿರುಗೇಟು

ಬಿಜೆಪಿ ಸದಸ್ಯರು ಹೊಳಬಸು ಶೆಟ್ಟರ ಹೆಸರು ಪ್ರಸ್ತಾಪಿಸಿದ್ದಕ್ಕೆ ತೀವ್ರ ವಿರೋಧ ವ್ಯಕ್ತಪಡಿಸಿ ತಿರುಗೇಟು ನೀಡಿದರು.

ಕಾಂಗ್ರೆಸ್ ಸದಸ್ಯರಾದ ಚನ್ನವೀರ ಅಂಗಡಿ, ಹಾಜಿಸಾಬ ದಂಡಿನ ಮಾತನಾಡಿ, ಹೊಳಬಸು ಶೆಟ್ಟರ ಶಾಸಕರ ಆಪ್ತ ಕಾರ್ಯದರ್ಶಿಯಿದ್ದು ಶಾಸಕರು ಹೇಳಿದ ಕೆಲಸಗಳನ್ನು ಅಧಿಕಾರಿಗಳಿಗೆ ಹೇಳಿ ಮಾಡಿಸುತ್ತಾರೆ. ಇದರಲ್ಲಿ ತಪ್ಪೇನಿದೆ ಎಂದು ಪ್ರಶ್ನಿಸಿದರು.

# ಕ್ರೀಡೆಗಳಲ್ಲಿ ಪಾಲ್ಗೊಂಡು ಆರೋಗ್ಯ ವೃದ್ಧಿಸಿಕೊಳ್ಳಿ : ಡಿಸಿ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಏ.5–ಯಾರಿಗೆ ಪ್ರಥಮ ಬಹುಮಾನ ಬಂದರೂ ನಾನೇ ಪ್ರಥಮ ಬಂದ ರೀತಿ ತಿಳಿದುಕೊಳ್ಳುವ ಕ್ರೀಡಾ ಮನೋಭಾವ ಹೊಂದಿ ಕ್ರೀಡಾಕೂಟದಲ್ಲಿ ಭಾಗವಹಿಸುವುದರಿಂದ, ನಮ್ಮ ದೈಹಿಕ ಮತ್ತು ಮಾನಸಿಕ ಆರೋಗ್ಯದ ಜೊತೆಗೆ ನಮ್ಮ ಮಕ್ಕಳಿಗೂ ಸಹ ಕ್ರೀಡಾ ಆಸಕ್ತಿ ಬೆಳೆಯಲು ಸಹಾಯಮಾಡುತ್ತದೆ ಎಂದು ಜಿಲ್ಲಾಧಿಕಾರಿ ಕೆ.ಎಂ. ಜಾನಕಿ ಹೇಳಿದರು.

ನವನಗರದ ಜಿಲ್ಲಾ ಕ್ರೀಡಾಂಗಣದಲ್ಲಿ ಶನಿವಾರ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ಕರ್ನಾಟಕ ರಾಜ್ಯ ಸರ್ಕಾರಿ ನೌಕರ ಸಂಘ ಜಿಲ್ಲಾ ಶಾಖೆ ಬಾಗಲಕೋಟೆಯ ಇವರ ಸಂಯುಕ್ತ ಆಶ್ರಯದಲ್ಲಿ ನಡೆದ ಸರಕಾರಿ ನೌಕರರ ಜಿಲ್ಲಾಮಟ್ಟದ ಕ್ರೀಡಾಕೂಟ ಮತ್ತು ಸಾಂಸ್ಕೃತಿಕ ಸ್ಪರ್ಧೆಗಳನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಪ್ರತಿದಿನವೂ ಕಚೇರಿಯಲ್ಲಿ ಕಾರ್ಯ ನಿರ್ವಹಿಸುವ ನೌಕರರಿಗೆ ಈ ರೀತಿಯ ವೇದಿಕೆಗಳು ಸಿಕ್ಕಾಗ ಇದರ ಸದುಪಯೋಗ ಪಡೆದುಕೊಂಡು ಸಂತೋಷದಿಂದ ಮತ್ತು ಮನರಂಜನಾತ್ಮಕವಾಗಿ ಭಾಗವಹಿಸಿ, ಕ್ರೀಡೆಯಲ್ಲಿ ಬಹುಮಾನಗಳಿಗಾಗಿ ಅಲ್ಲ, ಬದಲಾಗಿ ಕ್ರೀಡಾ ಸ್ಪೂರ್ತಿಯಿಂದ ಭಾಗವಹಿಸಿದರೆ ನಮ್ಮ ಮಾನಸಿಕ ಮತ್ತು ದೈಹಿಕ ಆರೋಗ್ಯವು ಉತ್ತಮವಾಗಿರುತ್ತದೆ ಎಂದು ಜಾನಕಿ ಹೇಳಿದರು.

ಅಧ್ಯಕ್ಷತೆ ವಹಿಸಿ ಮಾತನಾಡಿದ ರಾಜ್ಯ ಸರ್ಕಾರಿ ನೌಕರರ ಸಂಘದ ಜಿಲ್ಲಾಧ್ಯಕ್ಷ ಎಂ.ಬಿ.ಬಳ್ಳಾರಿ, ಈ ಬಾರಿಯ ಕ್ರೀಡಾಕೂಟದಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಕ್ರೀಡಾಪಟುಗಳು ಭಾಗವಹಿಸಿದ್ದಾರೆ. ಸರ್ಕಾರದ ಯೋಜನೆಗಳನ್ನು ಸಾರ್ವಜನಿಕರಿಗೆ ತಲುಪಿಸುವ ಜವಾಬ್ದಾರಿ ಸರ್ಕಾರಿ ನೌಕರರ ಮೇಲಿದೆ. ಈ ಕಾರ್ಯದಲ್ಲಿ ಸಕಾರಾತ್ಮಕವಾಗಿ ತೊಡಗಿಸಿಕೊಳ್ಳಲು ದೈಹಿಕ ಹಾಗೂ ಮಾನಸಿಕ ಆರೋಗ್ಯ ಮುಖ್ಯವಾಗಿದೆ. ಆದ್ದರಿಂದ ಈ ರೀತಿಯ ಕ್ರೀಡಾಕೂಟಗಳಲ್ಲಿ ಭಾಗವಹಿಸುವುದು ಒಳ್ಳೆಯದು ಎಂದು ತಿಳಿಸಿದರು.

ಆರ್.ಬಿ.ರಾಂಪೂರ ಕ್ರೀಡಾಪಟುಗಳಿಗೆ ಪ್ರತಿಜ್ಞಾವಿಧಿ ಬೋಧಿಸಿದರು. ಯುವಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕ ಗುರುಪಾದ ಡೂಗನವರ, ಕರ್ನಾಟಕ ರಾಜ್ಯ ಸರಕಾರಿ ನೌಕರರ ಸಂಘದ ರಾಜ್ಯ ಉಪಾಧ್ಯಕ್ಷರು ಮತ್ತು ರಾಜ್ಯ ಪರಿಷತ್ ಸದಸ್ಯರಾದ ಸಂಜೀವರೆಡ್ಡಿ ಸತ್ಯರೆಡ್ಡಿ, ಜಿಲ್ಲಾ ಖಜಾಂಚಿ ಗೋಪಾಲ ನೀಲನಾಯಕ, ಗೌರವಾಧ್ಯಕ್ಷ ಸುರೇಶ ಇಂಜಗನೇರಿ ಹಾಗೂ ಎಲ್ಲಾ ತಾಲೂಕು ಅಧ್ಯಕ್ಷರು ಮತ್ತು ಕ್ರೀಡಾಪಟುಗಳು ಭಾಗವಹಿಸಿದ್ದರು.

# ದಮನಿತರ ಧ್ವನಿಯಾಗಿದ್ದ ಜಗಜೀವನರಾಂ :ಪಿ.ಎಚ್.ಪೂಜಾರ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಏ.5–ದಮನಿತರ ಧ್ವನಿಯಾಗಿದ್ದ ಹಸಿರು ಕ್ರಾಂತಿಯ ಹರಿಕಾರ ಡಾ.ಬಾಬು ಜಗಜೀವನರಾಂ ಅವರ ಜ್ಞಾನ ಮತ್ತು ಆದರ್ಶಗಳನ್ನು ನಾವೆಲ್ಲ ಮೈಗೂಡಿಸಿಕೊಳ್ಳಬೇಕು ಎಂದು ವಿಧಾನ ಪರಿಷತ್ ಸದಸ್ಯ ಪಿ.ಎಚ್.ಪೂಜಾರ ಹೇಳಿದರು.

ನವನಗರದ ಡಾ.ಬಾಬು ಜಗಜೀವನರಾಂ ಭವನದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ಸಮಾಜ ಕಲ್ಯಾಣ ಇಲಾಖೆ ಬಾಗಲಕೋಟೆ ಇವರ ಸಂಯುಕ್ತ ಆಶ್ರಯದಲ್ಲಿ ಆಯೋಜಿಸಿದ್ದ ಡಾ.ಬಾಬು ಜಗಜೀವನರಾಂ ಅವರ 118ನೇ ಜಯಂತ್ಯೋತ್ಸವ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು. ದೀನದಲಿತ ದಮನಿತರ ಧ್ವನಿಯಾಗಿ ಇತಿಹಾಸದ ಪುಟಗಳಲ್ಲಿ ಅಜರಾಮರವಾಗಿ ಉಳಿದ ಆಧುನಿಕ ಭಾರತದ ನಿರ್ಮಾತೃ ಡಾ.ಬಾಬು ಜಗಜೀವನರಾಂ ಅವರು. ಕೃಷಿ, ಕಾನೂನು, ಸಂಪರ್ಕ ಸೇರಿದಂತೆ ದೇಶದ ವಿವಿಧ ಕ್ಷೇತ್ರಗಳ ಪ್ರಗತಿಗೆ ಮಹಾನ್ ಕೊಡುಗೆ ನೀಡಿದ್ದಾರೆ ಎಂದು ಪೂಜಾರ ಹೇಳಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಜಿಲ್ಲಾಧಿಕಾರಿ ಜಾನಕಿ ಕೆ ಎಂ, ಮಾತನಾಡಿ, ಡಾ.ಬಾಬು ಜಗಜೀವನರಾಂ ಅವರು ದೇಶ ಕಂಡ ಶ್ರೇಷ್ಠ ಮುತ್ಸದ್ದಿ. ತಮ್ಮ ಅಧಿಕಾರಾವಧಿಯಲ್ಲಿ ಪೋಸ್ಟ್ ಆಫೀಸಗಳ ಸ್ಥಾಪನೆ ಮೂಲಕ ಸಂಪರ್ಕ ಕ್ರಾಂತಿ ಸೃಷ್ಟಿಸಿದವರು. ದೇಶದ ಹಸಿರು ಕ್ರಾಂತಿಯಲ್ಲಿ ಇವರ ಪಾತ್ರ ಮಹತ್ವದ್ದು. ಅಂತಹ ಮಹನೀಯರ ಬದುಕಿನ ಸಂದೇಶಗಳನ್ನು ನಮ್ಮ ಜೀವನದಲ್ಲಿ ಅಳವಡಿಸಿಕೊಳ್ಳುವುದು ನಾವು ಅವರಿಗೆ ನೀಡುವ ಅತಿದೊಡ್ಡ ಕೊಡುಗೆ ಎಂದರು.

ಉಪನ್ಯಾಸ ನೀಡಿದ ಶಿವಮೊಗ್ಗ ಕುವೆಂಪು ವಿಶ್ವವಿದ್ಯಾಲಯದ ಕನ್ನಡ ಭಾರತಿ ವಿಭಾಗದ ಪ್ರಾಧ್ಯಾಪಕ ಡಾ.ಶಿವಾನಂದ ಕೆಳಗಿನಮನಿ, ಕೆಳ ಸಮುದಾಯದ ಪರವಾಗಿ ಧ್ವನಿ ಎತ್ತಿದ ಎರಡು ಗಟ್ಟಿ ಧ್ವನಿಗಳೆಂದರೆ ಡಾ.ಬಿ.ಆರ್ ಅಂಬೇಡ್ಕರ್ ಮತ್ತು ಡಾ.ಬಾಬು ಜಗಜೀವನರಾಂ. ಅವರನ್ನು ರಾಜಕೀಯ ಪಕ್ಷಗಳು ಪ್ರತ್ಯೇಕ ಸಮುದಾಯಗಳಿಗೆ ಸೀಮಿತಗೊಳಿಸುತ್ತಿವೆ. ಆದರೆ, ಅವರ ಚಿಂತನೆ, ಉದ್ದೇಶಗಳು ಒಂದೇ ಆಗಿದ್ದವು. ಸ್ವತಃ ಜಗಜೀವನರಾಂ ತಾವು ಅಂಬೇಡ್ಕರ್ ಅನುಯಾಯಿ, ಅವರು ಅರ್ಧಕ್ಕೆ ಬಿಟ್ಟು ಹೋದ ಕೆಲಸಗಳನ್ನು ನಾನು ಮುಂದುವರೆಸುತ್ತಿದ್ದೇನೆ ಎಂದಿದ್ದರು ಎಂದು ಹೇಳಿದರು.

ಆಲ್ ಇಂಡಿಯಾ ಬಿಎಸ್‌ಪಿ ಉಪಾಧ್ಯಕ್ಷ ವಾಯ್ ಸಿ ಕಾಂಬಳೆ, ಇಂದಿನ ಯುವ ಪೀಳಿಗೆಗೆ ಸಮುದಾಯದ ನಾಯಕರ ಬಗ್ಗೆ ಕೇಳುವಷ್ಟು ತಾಳ್ಮೆ ಇಲ್ಲದಿರುವುದು ಬೇಸರದ ಸಂಗತಿ. ಕಾರ್ಮಿಕರು, ಕೃಷಿಕರು ಸೇರಿದಂತೆ ಶ್ರಮಿಕ ವರ್ಗಕ್ಕೆ ಮೊದಲು ಆದ್ಯತೆ ನೀಡಿದ ಕೀರ್ತಿ ಜಗಜೀವನರಾಂ ಅವರಿಗೆ ಸಲ್ಲುತ್ತದೆ ಎಂದರು. ಜಿಲ್ಲಾ ಪಂಚಾಯತ್ ಮುಖ್ಯಕಾರ್ಯನಿರ್ವಹಣಾಧಿಕಾರಿ ಶಶಿಧರ ಕುರೇರ ಮಾತನಾಡಿ, ಜಗಜೀವನರಾಂ, ಅಂಬೇಡ್ಕರ್, ಬಸವಣ್ಣ, ಗಾಂಧಿಯಂತಹ ಮಹನೀಯರನ್ನು ಓದಿ ಅರ್ಥೈಸಿಕೊಂಡು, ಅವರ ಮೌಲ್ಯಗಳನ್ನು ಜೀವನದಲ್ಲಿ ಅಳವಡಿಸಿಕೊಳ್ಳಿ ಎಂದರು. ಸಮಾಜ ಕಲ್ಯಾಣ ಇಲಾಖೆ ಉಪನಿರ್ದೇಶಕ ಸದಾಶಿವ ಬಡಿಗೇರ, ಸಮುದಾಯದ ಹಿರಿಯರು ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು.

# ವಿನಯ್ ಸೋಮಯ್ಯ ಪ್ರಕರಣ ಸಿಬಿಐಗೆ ವಹಿಸುವಂತೆ ಮಾಜಿ ಸಚಿವ ಹಾಲಪ್ಪ ಆಚಾರ ಒತ್ತಾಯ



ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ : ಕುಕನೂರ ಪ್ರವಾಸಿ ಮಂದಿರದಲ್ಲಿ ಶನಿವಾರ ಆಯೋಜಿಸಿದ್ದ ಸುದ್ದಿಗೋಷ್ಠಿ ಉದ್ದೇಶಿಸಿ ಹಾಲಪ್ಪ ಆಚಾರ ಮಾತನಾಡುತ್ತಾ ಕೊಡಗಿನ ಭಾರತೀಯ ಜನತಾ ಪಕ್ಷದ ಕಾರ್ಯಕರ್ತ ವಾಟ್ಸಪ್ ಗ್ರೂಪ್ ರಚನೆ ಮಾಡಿದ್ದು ಅದರಲ್ಲಿನ ಸದಸ್ಯರು ಕೊಡಗಿನ ಸರ್ಕಾರಿ ಆಸ್ಪತ್ರೆಯ ಶೌಚಾಲಯದ ದುಸ್ಥಿತಿ ಹಾಗೂ ಅಧಿಕಾರಿಗಳ ದುರಾಡಳಿತ ಕುರಿತು ಬೆಳಕು ಚೆಲ್ಲಿದ್ದು ಅದಕ್ಕಾಗಿ ಕಾಂಗ್ರೆಸ್ಸಿಗರು ವಿನಯ್ ಸೋಮಯ್ಯ ಮೇಲೆ ಇಲ್ಲಸಲ್ಲದ ದೂರು ದಾಖಲಿಸಿ ಸೇಡಿನ ರಾಜಕೀಯ ಮಾಡುತ್ತಿದ್ದು ಇದಕ್ಕೆ ಸಹಕರಿಸಿದ ಪೊಲೀಸ್ ಇಲಾಖೆ ಕಾಂಗ್ರೆಸ್ ಪಕ್ಷದ ಕೈಗೊಂಬೆಯಂತೆ ವರ್ತಿಸುತ್ತಿದ್ದಾರೆ. ಇದನ್ನೆಲ್ಲ ಗಮನಿಸಿದ ವಿನಯ್ ಸಮಯ ಹೈಕೋರ್ಟ್ನಿಂದ ತಡೆಯಾಗಿ ತಂದಿದ್ದರು ಸಹ ಪೊಲೀಸ್ ಇಲಾಖೆ ಹಾಗೂ ಜಿಲ್ಲೆಯ ಕಾಂಗ್ರೆಸ್ ಪ್ರಮುಖರು ಚಿತ್ರ ಹಿಂಸೆ ಹಾಗೂ ಇಲ್ಲಸಲ್ಲದ ಕಿರಿಕಿರಿ ನೀಡುತ್ತಿದ್ದದನ್ನು ಸಹಿಸದೆ ಆತ್ಮಹತ್ಯೆಗೆ ಶರಣಾಗಿದ್ದು ಆತ್ಮಹತ್ಯೆಗೂ ಮುನ್ನ ಬರೆದಿರುವ ಮೃತ್ಯು ಪತ್ರದಲ್ಲಿ ನಾಲ್ಕು ಜನರ ಹೆಸರನ್ನು ಕಾಣಿಸಿರುತ್ತಾರೆ. ಮೃತ್ಯು ಪತ್ರದಂತೆ ಮೃತರ ಸಹೋದರ ನಾಲ್ಕು ಜನರ ವಿರುದ್ಧ ಪೊಲೀಸ್ ಠಾಣೆಯಲ್ಲಿ ದೂರು ನೀಡಿದ್ದರು ಸಹ ಪೊಲೀಸರು ಫ್ಐಆರ್ ನಲ್ಲಿ ಕೇವಲ ಒಬ್ಬರ ಹೆಸರು ನಮೂದಿಸಿರುವುದು ಪೊಲಿಸ್ ಸಂಪೂರ್ಣವಾಗಿ ಕಾಂಗ್ರೆಸ್ ಪಕ್ಷಕ್ಕೆ ಕೈಗೊಂಬೆಯಾಗಿರುವುದು ಇಂತಹ ಪೊಲೀಸ್ ಇಲಾಖೆಯಿಂದ ನಿಷ್ಪಕ್ಷಪಾತ ತನಿಖೆ ಸಾಧ್ಯವಿಲ್ಲ ಎಂಬುದು ಸ್ಪಷ್ಟವಾಗಿದ್ದು ಸರ್ಕಾರ ಈ ಪ್ರಕರಣವನ್ನು ಸಿಬಿಐ ತನಿಖೆಗೆ ಒಪ್ಪಿಸಬೇಕು ಎಂದು ಆಗ್ರಹ ಪಡಿಸಿದರು.

ಈ ವೇಳೆಯಲ್ಲಿ ಬಿಜೆಪಿ ಮಂಡಲ ಅಧ್ಯಕ್ಷ ಮಾರುತಿ ಗಾವರಳ, ಸಿದ್ದು ಉಳ್ಳಾಗಡ್ಡಿ, ಶರಣಪ್ಪ ಬಣ್ಣದ ಬಾವಿ, ವೀರಣ್ಣ ಹುಬ್ಬಳ್ಳಿ, ಸಿ ಎಚ್ ಪೊಲೀಸ್ ಪಾಟೀಲ್, ಶಂಭುಲಿಂಗಪ್ಪ ಜೋಳದ, ಕರಬಸಯ್ಯ ಬಿನ್ನಾಳ, ಬಸನಗೌಡ ತೊಂಡಿಹಾಳ, ಶಿವಕುಮಾರ್ ನಾಗಲಾಪುರ ಮಠ, ಲಕ್ಷ್ಮಣ ಕಾಳಿ, ಬಸವರಾಜ ಹಾಳಕೇರಿ, ಜಗದೀಶ ಸೂಡಿ, ಬಾಲರಾಜ್ ಗಾಳಿ, ಕನಕಪ್ಪ ಬ್ಯಾಡರ, ರಾಜಶೇಖರ ದ್ಯಾಂಪುರ, ಮಂಜುನಾಥ್ ಪೋಳದ, ಪಟ್ಟಣ ಪಂಚಾಯಿತಿಯ ಬಿಜೆಪಿ ಸದಸ್ಯರು, ಕಾರ್ಯಕರ್ತರು ಪಾಲ್ಗೊಂಡಿದ್ದರು.

# ಕ್ರೀಡೆ ನಮ್ಮನ್ನು ಮಾನಸಿಕವಾಗಿ ಮತ್ತು ದೈಹಿಕವಾಗಿ ಸದೃಢರನ್ನಾಗಿ ಮಾಡುತ್ತದೆ :ಸಚಿವ ಈಶ್ವರ ಬಿ. ಖಂಡ್ರೆ

ಮಲ್ಲಮ್ಮ ನುಡಿ ವಾರ್ತೆ

ಬೀದರ : ಏ.5: ಕ್ರೀಡೆ ನಮ್ಮನು ಮಾನಸಿಕವಾಗಿ ಮತ್ತು ದೈಹಿಕವಾಗಿ ಸದೃಢರನಾಗಿ ಮಾಡುತ್ತದೆ ಹಾಗೂ ಆರೋಗ್ಯವಂತ ಜೀವನಕ್ಕೆ ಕ್ರೀಡೆ ಬಹು ಮುಖ್ಯ ಎಂದು ಸಚಿವ ಈಶ್ವರ ಬಿ.ಖಂಡ್ರೆ ತಿಳಿಸಿದರು.

ಅವರು ಶನಿವಾರ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಹಾಗೂ ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘ ಇವರ ಸಂಯುಕ್ತಾಶ್ರಯದಲ್ಲಿ ನಗರದ ನೆಹರು ಕ್ರೀಡಾಂಗಣದಲ್ಲಿ ನಡೆದ ಜಿಲ್ಲಾ ಮಟ್ಟದ ರಾಜ್ಯ ಸರ್ಕಾರಿ ನೌಕರರ ಕ್ರೀಡಾಕೂಟ ಮತ್ತು ಸಾಂಸ್ಕೃತಿಕ ಸ್ಪರ್ಧೆಗಳ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ಪ್ರಾಚೀನ ಕಾಲದಿಂದಲೂ ಕ್ರೀಡೆಗೆ ಮಹತ್ವವಾದ ಸ್ಥಾನವನ್ನು ಪಡೆದಿದೆ. ರಾಮಾಯಣ–ಮಹಾಭಾರತದ ಕಾಲದಲ್ಲಿ ರಾಜರು ಕ್ರೀಡಾಕೂಟಗಳನ್ನು ಏರ್ಪಡಿಸುತ್ತಿದ್ದರು. ಕುಸ್ತಿ, ಬಿಲ್ಲುಗಾರಿಕೆ ಮುಂತಾದವು ಕಾಣಬಹುದಾಗಿದೆ. ಕ್ರೀಡೆ ಆಧುನಿಕ ಜಗತ್ತಿನಲ್ಲಿ ಅತ್ಯಂತ ಜನಪ್ರಿಯ ಮತ್ತು ಮಹತ್ವವನ್ನು ಪಡೆದಿರುವುದನ್ನು ನಾವು ಕಾಣಬಹುದಾಗಿದೆ. ರಾಜ್ಯ ಮಟ್ಟದ ಕ್ರೀಡಾಕೂಟ, ರಾಷ್ಟ್ರೀಯ ಕ್ರೀಡಾ–ಕೂಟ, ಏಷ್ಯನ್ ಕ್ರೀಡಾಕೂಟ ಮತ್ತು ಒಲಿಂಪಿಕ್ಸ್ ಕ್ರೀಡಾಕೂಟ ನಡೆಯುತ್ತಿವೆ, ಅದರಲ್ಲಿ ಅನೇಕ ಯುವ ಪೀಳಿಗೆ ತಮ್ಮ ಪ್ರತಿಭೆಯ ಮೂಲಕ ಜಗತ್ತಿಗೆ ಗುರುತಿಸಿಕೊಳ್ಳುತ್ತಾರೆ. ಕ್ರೀಡೆಯಲ್ಲಿ ಸಾಧನೆ ಮಾಡಿದವರಿಗೆ ಅನೇಕ ಪ್ರಶಸ್ತಿಗಳನ್ನು ನೀಡಲಾಗುತ್ತಿದೆ, ಏಕಲವ್ಯ ಪ್ರಶಸ್ತಿ, ಮೇಜರ್ ಧ್ಯಾನಚಂದ್ ಖೇಲ್ ರತ್ನಾ ಪ್ರಶಸ್ತಿ, ಪದ್ಮ ಪ್ರಶಸ್ತಿಗಳು ಮತ್ತು ಸಚೀನ ತೆಂಡುಲ್ಕರ್ ಅವರಿಗೆ ಕ್ರೀಡಾ ವಿಭಾಗದಲ್ಲಿ ಭಾರತ ರತ್ನವನ್ನು ನೀಡಲಾಗಿದೆ. ಯುವ ಪೀಳಿಗೆ ಯಾವುದೇ ದುಶ್ಚಟಗಳಿಗೆ ಬಲಿಯಾಗದೆ, ಉತ್ತಮ ಜೀವನವನ್ನು ಕಟ್ಟಿಕೊಳ್ಳಬೇಕು ಎಂದು ತಿಳಿಸಿದರು.



ಸಚಿವರು ಕ್ರೀಡಾ ಧ್ವಜಾರೋಹಣ ನೆರವೇರಿಸಿ, ಕ್ರೀಡಾ ಜ್ಯೋತಿಯನ್ನು ನೀಡಿ ಕ್ರೀಡಾಕೂಟ ಮತ್ತು ಸಾಂಸ್ಕೃತಿಕ ಸ್ಪರ್ಧೆಗಳು ಕಾರ್ಯಕ್ರಮಕ್ಕೆ ಚಾಲನೆ ನೀಡಿದರು.

ಈ ಕಾರ್ಯಕ್ರಮದಲ್ಲಿ ವಿಧಾನ ಪರಿಷತ್ ಸದಸ್ಯರಾದ ಶಶೀಲ ಜಿ.ನಮೋಶಿ, ಬೀದರ ನಗರಸಭೆ ಅಧ್ಯಕ್ಷರಾದ ಮಹಮ್ಮದ ಗೌಸ, ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ಜಿಲ್ಲಾಧ್ಯಕ್ಷರಾದ ಸೋಮಶೇಖರ ಬಿರಾದಾರ ಚಿದ್ರಿ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕರಾದ ನಾಗರಾಜ ಮಠ, ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ಕಾರ್ಯದರ್ಶಿಗಳಾದ ಪ್ರಭುಲಿಂಗ ತುಗಾಂವೆ, ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ರಾಜ್ಯ ಪರಿಷತ್ ಸದಸ್ಯರಾದ ರಾಜಕುಮಾರ ಮಾಳಿಗೆ, ಕೋಶಾಧ್ಯಕ್ಷರಾದ ದೇವಪ್ಪ ಚಾಂಬೋಳೆ, ಗೌರವಾಧ್ಯಕ್ಷರಾದ ಸೂರ್ಯಕಾಂತ ಬಿರಾದಾರ, ಕಾರ್ಯಾಧ್ಯಕ್ಷರಾದ ಶಿವರಾಜ ಕಮಲಾಪೂರೆ, ಹಿರಿಯ ಉಪಾಧ್ಯಕ್ಷರಾದ ಗೌತಮ ಚಿಂತಲಗೇರಾ, ಮಹ್ಮದ ಅಬ್ದುಲ್ ಸುತ್ತಾರ, ಮತ್ತು ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ಬೀದರನ ಎಲ್ಲಾ ತಾಲ್ಲೂಕಾಧ್ಯಕ್ಷರು ಸೇರಿದಂತೆ ಹಾಗೂ ಜಿಲ್ಲಾ ಹಾಗೂ ತಾಲ್ಲೂಕು ಮಟ್ಟದ ಸರ್ಕಾರಿ ನೌಕರರು ಉಪಸ್ಥಿತರಿದ್ದರು.

# 6.86 ಲಕ್ಷ ರೂ. ನಗನಾಣ್ಯ ಕಳವು

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಏ.5–ಮನೆಯ ಹಿಂದಿನ ಕೊಂಡಿ ತೆಗೆದು ಟೂರಿಸ್ಟ್ ಬ್ಯಾಗ್‌ನಲ್ಲಿ ಇಟ್ಟಿದ್ದ 6.86 ಲಕ್ಷ ರೂ.ಮೌಲ್ಯದ ನಗನಾಣ್ಯ ಕಳವು ಮಾಡಿರುವ ಘಟನೆ ಇಲ್ಲಿನ ಕರುಣೇಶ್ವರ ನಗರದಲ್ಲಿ ನಡೆದಿದೆ.ಸಾಮಣ್ಣಾ ಜಂಪಾ ಎಂಬುವವರ ಬಾಡಿಗೆ ಮನೆಯ ಹಿಂದಿನ ಕೊಂಡಿ ತೆಗೆದು ಕಳ್ಳರು 80 ಸಾವಿರ ರೂ.ಮೌಲ್ಯದ 20 ಗ್ರಾಂ.ನೆಕ್ಲೆಸ್, 80 ಸಾವಿರ ರೂ. ಮೌಲ್ಯದ 20 ಗ್ರಾಂ.ಲಾಕೇಟ್, 80 ಸಾವಿರ ರೂ.ಮೌಲ್ಯದ 20 ಗ್ರಾಂ. ತಾಳಿಸರ, 20 ಸಾವಿರ ರೂ.ಮೌಲ್ಯದ 5 ಗ್ರಾಂ.ಬಟ್ಟುಂಗುರ, 2.40 ಲಕ್ಷ ರೂ.ಮೌಲ್ಯದ ಮೌಲ್ಯದ ತಲಾ ಹತ್ತು ಗ್ರಾಂ.ನ 3 ಬಟ್ಟುಂಗುರ, 20 ಸಾವಿರ ರೂ.ಮೌಲ್ಯದ ತಲಾ 1 ಗ್ರಾಂ.ನ 5 ಮಕ್ಕಳ ರಿಂಗ್, 22 ಸಾವಿರ ರೂ.ಮೌಲ್ಯದ 6 ಗ್ರಾಂ.ನ ಮಾಟಲಿ, 40 ಸಾವಿರ ರೂ.ಮೌಲ್ಯದ 10 ಗ್ರಾಂ.ನ ಕಿವಿ ಜುಮಕಿ, 40 ಸಾವಿರ ರೂ.ಮೌಲ್ಯದ 10 ಗ್ರಾಂ.ನ ಕಿವಿ ಓಲೆ, 4 ಸಾವಿರ ರೂ.ಮೌಲ್ಯದ 2 ಗ್ರಾಂ.ನ ಕಿವಿ ಡ್ರಾಪ್, 60 ಸಾವಿರ ರೂ.ನಗದು ಸೇರಿ 6.86 ಲಕ್ಷ ರೂ.ಮೌಲ್ಯದ ನಗನಾಣ್ಯ ಕಳವು ಮಾಡಿದ್ದಾರೆ.

ಈ ಸಂಬಂಧ ಅವರು ಅಶೋಕ ನಗರ ಪೊಲೀಸ್ ಠಾಣೆಯಲ್ಲಿ ದೂರು ಸಲ್ಲಿಸಿದ್ದು, ತನಿಖೆ ನಡೆದಿದೆ.

# ಮೋರನಹಳ್ಳಿಯಲ್ಲಿ ಶಾರ್ಟ ಸರ್ಕ್ಯೂಟ್ ಹೊಟ್ಟು-ಮೇವಿನ ಬಣಿವೆ ಭಸ್ಮ: ಅಪಾರ ಹಾನಿ



ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ :ಏ.5: ತಾಲ್ಲೂಕಿನ ಮೋರನಹಳ್ಳಿ ಗ್ರಾಮದಲ್ಲಿ ರಾಮಚಂದ್ರಪ್ಪ ಹರನಹಳ್ಳಿ ಇವರ ಜಮೀನನಲ್ಲಿ ದನಕರುಗಳಿಗಾಗಿ ಸಂಗ್ರಹಿಸಿದ್ದ ಹೊಟ್ಟು ಮೇವಿನ ಬಣಿವೆಗಳಿಗೆ ವಿದ್ಯುತ್ ತಂತಿ ತಗುಲಿ ಶಾರ್ಟ್ ಸರ್ಕ್ಯೂಟ್ ನಿಂದ ನಾಲ್ಕು ಬಣಿವೆಗಳು ಸುಟ್ಟಿದ್ದು ರೈತರಲ್ಲಿ ಆತಂಕ ಮೂಡಿಸಿದೆ.

ಕೃಷಿಕಾರ್ಯಗಳಿಗೆ ಆಸರೆಯಾಗುವ ದನ ಕರುಗಳಿಗೆ ರೈತರು ಸಂಗ್ರಹಿಸಿದ್ದ ಹೊಟ್ಟು ಮೇವಿನ ಬಣಿವೆಗಳು ಸುಮಾರು ಸಂಜೆ 4:30 ಅಷ್ಟೊತ್ತಿಗೆ ಏಕಾಏಕಿ ಬೆಂಕಿಗಾಹುತಿಯಾಗಿದೆ ಎನ್ನುತ್ತಾರೆ ರೈತರು.

ರಾಮಚಂದ್ರಪ್ಪ ಹರನಹಳ್ಳಿ, ಜಗದೀಶ ಆಡಿನ್, ಹನುಮಂತ ಬಗನಾಳ ಇವರ 4 ಬಣಿವೆಗಳು ಸುಟ್ಟು ಬಸ್ಮವಾಗಿದ್ದು ಜೊತೆಗೆ 10 ಚೀಲ ಮೆಕ್ಕೆಜೋಳ ಕೂಡ ಸುಟ್ಟಿದ್ದು ಸುಮಾರು 4 ಲಕ್ಷಕ್ಕೂ ಅಧಿಕ ಮೌಲ್ಯದ ಶೇಂಗಾ ಹೊಟ್ಟಿನ ಬಣಿವೆಗಳು ಸುಟ್ಟಿವೆ ಅಳವಂಡಿ ಪೋಲಿಸ್ ಠಾಣೆ ವ್ಯಾಪ್ತಿಯಲ್ಲಿ ಪ್ರಕರಣ ದಾಖಲಾಗಿ ಸ್ಥಳ ಪರಿಶೀಲಿಸಲಾಗಿದೆ.

ಕಷ್ಟ ಕಾಲದಲ್ಲಿ ರೈತರಿಗೆ ಸರ್ಕಾರ ನ್ಯಾಯ ಒದಗಿಸಬೇಕು ಮತ್ತು ಮೂಕ ಪ್ರಾಣಿಗಳಿಗೆ ಮೇವಿನ ವ್ಯವಸ್ಥೆ ಮಾಡಬೇಕೆಂಬುದು ಸ್ಥಳೀಯರ ಒತ್ತಾಯವಾಗಿದೆ.

# ಗ್ರಾಮೀಣ ಮಹಿಳಾ ಕೂಲಿಕಾರರ ಮಕ್ಕಳ ಆರೈಕೆಗೆ ಕೂಸಿನ ಮನೆ ಪೂರಕ



ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ:ಏ.05:ಮಹಾತ್ಮಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿಯೋಜನೆಯಡಿ ಕೂಲಿ ಕೆಲಸ ಮಾಡುವ ಗ್ರಾಮೀಣ ಮಹಿಳಾ ಕೂಲಿಕಾರರ ಮಕ್ಕಳನ್ನು ಸುರಕ್ಷಿತವಾಗಿ ಆರೈಕೆ ಮಾಡುವಲ್ಲಿ ಕೂಸಿನ ಮನೆ ಪೂರಕವಾಗಿದೆ ಎಂದು ಇಂಡಿಯನ್ ಏಷಿಯನ್ ಬ್ಯಾಂಕ್ ಸಿಬ್ಬಂದಿಗಳ ತಂಡ ಅಭಿಪ್ರಾಯ ವ್ಯಕ್ತಪಡಿಸಿತು.

ರಾಜ್ಯ ಸರಕಾರದ ಮಹತ್ವಾಕಾಂಕ್ಷಿ ಕೂಸಿನ ಮನೆ ಕಾರ್ಯಕ್ರಮದ ಅಡಿಯಲ್ಲಿ ಮಹಾತ್ಮಗಾಂಧಿ ನರೇಗಾ ಯೋಜನಯಡಿ ಕೂಲಿ ಕೆಲಸ ಮಾಡುವ ಗ್ರಾಮೀಣ ಕೂಲಿಕಾರರ ಮಕ್ಕಳ ಆರೈಕೆಗೆ ಶಹಾಪುರ ತಾಲೂಕಿನ ರಸ್ತಾಪೂರ ಗ್ರಾಮ ಪಂಚಾಯಿತಿಯು ರಸ್ತಾಪೂರ ಗ್ರಾಮದಲ್ಲಿ ಅನುಷ್ಠಾನಗೊಳಿಸಿದ ಕೂಸಿನ ಮನೆಯ ನಿರ್ವಹಣಾ ಕ್ರಮದ ಕುರಿತು ಅಧ್ಯಯನ ಮಾಡಲು ಏ.03ರಂದು ಇಂಡಿಯನ್ ಏಷಿಯನ್ ಬ್ಯಾಂಕ್ ಸಿಬ್ಬಂದಿಗಳ ತಂಡ ಭೇಟಿ ನೀಡಿ, ಪರಿಶೀಲಿಸಿತು. ಗ್ರಾಮೀಣ ಕೂಲಿ ಕಾರ್ಮಿಕ ಮಹಿಳೆಯರ 6 ತಿಂಗಳಿಂದ 3 ವರ್ಷದೊಳಗಿನ ಪುಟ್ಟ ಮಕ್ಕಳ ಆರೋಗ್ಯ, ಸುರಕ್ಷತೆ ಪಾಲನೆಗೆ ಸರಕಾರ ಆರಂಭಿಸಿದ ಕೂಸಿನ ಮನೆ ಹೆಸರಿನ ಶಿಶುಪಾಲನ ಕೇಂದ್ರಕ್ಕೆ ಶಕ್ತಿ ತುಂಬುವ ನಿಟ್ಟಿನಲ್ಲಿ ಗ್ರಾಮ ಪಂಚಾಯಿತಿ ಅಧ್ಯಕ್ಷರ ಅಧ್ಯಕ್ಷತೆಯಲ್ಲಿ ಮೇಲ್ವಿಚಾರಣ ಸಮಿತಿ ರಚಿಸಿದ್ದು, ಕೂಸಿನ ಮನೆಯ ನಿರ್ವಹಣೆಗೆ ಕಣ್ಣಾವಲಿನಂತೆ ಕೆಲಸ ಮಾಡಲಿದೆ ಎಂದರು. ಕೂಸಿನ ಮನೆಯ ಮಕ್ಕಳ ದಾಖಲಾತಿ, ಹಾಜರಾತಿ, ಮಕ್ಕಳ ಆರೈಕೆದಾರರ ಹಾಜರಾತಿ, ವೇತನ ಪಾವತಿ, ಮಕ್ಕಳ ಆಹಾರ ವಿತರಣೆ, ಆರೋಗ್ಯ ತಪಾಸಣೆ, ರೋಗ ನಿರೋಧಕ ಲಸಿಕಾ ವಿತರಣೆ. ಪಿಠೋಪಕರಣ, ಮಕ್ಕಳ ಆಟದ ಸಾಮಗ್ರಿಗಳ ದಾಸ್ತಾನು, ಖರ್ಚು ವೆಚ್ಚಗಳು, ಸಂದರ್ಶಕರ ವಹಿ ಸೇರಿದಂತೆ ಕೂಸಿನ ಮನೆ ಮೇಲ್ವಿಚಾರಣಾ ಸಮಿತಿಯ ಸಭಾ ನಡುವಳಿ ಕಡತಗಳ ಕ್ರಮ ಬದ್ಧತೆಯನ್ನು ಪರಿಶೀಲಿಸಿತು. ಬಳಿಕ, ಜಿಲ್ಲೆಯಲ್ಲಿ 122 ಗ್ರಾಮ ಪಂಚಾಯಿತಿಗಳಿದ್ದು, ಸುಸಜ್ಜಿತ ಕಟ್ಟಡದ ಲಭ್ಯತೆಗೆ ಅನುಸಾರ ಗ್ರಾಮ ಪಂಚಾಯಿತಿಗೆ ಒಂದರಂತೆ 117 ಕೂಸಿನ ಮನೆಗಳನ್ನು ಆರಂಭಿಸಿದ್ದು, ಕೂಸಿನ ಮನೆಯಲ್ಲಿ ಕೆಲಸ ಮಾಡುವ ಶಿಶು ಆರೈಕೆದಾರರಿಗೆ ಮಕ್ಕಳ ಲಾಲನೆ–ಪಾಲನೆ ಮಾಡುವ ಕುರಿತು ತರಬೇತಿ ನೀಡಿದೆ. ಶಿಶು ಆರೈ–ಕೆದಾರರಿಗೆ ಮಹಾತ್ಮಗಾಂಧಿ ನರೇಗಾ ಯೋಜನೆಯಡಿ ಅನುಷ್ಠಾನಗೊಳ್ಳುವ ಸಮುದಾಯ ಕಾಮಗಾರಿಗೆ ತೆಗೆಯುವ ಎನ್‌ಎಮ್‌ಆರ್ ಗಳಲ್ಲಿ ಆರೈ–ಕೆದಾರರ ಜಾಬ್ ಕಾರ್ಡ್ ಸೇರಿಸಿ, 370 ರೂ ನರೇಗಾ ಕೂಲಿ ಹಣ ಪಾವತಿಸಲಾಗುತ್ತದೆ. ಕೂಸಿನ ಮನೆಗೆ ದಾಖಲಾಗುವ ಮಗುವಿಗೆ ಒಂದು ದಿನಕ್ಕೆ 12 ರೂಗಳಂತೆ ಖರ್ಚು ಮಾಡಿ, ಪೌಷ್ಟಿಕ ಆಹಾರದ ಚಾರ್ಟ್ ಪ್ರಕಾರ ಆಹಾರ ನೀಡಲಾಗುತ್ತದೆ ಎಂದು ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಶ್ರೀ ಲವೀಶ್ ಒರಡಿಯಾ ಅವರು ಜಿಲ್ಲಾ ಪಂಚಾಯಿತಿಯಲ್ಲಿ ತಮ್ಮನ್ನು ಭೇಟಿ ಮಾಡಿದ ಅಧ್ಯಯನ ತಂಡಕ್ಕೆ ಮಾಹಿತಿ ನೀಡಿದರು. ನರೇಗಾ ಕಾರ್ಮಿಕರ ಮಕ್ಕಳಿಗೆ ಆಸರೆಯಾದ ಕೂಸು ಮನೆಯಲ್ಲಿ ಮಕ್ಕಳಿಗೆ ಪೌಷ್ಟಿಕ ಊಟ, ಆಟ–ಪಾಠದ ಪರಿಕರದ ಜತೆಗೆ ಲಾಲನೆ–ಪಾಲನೆ ಮಾಡಲಾಗುತ್ತದೆ, ನರೇಗಾ ಕೆಲಸಕ್ಕೆ ಹೊದ ಮಗುವಿನ ತಾಯಿ ಕೆಲಸ ಮಾಡಿ, ಬರುವವರೆಗೂ ಮಗುವನ್ನು ಸುರಕ್ಷಿತವಾಗಿ ಆರೈಕೆ ಮಾಡಿ, ಮಗುವಿನ ಪಾಲಕರಿಗೆ ಒಪ್ಪಿಸಲಾಗುತ್ತದೆ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ರಾಜ್ಯ ಗ್ರಾಮೀಣಾಭಿವೃದ್ಧಿ ಆಯುಕ್ತಾಲಯದ ಉಪನಿರ್ದೇಶಕರಾದ ಶ್ರೀಮತಿ ಗೀತಾ ಶಂಕರ್, ಸಹಾಯಕ ನಿರ್ದೇಶಕರಾದ ಶ್ರೀ ಕೆಎಸ್ ಜಗದೀಶ, ಜಿಲ್ಲಾ ಪಂಚಾಯತ ಯೋಜನಾ ನಿರ್ದೇಶಕರಾದ ಶ್ರೀ ಸಿಬಿ ದೇವರಮನಿ, ಶಹಾಪುರ ತಾಲೂಕ ಪಂಚಾಯತ ಕಾರ್ಯನಿರ್ವಾಹಕ ಅಧಿಕಾರಿಗಳಾದ ಶ್ರೀ ಬಸವರಾಜ ಶರಬೈ, ಸಹಾಯಕ ನಿರ್ದೇಶಕರಾದ ಶ್ರೀಮತಿ ಶಾರದಮ್ಮ, ರಸ್ತಾಪೂರ ಗ್ರಾಮ ಪಂಚಾಯಿತಿ ಅಧ್ಯಕ್ಷರಾದ ಶ್ರೀಮತಿ ಶ್ರೀದೇವಿ, ಪಾಧ್ಯಕ್ಷರಾದ ಶ್ರೀಭೀಮಣ್ಣ, ಸದಸ್ಯರಾದ ಶ್ರೀ ಭೀಮರಾಯ ಗ್ರಾಮ ಪಂಚಾಯಿತಿ ಸಿಬ್ಬಂದಿ ಹಾಗೂ ಗ್ರಾಮಸ್ಥರು ಉಪಸ್ಥಿತರಿದ್ದರು.

# ಪ್ರಿಯಕರನ ಜೊತೆ ಮದುವೆಯಾಗಲು ತಾನೇ ಹೆತ್ತು ಸಾಕಿದ 3 ಮಕ್ಕಳನ್ನೇ ಕೊಂದ 'ಪಾಪಿ ತಾಯಿ'



ಮಲ್ಲಮ್ಮ ನುಡಿ ವಾರ್ತೆ

ಸಂಗಾರೆಡ್ಡಿ:ಏ.5: ಬಾಲ್ಯದ ಸ್ನೇಹಿತ–ಪ್ರಿಯಕರನೊಂದಿಗೆ ಮದುವೆಯಾಗಿ ಹೊಸ ಜೀವನ ನಡೆಸಲು ಇಚ್ಚಿಸಿದ್ದ ಮಹಿಳೆಯೊಬ್ಬಳು ಅದಕ್ಕೆ ಅಡ್ಡಿಯಾಗಿದ್ದ ತನ್ನ ಮೂರು ಮಕ್ಕಳನ್ನು ಕೊಂದು ಹಾಕಿರುವ ಧಾರುಣ ಘಟನೆ ತೆಲಂಗಾಣದಲ್ಲಿ ವರದಿಯಾಗಿದೆ.

ತೆಲಂಗಾಣದ ಸಂಗಾರೆಡ್ಡಿ ಜಿಲ್ಲೆಯ ಅಮೀನ್‌ಪುರ ಮಂಡಲದಲ್ಲಿ ಈ ಘೋರ ಹತ್ಯೆ ಪ್ರಕರಣ ದಾಖಲಾಗಿದ್ದು, ಮಹಿಳೆಯೊಬ್ಬಳು ತನ್ನ ವಿವಾಹೇತರ ಸಂಬಂಧಕ್ಕೆ ಮಕ್ಕಳು ಅಡ್ಡಿಯಾಗಿದ್ದಾರೆ ಎಂದು ತಾನೇ ಹೆತ್ತು ಸಾಕಿದ ಮೂರು ಅಮಾಯಕ ಮಕ್ಕಳನ್ನು ಕೊಂದು ಮುಗಿಸಿದ್ದಾಳೆ. ಮೃತರನ್ನು ಸಾಯಿಕೃಷ್ಣ (12), ಮಧುಪ್ರಿಯಾ (10), ಗೌತಮ್ (8) ಎಂದು ಗುರುತಿಸಲಾಗಿದೆ. ಮಾರ್ಚ್ 27 ರಂದು ಈ ಘನಘೋರ ಹತ್ಯೆ ನಡೆದಿದ್ದು, ಪೊಲೀಸರು ಇದೀಗ ನಿಗೂಢ ಕೊಲೆ ಪ್ರಕರಣವನ್ನು ಭೇದಿಸಿ ಆರೋಪಿ ಮಹಿಳೆ ರಜಿತಾ ಅಲಿಯಾಸ್ ಲಾವಣ್ಯ ಮತ್ತು ಆಕೆಯ ಪ್ರಿಯಕರ ಶಿವಕುಮಾರ್ ಎಂಬಾತನನ್ನು ಬಂಧಿಸಿದ್ದಾರೆ.

ಏನಿದು ಪ್ರಕರಣ? ರಜಿತಾ ಅಲಿಯಾಸ್ ಲಾವಣ್ಯ 2013 ರಲ್ಲಿ ಬೀರಂಗುಡದ ರಾಘವೇಂದ್ರನಗರ ಕಾಲೋನಿಯ ನಿವಾಸಿ ಅವುರಿಚಿಂತಲ ಚೆನ್ನಯ್ಯ ಅವರನ್ನು ವಿವಾಹವಾಗಿದ್ದರು. ಚೆನ್ನಯ್ಯ ಲಾವಣ್ಯಗಿಂತ 20 ವರ್ಷ ದೊಡ್ಡವನಾಗಿದ್ದ. ರಜಿತಾ ಖಾಸಗಿ ಶಿಕ್ಷಕಿಯಾಗಿ ಕೆಲಸ ಮಾಡುತ್ತಿಳು. ಚೆನ್ನಯ್ಯ ನೀರಿನ ಟ್ಯಾಂಕರ್ ಚಾಲಕನಾಗಿ ಕೆಲಸ ಮಾಡುತ್ತಿದ್ದ.

ಈಗ್ಗೆ ತನ್ನ ಶಾಲಾ ಸಹಪಾಠಿಗಳು ಪರಸ್ಪರ ಸಂಪರ್ಕಕ್ಕೆ ಬಂದು ಪರಸ್ಪರ ಭೇಟಿಯಾಗಲು ನಿರ್ಧರಿಸಿದರು. ಇದಕ್ಕಾಗಿ ಒಂದು ಗೆಟ್–ಟುಗೆದರ್ ಕಾರ್ಯಕ್ರಮ ಆಯೋಜಿಸಿದರು. ಈ ಕಾರ್ಯಕ್ರಮಕ್ಕೆ ರಜಿತಾ ಕೂಡ ಹೋಗಿದ್ದಳು. ಅದೇ ಕಾರ್ಯಕ್ರಮದಲ್ಲಿ ಆಕೆಯ ಬಾಲ್ಯದ ಸ್ನೇಹಿತ ಹಾಗೂ ಸಹಪಾಠಿ ಶಿವಕುಮಾರ್ ನನ್ನು ಭೇಟಿಯಾಗಿದ್ದಾಳೆ. ಈ ಶಿವಕುಮಾರ್ ನಲ್ಗೊಂಡ ಜಿಲ್ಲೆಯ ಗೋಡು–ಕೊಂಡದ ನಿವಾಸಿಯಾಗಿದ್ದಾನೆ.

ಅಲ್ಲಿಂದ ಇಬ್ಬರೂ ಪರಸ್ಪರ ಮೊಬೈಲ್ ಸಂಖ್ಯೆ ವಿನಿಮಯ ಮಾಡಿಕೊಂಡು ಬಳಿಕ ವಿವಾಹೇತರ ಸಂಬಂಧದವರೆಗೂ ಸಂಬಂಧ ಮುಂದುವರೆಸಿದ್ದಾರೆ. ಫೋನ್ ನಲ್ಲಿ ಮಾತನಾಡುವುದರಿಂದ ಆರಂಭವಾದ ಇವರ ಸಂಪರ್ಕ ಕ್ರಮೇಣ ವಿಡಿಯೋ ಕಾಲ್ ವರೆಗೂ ಮುಂದುವರೆದಿತ್ತು. ಮೊದಲೇ ತನ್ನ 20 ವರ್ಷದ ಹಿರಿಯ ಗಂಡನನ್ನು ಕಂಡರೆ ಇಷ್ಟವಿಲ್ಲದ ರಜಿತಾ ಕ್ರಮೇಣ ಶಿವಕುಮಾರ್ ಗೆ ಹತ್ತಿರವಾದಳು. ಇದೇ ವಿಚಾರವಾಗಿ ಆಗಾಗ ತನ್ನ ಗಂಡ ಚೆನ್ನಯ್ಯ ಜೊತೆ ಜಗಳ ಕೂಡ ಮಾಡುತ್ತಿದ್ದಳು.'ಮದುವೆಗೆ ಮಕ್ಕಳು ಅಡ್ಡಿಯಾದರೆ ಅವರನ್ನು ಕೊಂದು ಮುಗಿಸುತ್ತೇನೆ' ಇದೇ ಸಂದರ್ಭದಲ್ಲಿ ಶಿವಕುಮಾರ್ ನನ್ನು ರಜಿತಾ ಮದುವೆಯಾಗುವಂತೆ ಕೇಳಿದ್ದಾರೆ. ಈ ವೇಳೆ ಶಿವಕುಮಾರ್ ನೀನು ನಿನ್ನ ಗಂಡ ಮತ್ತು ಮಕ್ಕಳನ್ನು ಬಿಟ್ಟು ಬಂದರೆ ನಾನು ನಿನ್ನನು ಮದುವೆಯಾಗುತ್ತೇನೆ ಎಂದು ಹೇಳಿದ್ದಾನೆ. ಈ ವೇಳೆ ಇದಕ್ಕೆ ರಜಿತಾ ಉತ್ತರಿಸಿದ್ದು, ನಮ್ಮ ಮದುವೆಗೆ ಮಕ್ಕಳೇ ಅಡ್ಡಿಯಾದರೇ ಅವರನ್ನೇ ಕೊಂದು ಮುಗಿಸುತ್ತೇನೆ ಎಂದು ಹೇಳಿದ್ದಾಳೆ. ಇದಕ್ಕೆ ಶಿವಕುಮಾರ್ ಕೂಡ ಒಪ್ಪಿಗೆ ಸೂಚಿಸಿ ಮಾರ್ಚ್ 27ರಂದು ಮಕ್ಕಳ ಕೊಲ್ಲಲು ಸಂಚು ರೂಪಿಸಿದ್ದ. ಅದರಂತೆ ಮಾರ್ಚ್ 27 ರ ಸಂಜೆ ರಜಿತಾ ಪತಿ ಚೆನ್ನಯ್ಯ ಮನೆಯಿಂದ ಕೆಲಸಕ್ಕೆ ಹೊರಗಡೆ ಹೋದಾಗ ರಜಿತಾ ತನ್ನ ಮೂರು ಮಕ್ಕಳನ್ನು ಉಸಿರುಗಟ್ಟಿಸಿ ಕೊಂದು ಹಾಕಿದ್ದಾಳೆ. ಮೊದಲು ಮೊದಲು ತನ್ನ ಹಿರಿಯ ಮಗ ಸಾಯಿಕೃಷ್ಣ, ನಂತರ ಅವಳ ಮಗಳು ಮಧುಪ್ರಿಯಾ ಮತ್ತು ಅವಳ ಕಿರಿಯ ಮಗ ಗೌತಮ್ ಕುತ್ತಿಗೆ ಟವಲ್ ಬಿಗಿದು ಅವರ ಬಾಯಿಗೆ ಬಟ್ಟೆ ತುರಿಕಿ ಕಿರುಚಾಡದಂತೆ ಮಾಡಿ ಕೊಂದು ಮುಗಿಸಿದ್ದಾಳೆ. ಕೊಲೆ ಮಾಡಿ ತಪ್ಪಿಸಿಕೊಳ್ಳಲು ಹೈಡ್ರಾಮಾ ಇನ್ನು ಮಕ್ಕಳ ಕೊಲೆ ಪ್ರಕರಣವನ್ನು ಮುಚ್ಚಿಹಾಕಲು ದೂರ್ತ ಮಹಿಳೆ ರಜಿತಾ ದೊಡ್ಡ ಹೈಡ್ರಾಮಾವನ್ನೇ ರಚಿಸಿದ್ದಳು. ಕೆಲಸಕ್ಕೆ ಹೋದ ತನ್ನ ಗಂಡ ಮನೆಗೆ ಬರುತ್ತಲೇ ತನಗೆ ಅತೀವ ಹೊಟ್ಟೆ ನೋವು.. ರಾತ್ರಿ ಕಬ್ಬು ತಿಂದ ಬಳಿಕ ತೀವ್ರ ಹೊಟ್ಟೆನೋವು ಬಂದಿದೆ ಎಂದು ಡ್ರಾಮಾ ಮಾಡಿದ್ದಾಳೆ.

# ರಾಷ್ಟ್ರೀಯ ಹೆದ್ದಾರಿ-50ರ ಸರ್ವಿಸ್ ರಸ್ತೆ ಆಮೆಗತಿ ಕಾರ್ಯಕ್ಕೆ ಡಿ.ಸಿ. ಅತೃಪ್ತಿ:

## ಮಳೆಗಾಲ ಮುಗಿಯೊದರೊಳಗೆ ಕೆಲಸ ಪೂರ್ಣಗೊಳಿಸಲು ಗುತ್ತಿಗೆದಾರನಿಗೆ ತಾಕೀತು

ಕಲಬುರಗಿ,ಏ.5 ಕಲಬುರಗಿ ನಗರದ ರಾಮ ಮಂದಿರ ದಿಂದ ಹುಮನಾಬ್ ರಿಂಗ್ ರಸ್ತೆ ವರೆಗಿನ ರಾಷ್ಟ್ರೀಯ ಹೆದ್ದಾರಿ–50ರ ಸೇವಾ ರಸ್ತೆಯ ಆಮೆಗತಿ ಕಾರ್ಯಕ್ಕೆ ತೀವ್ರ ಅತೃಪ್ತಿ ವ್ಯಕ್ತಪಡಿಸಿರುವ ಜಿಲ್ಲಾಧಿಕಾರಿ ಬಿ.ಫೌಜಿಯಾ ತರನ್ನುಮ್ ಅವರು, ಮಳೆಗಾಲ ಮುಗಿಯೊದೊಳಗೆ ರಸ್ತೆ ಕಾಮಗಾರಿ ಪೂರ್ಣಗೊಳಿಸುವಂತೆ ಗುತ್ತಿಗೆದಾರನಿಗೆ ತಾಕೀತು ಮಾಡಿದ್ದಾರೆ.

ಶುಕ್ರವಾರ ಈ ಸಂಬಂಧ ಇಲ್ಲಿನ ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ಸಂಬಂಧಿತ ಇಲಖೆಗಳ ಅಧಿಕಾರಿಗಳೊಂದಿಗೆ ಸಭೆ ನಡೆಸಿದ ಅವರು, ಇನ್ನು ಕಾಮಗಾರಿ ನಿಧಾನಗತಿ ಸಹಿಸಲ್ಲ. ಗುತ್ತಿಗೆದಾರರು ರಸ್ತೆ ಕಾಮಗಾರಿ ವೇಗವನ್ನು ಹೆಚ್ಚಿಸಬೇಕು. ಮಳೆಗಾಲ ಬರುವ ಮುನ್ನ ಇದು ಪೂರ್ಣಗೊಳಿಸಲು ಹಾಕಿಕೊಂಡಿರುವ ಕಾರ್ಯ ಯೋಜನೆಗಳ ಕುರಿತು ಸಮಗ್ರ ವರದಿ ಸಲ್ಲಿಸಬೇಕು ಎಂದು ಗುತ್ತಿಗೆದಾರನಿಗೆ ಜಿಲ್ಲಾಧಿಕಾರಿಗಳು ಸೂಚಿಸಿದರು.

ಸರ್ವಿಸ್ ರಸ್ತೆ ಪೂರ್ಣಗೊಳಿಸುವ ನಿಟ್ಟಿನಲ್ಲಿ ಪಾಲಿಕೆ, ಅರಣ್ಯ, ಕೆ.ಯು.ಐ.ಎಫ್.ಡಿ.ಸಿ., ಜೆಸ್ಕಾಂ, ಸಂಚಾರಿ ಪೊಲೀಸ್ ಸೇರಿದಂತೆ ಸಂಬಂಧಪಟ್ಟ ಎಲ್ಲಾ ಇಲಾಖೆಗಳ ಅಧಿಕಾರಿಗಳು ಪರಸ್ಪರ ಸಮನ್ವಯದಿಂದ ಕೆಲಸ ಮಾಡಿದಲ್ಲಿ ಈ ರಸ್ತೆ ಸಮಸ್ಯೆಗೆ ಪರಿಹಾರ ಸಿಗಲಿದೆ ಎಂದು ಡಿ.ಸಿ. ಅವರು ಒತ್ತಿ ಹೇಳಿದರು. ಸರ್ವಿಸ್ ರಸ್ತೆ ನಿರ್ಮಾಣಕ್ಕೆ ಸ್ಥಳದಲ್ಲಿ ಉದ್ಭವಿಸುವ ಅಡ್ಡಿ–ಆತಂಕಗಳನ್ನು ಸಂಬಂಧಪಟ್ಟ ಇಲಾಖೆಗಳು ನಿವಾರಣೆ ಮಾಡಬೇಕು. ಮಹಾನಗರ ಪಾಲಿಕೆ ಆಯುಕ್ತರು ನಿಯಮಿತವಾಗಿ ಇದರ ಪ್ರಗತಿ ಪರಿಶೀಲನೆ ನಡೆಸಬೇಕು. ಒಟ್ಟಾರೆ ರಸ್ತೆ ನಿರ್ಮಾಣಕ್ಕೆ ಎನ್.ಎಚ್.ಎ.ಐ ಮತ್ತು ಗುತ್ತಿಗೆದಾರನಿಗೆ ರಾಜ್ಯ ಸರ್ಕಾರದ ಸಂಬಂಧಪಟ್ಟ ಇಲಾಖೆಗಳು ಸಂಪೂರ್ಣವಾಗಿ ಸಹಕರಿಸಬೇಕು ಎಂದರು. ಎನ್.ಎಚ್.ಎ.ಐ ಯೋಜನಾ ನಿರ್ದೇಶಕ ಮಹೇಶ ಪಾಟೀಲ ಮಾತನಾಡಿ ಕಾಮಗಾರಿಗೆ ವೇಗ ನೀಡುವಂತೆ ಲಿಖಿತ ಮತ್ತು ಮೌಖಿಕವಾಗಿ ಹಲವು ಬಾರಿ ತಿಳಿಸಿದರು ಗುತ್ತಿಗೆದಾರರು ಕಾಮಗಾರಿಗೆ ವೇಗ ನೀಡುತ್ತಿಲ್ಲ ಎಂದಾಗ, ಗುತ್ತಿಗೆದಾರನಿಗೆ ನಿಯಮದಂತೆ ದಂಡ ಹಾಕಿ ಎಂದು ಡಿ.ಸಿ. ಸೂಚಿಸಿದರು.




ಸಭೆಯಲ್ಲಿ ಮಹಾನಗರ ಪಾಲಿಕೆ ಆಯುಕ್ತ ಅವಿನಾಶ ಶಿಂಧೆ, ಕೆ.ಯು.ಐ.ಡಿ.ಎಫ್.ಸಿ. ಅಧೀಕ್ಷಕ ಅಭಿಯಂತರರಾದ ಆರ್.ಪಿ.ಜಾಧವ್, ನಗರ ಪೊಲಿಸ ಉಪ ಆಯುಕ್ತ ಪ್ರವೀಣ ಎಚ್. ನಾಯಕ್, ಜೆಸ್ಕಾಂ ಇ.ಇ. ವೀರಭದ್ರಪ್ಪ, ಕೆ.ಕೆ.ಆರ್.ಟಿ.ಸಿ. ಸಂಸ್ಥೆಯ ಕಲಬುರಗಿ ವಿಭಾಗ–1ರ ವಿಭಾಗೀಯ ನಿಯಂತ್ರಣಾಧಿಕಾರಿ ಚಂದು ಕೆ., ಡಿ.ಟಿ.ಓ ಐ.ಜಿ.ಹೊಸಮನಿ ಸೇರಿದಂತೆ ಇತರೆ ಅಧಿಕಾರಿಗಳಿದ್ದರು.

ಜಿಲ್ಲಾಧಿಕಾರಿ ಬಿ.ಫೌಜಿಯಾ ತರನ್ನುಮ್ ಅವರು ಇದಕ್ಕು ಮುನ್ನ ಅಧಿಕಾರಿಗಳೊಂದಿಗೆ ರಾಮ ಮಂದಿರ ದಿಂದ ಹುಮನಾಬಾದ್ ರಿಂಗ್ ರಸ್ತೆ ವರೆಗೆ ಸಂಚರಿಸಿ ನೆನೆಗುದ್ದಿಗೆ ಬಿದ್ದಿರುವ ಸರ್ವಿಸ್ ರಸ್ತೆ ಕಾಮಗಾರಿಯನ್ನು ಪರಿಶೀಲಿಸಿದರು. ಲೋಕೋಪಯೋಗಿ ಇಲಾಖೆಯ ಇ.ಇ. ಸುಭಾಷ ಬಿರಾದಾರ, ಕಲಬುರಗಿ ತಹಶೀಲ್ದಾರ ಕೆ. ಆನಂದಶೀಲ್ ಇದ್ದರು.

# ಮೇ ಮೊದಲ ವಾರ ಎಸ್‌ಎಸ್‌ಎಲ್‌ಸಿ ಫಲಿತಾಂಶ

ಬೆಂಗಳೂರು.ಏ5:ರಾಜ್ಯದಲ್ಲಿ ಎಸ್‌ಎಸ್‌ಎಲ್ ಸಿ ಪರೀಕ್ಷೆಗಳು ಶುಕ್ರವಾರ ಮುಕ್ತಾಯಗೊಂಡಿದ್ದು, ಏಪ್ರಿಲ್ 15ರಿಂದ ರಾಜ್ಯಾದ್ಯಂತ ಸುಮಾರು 240ಕ್ಕೂ ಹೆಚ್ಚು ಕೇಂದ್ರಗಳಲ್ಲಿ ಮೌಲ್ಯಮಾಪನ ನಡೆಯಲಿದೆ.

ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯನಿರ್ಣಯ ಮಂಡಳಿ ಮಾ.21ರಿಂದ ಆರಂಭಿಸಿದ ಎಸ್ಸೆಸ್ಸೆಲ್ಸಿ ಪರೀಕ್ಷೆ ಏ.4ಕ್ಕೆ ಮುಕ್ತಾಯಗೊಂಡಿವೆ. ಏ.11ರಿಂದ ಕೋಡಿಂಗ್ ಹಾಗೂ ಡಿಕೋಡಿಂಗ್ ಪ್ರಕ್ರಿಯೆ ನಡೆದ ನಂತರ ಏ.15ರಿಂದ ಉತ್ತರ ಪತ್ರಿಕೆಗಳ ಮೌಲ್ಯಮಾಪನ ಕಾರ್ಯ ಆರಂಭವಾಗಲಿದೆ.

ಒಟ್ಟು 2818 ಕೇಂದ್ರಗಳಲ್ಲಿ 8.96 ಲಕ್ಷ ವಿದ್ಯಾರ್ಥಿಗಳು ಈ ಬಾರಿ ಪರೀಕ್ಷೆ ಬರೆದಿದ್ದಾರೆ. 6 ವಿಷಯಗಳಿಂದ ವಿದ್ಯಾರ್ಥಿಗಳ 55 ಲಕ್ಷಕ್ಕೂ ಹೆಚ್ಚು ಉತ್ತರ ಪತ್ರಿಕೆಗಳ ಮೌಲ್ಯಮಾಪನ ಕಾರ್ಯ ನಡೆಯಲಿದೆ. ಮೌಲ್ಯಮಾಪನ ಕಾರ್ಯಕ್ಕೆ ಈ ಬಾರಿ 75 ಸಾವಿರಕ್ಕೂ ಹೆಚ್ಚು ಶಿಕ್ಷಕರನ್ನು ನಿಯೋಜಿಸಲಾಗಿದೆ. ಮೌಲ್ಯಮಾಪನ ಕಾರ್ಯಕ್ಕೆ ನಿಯೋಜಿಸಿರುವ ಎಲ್ಲ ಶಿಕ್ಷಕರೂ ಕಡ್ಡಾಯವಾಗಿ ಹಾಜರಾಗಬೇಕು ಎಂದು ಸೂಚಿಸಲಾಗಿದೆ.

ಇನ್ನೂ ಮೌಲ್ಯಮಾಪನ ಮುಕ್ತಾಯವಾದ ನಂತರ 10ನೇ ತರಗತಿ ಫಲಿತಾಂಶ ಮಂಡಳಿಯಿಂದ ಅಧಿಕೃತವಾಗಿ ಪ್ರಕಟಣೆ ಆಗಲಿದೆ ಇದಕ್ಕೆ ದಿನಾಂಕವನ್ನು ಕೂಡ ಮಂಡಳಿಯು ಅಧಿಕೃತವಾಗಿ ಪ್ರಕಟಿಸುತ್ತದೆ ಸಾಮಾನ್ಯವಾಗಿ ಮೌಲ್ಯಮಾಪನ ಪ್ರಕ್ರಿಯೆಯು ಸಂಪೂರ್ಣಗೊಂಡ ಬಳಿಕ ಎರಡು ವಾರದ ಒಳಗಾಗಿ ಫಲಿತಾಂಶ ಪ್ರಕಟಣೆಯಾಗುವ ಸಾಧ್ಯತೆ ಇದೆ ಎನ್ನಲಾಗಿದೆ. ಕಳೆದ ಬಾರಿ 10ನೇ ತರಗತಿ ಪರೀಕ್ಷಾ ಫಲಿತಾಂಶ ಮೇ ತಿಂಗಳಿನಲ್ಲಿ ಪ್ರಕಟಣೆಯಾಗಿ–ತ್ತು. ಈ ವರ್ಷವೂ ಕೂಡ 2025 ನೇ ಮೇ ಮೊದಲ ವಾರದಲ್ಲಿ ಪ್ರಕಟಣೆ ಮಾಡುವ ಸಾಧ್ಯತೆ ಇದೆ ಎಂದು ಹೇಳಲಾಗಿದೆ.




Printed, Published and Owned by: Ramesh Reddy and Printed at Metropolitan Media Company Ltd., Plot No.224, in Sy.No.41/2, 41/B & 42, Kapnoor 2nd stage, Industrial Area, Kalburagi-585104. Published at Sy.No. 466, TMC No. 22-405, First Floor, Gada Complex, Opp. Inspection Bungalow, Humnabad-585330.
Editor: Ramesh Reddy, Office Ph. No: +91 9449732000.